ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸತ್ಯಮೇವ ಜಯತೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ-13 | ISSUE - 67 ಸಂಚಿಕೆ- 67 | PAGE-8 ಪುಟ-8 | ಶುಕ್ರವಾರ 18.04.2025 | RS.2/- ಬೆಲೆ 2/-

## ಜಾತಿಗಣತಿ:ನಿರ್ಧಾರಕ್ಕೆ ಬಾರದ ಸಂಪುಟ ಸಭೆ

## ಮೇ.2 ರ ಸಂಪುಟ ಸಭೆಯಲ್ಲಿ ವಿಸ್ತೃತ ಚರ್ಚೆ:ರೆಡ್ಡಿ



ಮಲ್ಲಮ ನುಡಿ ವಾರ್ತೆ ಬೆಂಗಳೂರು:ಏ.17: ಜಾತಿ ಗಣತಿ(ಸಾಮಾಜಿಕ, ಆರ್ಥಿಕ ಮತ್ತು ಶೈಕ್ಷಣಿಕ ಸಮೀಕ್ಷೆ) ವರದಿ ರಾಜ್ಯದಲ್ಲಿ ವಿವಾದದ ಕಿಡಿ ಹೊತ್ತಿಸಿದ್ದು, ಈ ಕುರಿತು ಚರ್ಚಿಸಲು ಗುರುವಾರ ಕರೆಯಲಾಗಿದ್ದ ವಿಶೇಷ ಸಚಿವ ಸಂಪುಟವು ಯಾವುದೇ ಪ್ರಮುಖ ನಿರ್ಧಾರವಿಲ್ಲದೆ ಮುಕ್ತಾಯಗೊಂಡಿದೆ.

ಇಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ನೇತೃತ್ವದಲ್ಲಿ ನಡೆದ ವಿಶೇಷ ಸಚಿವ ಸಂಪುಟ ಸಭೆಯ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವ ರಾಮಲಿಂಗಾ ರೆಡ್ಡಿ, ಜಾತಿ ಗಣತಿ ವರದಿ ಬಗ್ಗೆ ಮುಂದಿನ ಸಂಪುಟ ಸಭೆಯಲ್ಲಿ ವಿಸ್ತೃತ ಚರ್ಚೆ ನಡೆಸಲಾಗುವುದು. ಅದಕ್ಕು ಮುನ್ನ ಲಿಖಿತವಾಗಿ ಅಥವಾ ಮೌಖಿಕವಾಗಿ ತಮ್ಮ ಅಭಿಪ್ರಾಯವನ್ನು ತಿಳಿಸುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸಚಿವರಿಗೆ ಕೇಳಿಕೊಂಡಿದ್ದಾರೆ ಎಂದು ಹೇಳಿದರು.

ವಿವಿಧ ಸಮುದಾಯಗಳು, ವಿಶೇಷವಾಗಿ ಕರ್ನಾಟಕದ ಎರಡು ಪ್ರಬಲ ಸಮುದಾಯಗಳಾದ ಒಕ್ಕಲಿಗರು ಮತ್ತು ವೀರಶೈವ-ಲಿಂಗಾಯತರು ಈ ಜಾತಿ ಗಣತಿ ವರದಿಗೆ ತೀವ್ರ ವಿರೋಧ ವ್ಯಕ್ತಪಡಿಸಿದ್ದಾರೆ ಮತ್ತು ಇದನ್ನು "ಅವೈಜ್ಞಾನಿಕ" ಎಂದು ಕರೆದಿದ್ದಾರೆ. ಅಲ್ಲದೆ ವರದಿಯನ್ನು ತಿರಸ್ಕರಿಸಬೇಕು ಮತ್ತು ಹೊಸ ಸಮೀಕ್ಷೆ ನಡೆಸಬೇಕೆಂದು ಒತ್ತಾಯಿಸಿದ್ದಾರೆ.

ಸಭೆಯಲ್ಲಿ ಸಚಿವರು ತಮ್ಮ ತಮ್ಮ ಅಭಿಪ್ರಾಯಗಳನ್ನು ಹೇಳಿದ್ದಾರೆ. ಯಾರೂ ಸಹ ಜಾತಿ ಗಣತಿ ವರದಿಯನ್ನು ವಿರೋಧಿಸಿಲ್ಲ ಎಂದು ಸಚಿವ ಪ್ರಿಯಾಂಕ್ ಖರ್ಗೆ ಅವರು ಹೇಳಿದ್ದಾರೆ.

ಜಾತಿ ಗಣತಿ ವರದಿಯನ್ನು ಒಪ್ಪಿಕೊಳ್ಳಬೇಕೋ ಅಥವಾ ನಿರಾಕರಣೆ ಮಾಡಬೇಕೋ ಎಂಬ ನಿಟ್ಟಿನಲ್ಲಿ ಮುಂದಿನ ಸಚಿವ ಸಂಪುಟ ಸಭೆಯಲ್ಲಿ ತೀರ್ಮಾನ ಆಗಲಿದೆ ಎಂದು ಹಲವು ಸಚಿವರು ತಿಳಿಸಿದ್ದಾರೆ. ಹೀಗಾಗಿ ಮೇ 2 ರಂದು ನಡೆಯುವ ಮುಂದಿನ ಸಚಿವ ಸಂಪುಟದಲ್ಲಿ ಮತ್ತೆ ಜಾತಿ ಗಣತಿ ವರದಿ ಜಾರಿ ಬಗ್ಗೆ ಚರ್ಚೆ ನಡೆಯಲಿದೆ.

## ವಕ್ಫ್ ನೇಮಕಾತಿಗೆ ತಡೆ; ಮುಂದಿನ ವಿಚಾರಣೆಯವರೆಗೆ ಯಥಾಸ್ಥಿತಿ ಕಾಪಾಡಲು ಸುಪ್ರೀಂ ಕೋರ್ಟ್ ಆದೇಶ



ಮಲ್ಲಮ್ಮನುಡಿವಾರ್ತೆನವದೆಹಲಿ:ಏ.17: ಮುಂದಿನ ವಿಚಾರಣೆಯವರೆಗೆ ವಕ್ಫ್ ಮಂಡಳಿಗೆ ಮುಸ್ಲಿಮೇತರರನ್ನು ನೇಮಕ ಮಾಡುವಂತಿಲ್ಲ ಮತ್ತು ವಕ್ಫ್ ಕಾಯ್ದೆ ವಿಚಾರದಲ್ಲಿ ಯಥಾಸ್ಥಿತಿ ಕಾಪಾಡುವಂತೆ ಸುಪ್ರೀಂ ಕೋರ್ಟ್ ಗುರುವಾರ ಆದೇಶ ನೀಡಿದೆ.

ವಕ್ಫ್ (ತಿದ್ದುಪಡಿ) ಕಾಯ್ದೆ 2025ರ ಸಾಂವಿಧಾನಿಕ ಸಿಂಧುತ್ವ ಪ್ರಶ್ನಿಸಿ ಸಲ್ಲಿಸಿರುವ ಹಲವು ಅರ್ಜಿಗಳ ವಿಚಾರಣೆಯನ್ನು ಸುಪ್ರೀಂ ಕೋರ್ಟ್ ಬುಧವಾರ ಪ್ರಾರಂಭಿಸಿದೆ.

ಇಂದು ಸಹ ವಿಚಾರಣೆ ಮುಂದುವರೆಸಿದ ಮುಖ್ಯನ್ಯಾಯಮೂರ್ತಿ ಸಂಜೀವ್ ಖನ್ನಾ ಮತ್ತು ನ್ಯಾಯಮೂರ್ತಿಗಳಾದ ಸಂಜಯ್ ಕುಮಾರ್ ಹಾಗೂ ಕೆ.ವಿ. ವಿಶ್ವನಾಥನ್ ಅವರನ್ನೊಳಗೊಂಡ ತ್ರಿಸದಸ್ಯ ಪೀಠ, ಸಿಂಧುತ್ವ ಪ್ರಶ್ನಿಸಿದ ಅರ್ಜಿಗಳಿಗೆ ಪ್ರತಿಕ್ರಿಯಿಸಲು ಕೇಂದ್ರ

(2ನೇ ಪುಟ ನೋಡಿ)

## ಬೆಲೆ ಏರಿಕೆ ಕೋಪದಿಂದ 2028ರಲ್ಲಿ ಕಾಂಗ್ರೆಸ್ ಮತ್ತೆ ಅಧಿಕಾರಕ್ಕೆ :ಸಿಎಂ,ಡಿಸಿಎಂ ಭವಿಷ್ಯ



ಮಲ್ಲಮ್ಮನುಡಿವಾರ್ತೆಬೆಂಗಳೂರು:ಏ.17: ಬೆಲೆ ಏರಿಕೆ ವಿಚಾರವಾಗಿ ಬಿಜೆಪಿ ಮತ್ತು ಜೆಡಿಎಸ್ ವಿರುದ್ಧ ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ವಾಗ್ದಾಳಿ ನಡೆಸಿದ್ದು, ಬೆಲೆ ಏರಿಕೆ ವಿರುದ್ಧದ ಸಾರ್ವಜನಿಕರ ಕೋಪವು 2028ರಲ್ಲಿ ಕಾಂಗ್ರೆಸ್ ಅನ್ನು ಮತ್ತೆ ಅಧಿಕಾರಕ್ಕೆ ತರುತ್ತದೆ ಎಂದು ಭವಿಷ್ಯ ನುಡಿದರು. ಇತ್ತ ಮುಖ್ಯಮಂತ್ರಿ ಸಿದ್ದರಾಮಯ್ಯ ಕೂಡ ಬಿಜೆಪಿ ಮತ್ತು ಜೆಡಿಎಸ್‌ಗೆ ಪ್ರತಿಭಟಿಸುವ ನೈತಿಕ ಹಕ್ಕಿಲ್ಲ ಎಂದಿದ್ದಾರೆ.

ಇತ್ತೀಚೆಗೆ ಹಾಲಿನ ಬೆಲೆಯಲ್ಲಿ 4 ರೂ. ಹೆಚ್ಚಳ ಮಾಡಲಾಗಿದ್ದು,

(2ನೇ ಪುಟ ನೋಡಿ)

## ಮೇ 1ರಿಂದ ಜಿಪಿಎಸ್ ಆಧಾರಿತ ಟೋಲ್ ಸಂಗ್ರಹ ವ್ಯವಸ್ಥೆ ಜಾರಿ

ಮಲ್ಲಮ್ಮ ನುಡಿ ವಾರ್ತೆ ನವದೆಹಲಿ:ಏ.17: ಮೇ 1 ರಿಂದ ದೇಶದ ರಾಷ್ಟ್ರೀಯ ಹೆದ್ದಾರಿಗಳಲ್ಲಿ ರಸ್ತೆ ಪ್ರಯಾಣವು ಹೆಚ್ಚು ಸುಗಮವಾಗಲಿದೆ, ಫಾಸ್ಟ್ ಟ್ಯಾಗ್ ಗಳ ಬದಲು ಹೊಸ ಜಿಪಿಎಸ್ ಆಧಾರಿತ ಟೋಲ್ ಸಂಗ್ರಹ ವ್ಯವಸ್ಥೆಯನ್ನು ಪರಿಚಯಿಸಲಾಗುತ್ತಿದೆ.

ಜಾಗತಿಕ ಸಂಚರಣೆ ಉಪಗ್ರಹ ವ್ಯವಸ್ಥೆ ಏಪ್ರಿಲ್ 1 ರಿಂದ ಜಾರಿಗೆ ಬರುವ ನಿರೀಕ್ಷೆಯಿತ್ತು, ವಿಳಂಬವಾಗಿ ಈಗ ಮೇ 1ರಿಂದ ಜಾರಿಗೆ ಬರುವ ಸಾಧ್ಯತೆಯಿದೆ.ಈ ಬಗ್ಗೆ ಮಾತನಾಡಿರುವ ಕೇಂದ್ರ ರಸ್ತೆ ಮತ್ತು ಸಾರಿಗೆ ಸಚಿವ ನಿತಿನ್ ಗಡ್ಕರಿ, ಮುಂದಿನ 15 ದಿನಗಳಲ್ಲಿ ನಾವು ಹೊಸ ಟೋಲ್ ನೀತಿಯನ್ನು ತರುತ್ತಿದ್ದೇವೆ. ಟೋಲ್ ಪ್ಲಾಜಾಗಳಿಗಾಗಿ ನಿಲ್ಲಬೇಕಾಗಿಲ್ಲದ ಕಾರಣ ನಾವು ಸ್ಯಾಟಲೈಟ್ ಟೋಲ್ ವ್ಯವಸ್ಥೆಯನ್ನು ಪ್ರಾರಂಭಿಸುತ್ತಿದ್ದೇವೆ ಎಂದರು.

GNSS ಎಂದರೇನು ಮತ್ತು ಅದು ಹೇಗೆ ಕಾರ್ಯನಿರ್ವಹಿಸುತ್ತದೆ?

ಗ್ಲೋಬಲ್ ನ್ಯಾವಿಗೇಷನ್ ಸ್ಯಾಟಲೈಟ್ ಸಿಸ್ಟಮ್ (GNSS) ಒಂದು ಉಪಗ್ರಹ ಆಧಾರಿತ ಟೋಲ್ ಸಂಗ್ರಹ ವ್ಯವಸ್ಥೆಯಾಗಿದ್ದು, ಇದರಲ್ಲಿ ಒಬ್ಬ ವ್ಯಕ್ತಿಯು ಪ್ರಯಾಣಿಸಿದ ದೂರವನ್ನು ಆಧರಿಸಿ ಅವರ ಬ್ಯಾಂಕ್ ಖಾತೆಗಳಿಂದ ನೇರವಾಗಿ ಹಣವನ್ನು ಕಡಿತಗೊಳಿಸಲಾಗುತ್ತದೆ. ಕೇಂದ್ರ ಸಚಿವ ನಿತಿನ್ ಗಡ್ಕರಿ ಅವರ ಪ್ರಕಾರ, ಹೊಸ ವ್ಯವಸ್ಥೆಯು ಸಮಯ ಮತ್ತು ವೆಚ್ಚ-ಪರಿಣಾಮಕಾರಿ ಮತ್ತು ವೇಗವಾಗಿರುತ್ತದೆ.

GNSS, FASTag ಗಿಂತ ಹೇಗೆ ಭಿನ್ನವಾಗಿದೆ?

FASTag ವ್ಯವಸ್ಥೆಯು ಸಾಂಪ್ರದಾಯಿಕ ನಗದು ಸಂಗ್ರಹ ವಿಧಾನಕ್ಕಿಂತ ವೇಗವಾಗಿದ್ದರೂ, ವಾಹನಗಳು ಟೋಲ್ ಬೂತ್‌ನಲ್ಲಿ ಹಲವೊಮ್ಮೆ ಕಾದು ನಿಲ್ಲಬೇಕಾಗುತ್ತದೆ. ಹಲವು ಬಾರಿ ವಿಶೇಷವಾಗಿ ಪೀಕ್ ಅವರ್ ಗಳಲ್ಲಿ ಇದು ದೀರ್ಘ ಸರತಿ ಸಾಲುಗಳಿಗೆ ಕಾರಣವಾಗುತ್ತದೆ.

ಆದಾಗ್ಯೂ, ಜಿಎನ್ ಎಸ್ ಎಸ್ ವ್ಯವಸ್ಥೆಯು ವಾಹನಗಳ ಸ್ಥಳಗಳನ್ನು ಪತ್ತೆಹಚ್ಚಲು ಉಪಗ್ರಹಗಳೊಂದಿಗೆ ಸಂವಹನ ನಡೆಸುವ ವರ್ಚುವಲ್ ಟೋಲ್ ಬೂತ್‌ಗಳೊಂದಿಗೆ ಕಾರ್ಯನಿರ್ವಹಿಸುತ್ತದೆ. ಟ್ರ್ಯಾಕ್ ಮಾಡಲಾದ ಸ್ಥಳದ ಪ್ರಕಾರ, ವಾಹನವು ಪ್ರಯಾಣಿಸಿದ ದೂರವನ್ನು ವಿಶ್ಲೇಷಣೆ ಮಾಡಿ ಟೋಲ್ ನ್ನು ಲೆಕ್ಕಹಾಕಲಾಗುತ್ತದೆ.

ಹೊಸ ವ್ಯವಸ್ಥೆಯು ಭೌತಿಕ ಟೋಲ್ ಬೂತ್‌ಗಳನ್ನು ಸ್ಥಾಪಿಸುವ ಅಗತ್ಯವನ್ನು ನಿವಾರಿಸುವುದಲ್ಲದೆ, ಬಳಕೆದಾರರಿಗೆ ಹೊಂದಿಕೊಳ್ಳುವ ಪಾವತಿ ಆಯ್ಕೆಗಳನ್ನು ಒದಗಿಸುತ್ತದೆ.

## ಲಾರಿ ಮುಷ್ಕರ ಅಂತ್ಯ





ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು:ಏ.17: ಸರ್ಕಾರ ಹಾಗೂ ಲಾರಿ ಮಾಲೀಕರ ನಡುವಿನ ಸಂಧಾನ ಯಶಸ್ವಿಯಾಗಿದ್ದು, ಲಾರಿ ಮಾಲೀಕರು ಮುಷ್ಕರವನ್ನು ವಾಪಾಸ್ ಪಡೆದಿದ್ದಾರೆ.

ಮೂರು ದಿನಗಳಿಂದ ನಡೆ-ಯುತ್ತಿದ್ದ ಲಾರಿ ಮುಷ್ಕರದ ಬಗ್ಗೆ ಮಾಧ್ಯಮಗಳೊಂದಿಗೆ ಸಾರಿಗೆ ಸಚಿವ ರಾಮಲಿಂಗ ರೆಡ್ಡಿ ಮಾತನಾಡಿದರು. ಲಾರಿ ಮಾಲೀಕರು ಜೊತೆ ಸಭೆ ನಡೆಸಿದ್ದೇವೆ. ಆರು ಬೇಡಿಕೆಗಳನ್ನು ಇಟ್ಟಿದ್ದಾರೆ. ಮೊದಲು ಆಯುಕ್ತರ ಜೊತೆ ಸಭೆ ನಡೆಸಿದ್ದರು. ಆನ್‌ಲೈನ್‌ನಲ್ಲಿ ದಂಡ ಕಟ್ಟುವ ವ್ಯವಸ್ಥೆಯನ್ನು ಮಾಡಲಿದ್ದೇವೆ ಎಂದರು.

ಒಟಿಎಸ್ ಮಾದರಿಯಲ್ಲಿ ದಂಡ ಪಾವತಿಗೆ ಅವಕಾಶ ಕಲ್ಪಿಸುವಂತೆ ಕೇಳಿದ್ದಾರೆ. ಅದನ್ನು ಸಿಎಂ ಗಮನಕ್ಕೆ ತರಲಿದ್ದೇವೆ ಹಾಗೂ ಟೋಲ್ ವಿಚಾರವನ್ನೂ ಸಿಎಂ ಗಮನಕ್ಕೆ ತರುತ್ತೇನೆ ಎಂದು ಹೇಳಿದರು.

ಲಾರಿ ಮಾಲೀಕರ ಸಂಘದ ಅಧ್ಯಕ್ಷ ಷಣ್ಮುಗಪ್ಪ ಪ್ರತಿಕ್ರಿಯಿಸಿ, ನಾಲ್ಕು ಪ್ರಮುಖ ಬೇಡಿಕೆ ಇತ್ತು. ಬಾರ್ಡರ್ ಚೆಕ್‌ಪೋಸ್ಟ್ ಸಮಸ್ಯೆಯನ್ನು 3 ತಿಂಗಳಲ್ಲಿ ಬಗೆಹರಿಸುವ ಭರವಸೆ ನೀಡಿದ್ದಾರೆ. ಡಿಸೇಲ್ ದರ 2023ರಲ್ಲಿ ಯದ್ವಾತದ್ವಾ ಏರಿಕೆ ಮಾಡಿದ್ದರು. ಇದನ್ನು ಇನ್ನೊಂದು ಬಾರಿ ಅಧ್ಯಯನ ಮಾಡುವುದಾಗಿ ಹೇಳಿದ್ದಾರೆ ಎಂದರು. ನೋ ಎಂಟ್ರಿ 5 ಗಂಟೆ ಮೇಲೆ ಬರಲು ಆಗದೇ ಇರುವುದರ ಬಗ್ಗೆಯೂ ಗಮನ ಹರಿಸುವುದಾಗಿ ಹೇಳಿದ್ದಾರೆ. ಪೊಲೀಸರ ಕಿರುಕುಳದ ಬಗ್ಗೆಯೂ ತಿಳಿಸಿದ್ದೇವೆ ಎಂದು ಸಚಿವರಿಗೆ ಕೃತಜ್ಞತೆ ಸಲ್ಲಿಸಿದರು. ಮೂರು ದಿನಗಳಿಂದ ನಡೆಯುತ್ತಿದ್ದ ಲಾರಿ ಮುಷ್ಕರದಿಂದ ದಿನಕ್ಕೆ 4,500 ಕೋಟಿ ರೂ.ಗಿಂತಲೂ ಅಧಿಕ ನಷ್ಟವಾಗಿದೆ ಎಂದು ಹೇಳಿದರು.

## ಕೋರ್ಟ್‌ಗಳು ಸೂಪರ್ ಪಾರ್ಲಿಮೆಂಟ್ ಆಗಬಾರದು: ಉಪರಾಷ್ಟ್ರಪತಿ ಧನಕರ್



ಮಲ್ಲಮ್ಮನುಡಿವಾರ್ತೆನವದೆಹಲಿ:ಏ.17: ಕೋರ್ಟ್‌ಗಳು ಸೂಪರ್ ಪಾರ್ಲಿಮೆಂಟ್ ಆಗಬಾರದು. ಈಗ ಕಾರ್ಯಾಂಗ ಮತ್ತು ಶಾಸಕಾಂಗದ ಜಾಗದಲ್ಲಿ ನ್ಯಾಯಾಂಗದ ಪ್ರವೇಶವಾಗುತ್ತಿರುವುದು ಆತಂಕಕಾರಿ ಬೆಳವಣಿಗೆ ಎಂದು ಉಪರಾಷ್ಟ್ರಪತಿ ಜಗದೀಪ್ ಧನಕರ್ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಉಪರಾಷ್ಟ್ರಪತಿಗಳ ಎನ್‌ಕ್ಲೇವ್‌ನಲ್ಲಿ ರಾಜ್ಯಸಭಾ ಇಂಟರ್ನ್‌ಗಳ ಆರನೇ ಬ್ಯಾಚ್ ಉದ್ದೇಶಿಸಿ ಮಾತನಾಡಿದ ಅವರು, ರಾಷ್ಟ್ರಪತಿಗಳಿಗೆ ಕೋರ್ಟ್ ನಿರ್ದೇಶನ ನೀಡಲು ಸಾಧ್ಯವಿಲ್ಲ. ಆದರೆ ಇತ್ತೀಚಿನ ತೀರ್ಪಿನ ಮೂಲಕ ರಾಷ್ಟ್ರಪತಿಗಳಿಗೆ ನಿರ್ದೇಶನ ನೀಡಲಾಗಿದೆ. ನಾವು ಎಲ್ಲಿಗೆ ಹೋಗುತ್ತಿದ್ದೇವೆ? ದೇಶದಲ್ಲಿ ಏನಾಗುತ್ತಿದೆ ಎಂದು ಧನಕರ್ ಕಳವಳ ವ್ಯಕ್ತಪಡಿಸಿದರು.

ನ್ಯಾಯಾಧೀಶರು ಭಾರತದ ರಾಷ್ಟ್ರಪತಿಗಳಿಗೆ ನಿರ್ದೇಶಿಸುವ ಪರಿಸ್ಥಿತಿಯನ್ನು ನಾವು ಹೊಂದಲು ಸಾಧ್ಯವಿಲ್ಲ. ಈ ರೀತಿಯ ನಿರ್ದೇಶನವು ರಾಷ್ಟ್ರದ ಅತ್ಯುನ್ನತ ಕಚೇರಿಯ ಸಾಂವಿಧಾನಿಕ ಅಧಿಕಾರವನ್ನು ದುರ್ಬಲಗೊಳಿಸುತ್ತದೆ ಎಂದು ಅಭಿಪ್ರಾಯಪಟ್ಟರು. ಸಂವಿಧಾನವು ನ್ಯಾಯಾಂಗಕ್ಕೆ ವಿಧಿ 145(3) ಅಡಿಯಲ್ಲಿ ಕಾನೂನನ್ನು ವ್ಯಾಖ್ಯಾನಿಸುವ ಅಧಿಕಾರವನ್ನು ನೀಡುತ್ತದೆ. ಸಂವಿಧಾನಿಕ ಪೀಠದಲ್ಲಿ ಐದು ಅಥವಾ ಅದಕ್ಕಿಂತ ಹೆಚ್ಚು ನ್ಯಾಯಾಧೀಶರು ಇರಬೇಕಾಗುತ್ತದೆ. ಆದರೆ ನ್ಯಾಯಾಲಯಗಳು ರಾಷ್ಟ್ರಪತಿಗಳಿಗೆ ನಿರ್ದೇಶನಗಳನ್ನು ನೀಡಲು ಅಧಿಕಾರ ನೀಡುವುದಿಲ್ಲ ಎಂದು ಉಪರಾಷ್ಟ್ರಪತಿ ಹೇಳಿದರು.

ಮಸೂದೆಗಳ ಮೇಲಿನ ನಿರ್ಧಾರಗಳು ಆಳವಾದ ಚಿಂತನೆ ಮತ್ತು ಸಮಾಲೋಚನೆಯನ್ನು ಒಳಗೊಂಡಿರುತ್ತವೆ. ಇಂತಹ ವಿಷಯಗಳಲ್ಲಿ ಗಡುವು ವಿಧಿಸುವುದು ಸರಿಯಲ್ಲ ಎಂದು ತಿಳಿಸಿದರು.

ಏನಿದು ಕೇಸ್? ಶಾಸನಸಭೆ ಅಂಗೀಕರಿಸಿದ ಮಸೂದೆಗಳಿಗೆ ಅಂಕಿತ ಹಾಕುವ ವಿಚಾರವಾಗಿ ರಾಷ್ಟ್ರಪತಿ ಹಾಗೂ ರಾಜ್ಯಪಾಲರ ಅಧಿಕಾರಕ್ಕೆ ಸುಪ್ರೀಂ ಕೋರ್ಟ್ ಡೆಡ್‌ಲೈನ್ ವಿಧಿಸಿ ತೀರ್ಪು ಪ್ರಕಟಿಸಿತ್ತು. ಪರಿಶೀಲನೆಗಾಗಿ ರಾಜ್ಯಪಾಲರಿಂದ ಬಂದ ಮಸೂದೆಗಳ ವಿಚಾರವಾಗಿ ಮೂರು ತಿಂಗಳ ಅವಧಿಯಲ್ಲಿ ತೀರ್ಮಾನ ಕೈಗೊಳ್ಳಬೇಕು ಎಂದು ರಾಷ್ಟ್ರಪತಿಯವರಿಗೆ ಸುಪ್ರೀಂ ಕೋರ್ಟ್ ಕಾಲಮಿತಿ ನಿಗದಿ ಮಾಡಿ ಏಪ್ರಿಲ್ 8 ರಂದು ಆದೇಶ ಪ್ರಕಟಿಸಿತ್ತು.

ರಾಜ್ಯಪಾಲರು ರಾಷ್ಟ್ರಪತಿಯವರ ಪರಿಶೀಲನೆಗಾಗಿ ಯಾವ ದಿನಾಂಕಕ್ಕೆ ಮಸೂದೆಯನ್ನು ಕಳುಹಿಸಲಾಗಿತ್ತೋ, ಆ ದಿನಾಂಕದಿಂದ ಅನ್ವಯವಾಗುವಂತೆ ಮೂರು ತಿಂಗಳ ಅವಧಿಯಲ್ಲಿ ತೀರ್ಮಾನ ತೆಗೆದುಕೊಳ್ಳಬೇಕು ಎಂದು ಕೋರ್ಟ್ ರಾಷ್ಟ್ರಪತಿಯವರಿಗೆ ಹೇಳಿರುವುದು ಇದೇ ಮೊದಲು. ನ್ಯಾಯಮೂರ್ತಿ ಜೆ.ಬಿ. ಪಾರ್ದಿವಾಲಾ ಮತ್ತು ನ್ಯಾಯಮೂರ್ತಿ ಮಹಾದೇವನ್ ಅವರನ್ನೊಳಗೊಂಡ ಪೀಠವು ತಮಿಳುನಾಡು ರಾಜ್ಯ ಸರ್ಕಾರ ತಿ ರಾಜ್ಯಪಾಲ ರವಿ ವಿರುದ್ಧದ ಪ್ರಕರಣದ ವಿಚಾರಣೆ ನಡೆಸಿ ಈ ಮಹತ್ವದ ತೀರ್ಪು ಪ್ರಕಟಿಸಿತ್ತು.

## ಕಾಲು ಬಾಯಿ ಜ್ವರದ ಲಸಿಕಾ ಕಾರ್ಯಕ್ರಮಕ್ಕೆ ತಯಾರಿ ಮಾಡಿಕೊಳ್ಳಲು ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಸೂಚನೆ



ಮಲ್ಲಮ್ಮ ನುಡಿ ವಾರ್ತೆ ಬೀದರ: ಏ.17. ಜಿಲ್ಲಾದ್ಯಂತ ಏಪ್ರಿಲ್.26 ರಿಂದ ಜೂನ್.4 ರವರೆಗೆ ಹಮ್ಮಿಕೊಳ್ಳಲಾದ ಜಾನುವಾರುಗಳಿಗೆ ಕಾಲು ಬಾಯಿ ಜ್ವರದ ಲಸಿಕಾ ಕಾರ್ಯಕ್ರಮಕ್ಕೆ ಎಲ್ಲಾ ರೀತಿಯ ತಯಾರಿ ಮಾಡಿಕೊಳ್ಳಲು ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಅವರು ಸೂಚನೆ ನೀಡಿದರು.

ಅವರು ಗುರುವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಕೇಂದ್ರ ಪುರಸ್ಕೃತ ಓಂಆಅಕ-ಈಒಆ-ಅಕ 7ನೇ ಸುತ್ತಿನ ಜಾನುವಾರುಗಳಿಗೆ ಸಾಮೂಹಿಕ ಲಸಿಕಾ ಕಾರ್ಯಕ್ರಮ ಅನುಷ್ಠಾನದ ಜಿಲ್ಲಾ ಮಟ್ಟದ ಪರಿಶೀಲನಾ ಮತ್ತು ನಿರ್ವಹಣೆ ಸಮಿತಿ ಸಭೆಯನ್ನುದ್ದೇಶಿಸಿ ಮಾತನಾಡಿದರು.

ಗ್ರಾಮ ಪಂಚಾಯಿತಿ ಪಿಡಿಓ ಮೂಲಕ ಹಾಗೂ ನಗರಗಳಲ್ಲಿ ಆಡಿಯೋ ಕ್ಲಿಪ್ ಮೂಲಕ ಲಸಿಕೆ ಬಗ್ಗೆ ಪ್ರಚಾರ ನೀಡಬೇಕು ಎಂದು ತಿಳಿಸಿದರು.

ಅದೇ ರೀತಿ ಪಶು ಸಖಿಯರು, ಅಂಗನವಾಡಿ ಕಾರ್ಯಕರ್ತೆಯರು ಮತ್ತು ಆಶಾ ಕಾರ್ಯಕರ್ತೆಯರು ಲಸಿಕೆ ಬಗ್ಗೆ ಜನರಿಗೆ ಅರಿವು ಮೂಡಿಸಬೇಕು ಎಂದು ತಿಳಿಸಿದರು.

ಈ ಸಭೆಯಲ್ಲಿ ಪಶು ಪಾಲನಾ ಮತ್ತು ಪಶುವೈದ್ಯಸೇವಾ ಇಲಾಖೆಯ ಉಪನಿರ್ದೇಶಕರಾದ ನರಸಪ್ಪ ಎ.ಡಿ., ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರಾದ ಶ್ರೀಧರ ಎಮ್.ಎಚ್,

ಜಿಲ್ಲೆಯ ಎಲ್ಲಾ ತಾಲೂಕಿನ ಮುಖ್ಯ ಪಶುವೈದ್ಯಾಧಿಕಾರಿಗಳು ಸೇರಿದಂತೆ ಜಿಲ್ಲಾ ಹಾಗೂ ತಾಲೂಕು ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

## ಕುಡಿಯುವುದಕ್ಕೆ ನೀರು, ತಲೆ ಮೇಲೆ ಸೂರು- ಹಸಿದಾಗ ಅನ್ನ, ಬದುಕಿಗೆ ಶಿಕ್ಷಣ ನೀಡುವುದು ಕಾಂಗ್ರೆಸ್ ಮಾತ್ರ




ಮಲ್ಲಮ್ಮನುಡಿ ವಾರ್ತೆ ಬೀದರ.ಏ. 17 : ಕುಡಿಯುವುದಕ್ಕೆ ನೀರು, ತಲೆ ಮೇಲೆ ಸೂರು, ಹಸಿದಾಗ ಅನ್ನ, ಬದುಕಿಗೆ ಶಿಕ್ಷಣ ಇವುಗಳನ್ನು ನೀಡುವುದೇ ನಮ್ಮ ಕಾಂಗ್ರೆಸ್ ಪಕ್ಷದ ವಾಗ್ದಾನ. ಇದೇ ನಮ್ಮ ಆಧಾರ ಸ್ತಂಭ ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ಅವರು ಹೇಳಿದರು.

ಬೀದರ್ ಜಿಲ್ಲಾ ಕೇಂದ್ರದ ನೆಹರು ಕ್ರೀಡಾಂಗಣದಲ್ಲಿ ನಡೆದ ರೂ.2025 ಕೋಟಿ ಮೊತ್ತದ ವಿವಿಧ ಅಭಿವೃದ್ಧಿ ಕಾಮಗಾರಿಗಳ ಶಂಕುಸ್ಥಾಪನೆ ಮತ್ತು ಬೆಂಗಳೂರಿಗೆ ನಾಗರಿಕ ವಿಮಾನಯಾನ ಸೇವೆ ಪುನರಾರಂಭಕ್ಕೆ ಚಾಲನೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ನನ್ನ ಹಾಗೂ ಬೋಸರಾಜು ಅವರ ಇಲಾಖೆ ಸೇರಿ ರೂ.22 ಸಾವಿರ ಕೋಟಿ ಅನುದಾನವಿದೆ. ಆದರೂ ಮೆಹಕರ್ ಏತ ನೀರಾವರಿ ಯೋಜನೆ ಹಾಗೂ ಔರಾದ್ ತಾಲ್ಲೂಕಿನ 36 ಕೆರೆಗಳನ್ನು ತುಂಬಿಸುವ ಯೋಜನೆಗೆ ಸಣ್ಣ ಹಾಗೂ ಬೃಹತ್ ನೀರಾವರಿ ಇಲಾಖೆಯಿಂದ ರೂ.1,322 ಕೋಟಿ ರೂಪಾಯಿ ಅನುದಾನ ನೀಡಲಾಗಿದೆ. ಎಂದು ಹೇಳಿದರು.

"ಕಲ್ಯಾಣ ಕರ್ನಾಟಕ ಭಾಗಕ್ಕೆ ಸುಮಾರು ರೂ.5 ಸಾವಿರ ಕೋಟಿ ಅನುದಾನ ಮೀಸಲಿಡಲಾಗಿದೆ. ನಮ್ಮ ಭಾಗದಲ್ಲಿಯೇ ಇಷ್ಟು ಕೆಲಸಗಳನ್ನು ಮಾಡಲು ಆಗುತ್ತಿಲ್ಲ. ಅಧಿಕಾರ ನಶ್ವರ, ನಮ್ಮ ಸಾಧನೆಗಳು ಅಜರಾಮರ, ಮತದಾರನೇ ಈಶ್ವರ. ಆದ ಕಾರಣಕ್ಕೆ ನಿಮ್ಮ ಋಣ ತೀರಿಸುವ ಕೆಲಸವನ್ನು ನಾವು ಮಾಡುತ್ತಿದ್ದೇವೆ" ಎಂದು ಹೇಳಿದರು.

"ಮಲ್ಲಿಕಾರ್ಜುನ ಖರ್ಗೆ

(2ನೇ ಪುಟ ನೋಡಿ)

## ಪತ್ರಕರ್ತ ರವಿ ಮೇಲೆ ಹಲ್ಲೆ ಮಾಡಿದ ಅರಣ್ಯ ಸಿಬ್ಬಂದಿಗಳ ಅಮಾನತ್ತು ಮಾಡಿ



ಬೀದರ. ಏ. 17 : ಪತ್ರಕರ್ತ ರವಿ ಭೂಸಂಡೆ ಅವರ ಮೇಲೆ ಹಲ್ಲೆ ಮಾಡಿದ ಅರಣ್ಯ ಅಧಿಕಾರಿ ಹಾಗೂ ಸಿಬ್ಬಂದಿಗಳನ್ನು ಸೇವೆಯಿಂದ ಅಮಾನತು ಮಾಡುವಂತೆ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ ಆಗ್ರಹಿಸಿದೆ.

ಗುರುವಾರ ಡಿ.ಸಿ ಕಚೇರಿಗೆ ತೆರಳಿ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಅವರ ಮುಖೇನ ರಾಜ್ಯದ ಅರಣ್ಯ, ಪರಿಸರ ಹಾಗೂ ಜೀವಶಾಸ್ತ್ರ ಸಚಿವರು

(2ನೇ ಪುಟ ನೋಡಿ)

## ಒಂದನೇ ಪುಟದಿಂದ

## ಅನ್ನ, ಬದುಕಿಗೆ ಶಿಕ್ಷಣ ನೀಡುವುದು ಕಾಂಗ್ರೆಸ್ ಮಾತ್ರ

ಅವರು, ಧರ್ಮ ಸಿಂಗ್ ಅವರು ಅಂದು ಕೇಂದ್ರ ಸರ್ಕಾರದ ಮೇಲೆ ಒತ್ತಡ ತಂದು 371 ಜೆ ಎನ್ನುವ ವರವನ್ನು ಈ ಭಾಗಕ್ಕೆ ನೀಡಿದರು. ಅದನ್ನು ಬಳಸಿಕೊಂಡು ಈ ಭಾಗಕ್ಕೆ ಸಾಕಷ್ಟು ಅನುದಾನ ನೀಡಲಾಗುತ್ತಿದೆ" ಎಂದರು.

"ರೂ.2,025 ಕೋಟಿ ಮೊತ್ತದ ಕಾರ್ಯಕ್ರಮಗಳ ಶಂಕುಸ್ಥಾಪನೆ ಹಮ್ಮಿಕೊಳ್ಳಲಾಗಿದೆ. ಬೀದರ್ ಜಿಲ್ಲೆಯ ಮೇಲೆ ನನಗೆ ಮೊದಲಿನಿಂದಲೂ ಅಪಾರವಾದ ವಿಶ್ವಾಸ. ವಿಧಾನಸಭಾ ಚುನಾವಣೆಯಲ್ಲಿ ಐದು ಸ್ಥಾನಗಳನ್ನು ಗೆಲ್ಲುತ್ತೇವೆ ಎನ್ನುವ ಆತ್ಮವಿಶ್ವಾಸವಿತ್ತು ಆದರೆ ಎರಡು ಸ್ಥಾನಗಳನ್ನು ಕಾಂಗ್ರೆಸ್ ಪಕ್ಷ ಗೆದ್ದಿತು" ಎಂದರು.

"ಮಲ್ಲಿಕಾರ್ಜುನ ಖರ್ಗೆ ಅವರು ಈ ಜಿಲ್ಲೆಯ ಇಬ್ಬರು ಶಾಸಕರನ್ನು ಸಚಿವರನ್ನಾಗಿ ಮಾಡಬೇಕು ಎಂದ ಕಾರಣಕ್ಕೆ ಅತ್ಯುತ್ತಮ ಸ್ಥಾನವನ್ನು ಅಲಂಕರಿಸಿದ್ದಾರೆ. ಲೋಕಸಭೆಯಲ್ಲಿ ಕಲ್ಯಾಣ ಕರ್ನಾಟಕ ಭಾಗದ ಎಲ್ಲಾ ಸ್ಥಾನಗಳಲ್ಲೂ ನಮ್ಮ ಕೈ ಹಿಡಿದವರು ನೀವು. ಯುವಕ ಸಾಗರ್ ಖಂಡ್ರೆ ಅವರನ್ನು ಸಂಸತ್ತಿಗೆ ಕಳುಹಿಸಿದ ನಿಮಗೆ ಕೋಟಿ ನಮನಗಳು" ಎಂದು ಹೇಳಿದರು.

"ಬುದ್ಧ, ಬಸವ ಮನೆಬಿಟ್ಟ, ಏಸುಕ್ರಿಸ್ತ ಶಿಲುಬೆಗೆ ಏರಿದ, ಅಂಬೇಡ್ಕರ್ ಅವರು ಜನಿಸಿದ, ಮಹಾತ್ಮ ಗಾಂಧಿ ಅವರು ಕಾಂಗ್ರೆಸ್ ಪಕ್ಷದ ನೇತೃತ್ವ ವಹಿಸಿಕೊಂಡ, ಸೋನಿಯಾ ಗಾಂಧಿ ಅವರು ಅಧಿಕಾರ ತ್ಯಾಗ ಮಾಡಿ ಮನಮೋಹನ್ ಸಿಂಗ್ ಅವರಿಗೆ ಪ್ರಧಾನಿ ಪಟ್ಟ ಬಿಟ್ಟುಕೊಟ್ಟ, ಬೀದರ್ ಜಿಲ್ಲೆಗೆ ಹೊಸರೂಪ ನೀಡುವ, ಅಭಿವೃದ್ಧಿಯ ಪರ್ವದ ಘಳಿಗೆಯಲ್ಲಿ ನಿಂತಿದ್ದೇವೆ" ಎಂದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಜಗಜ್ಯೋತಿ ಬಸವಣ್ಣನವರ ಮೇಲೆ ಅಪಾರ ಅಭಿಮಾನ. ಬಸವಣ್ಣನ ನಾಡಿನ ಅಭಿವೃದ್ಧಿಗೆ ಅಪಾರ ಕೊಡುಗೆ ನೀಡಿದ್ದಾರೆ. ಸಚಿವರಾದ ಈಶ್ವರ ಖಂಡ್ರೆ ಅವರು ಜಿಲ್ಲೆಯ ಅಭಿವೃದ್ಧಿಗೆ ಸಾಕಷ್ಟು ಶ್ರಮಿಸುತ್ತಿದ್ದಾರೆ" ಎಂದು ತಿಳಿಸಿದರು.

"ಸರ್ವರಿಗೂ ಸಮಬಾಳು, ಸರ್ವರಿಗೂ ಸಮಪಾಲು ಎಂದು ಕಾಂಗ್ರೆಸ್ ಸರ್ಕಾರ ಕೆಲಸ ಮಾಡುತ್ತದೆ. ನಾವು ಬಸವಣ್ಣ ಅವರನ್ನು ಸಾಂಸ್ಕೃತಿಕ ನಾಯಕ ಎಂದು ಘೋಷಣೆ ಮಾಡಿದ್ದೇವೆ. ಆದರೆ ಬಿಜೆಪಿಯವರಿಗೆ ಬಸವಣ್ಣನವರ ಆಶಯಗಳ ಮೇಲೆ ನಂಬಿಕೆಯಿಲ್ಲ. ಸುವರ್ಣ ಸೌಧ, ವಿಧಾನಸೌಧದಲ್ಲಿ ಅನಜಭವ ಮಂಟಪದ ತೈಲವರ್ಣ ಚಿತ್ರವನ್ನು ಅನಾವರಣ ಮಾಡಲಾಗಿದೆ. ರಾಹುಲ್ ಗಾಂಧಿ ಅವರು ಸಹ ಹಲವಾರು ಬಾರಿ ಬಸವಣ್ಣನವರ ಸಂಗತಿಗಳನ್ನು ಉಲ್ಲೇಖಿಸಿದ್ದಾರೆ" ಎಂದು ಹೇಳಿದರು.

## ಮತ್ತೆ ಅಧಿಕಾರಕ್ಕೆ :ಸಿಎಂ,ಡಿಸಿಎಂ ಭವಿಷ್ಯ

ಇತರ ರಾಜ್ಯಗಳಿಗಿಂತ ಕಡಿಮೆ ದರ ಇದಾಗಿದೆ. ಸರ್ಕಾರವು ರೈತರು ಮತ್ತು ಸಾರ್ವಜನಿಕರ ಪರವಾಗಿ ಕೆಲಸ ಮಾಡುತ್ತಿದೆ. ಟೂತ್‌ಪೇಸ್ಟ್, ಮೊಬೈಲ್ ಫೋನ್‌ಗಳು, ಸಿಮೆಂಟ್ ಮತ್ತು ಕಾರುಗಳಂತಹ ಅಗತ್ಯ ವಸ್ತುಗಳ ಬೆಲೆ ಏರಿಕೆ ಸಾಮಾನ್ಯ ಜನರ ಮೇಲಿನ ಹೊರೆಗೆ ಉದಾಹರಣೆಗಳಾಗಿವೆ. ಚಿನ್ನದ ಬೆಲೆ ಏರಿಕೆಯಿಂದಾಗಿ ಮಂಗಳಸೂತ್ರಗಳಂತಹ ಸಾಂಪ್ರದಾಯಿಕ ಆಭರಣಗಳನ್ನು ಭರಿಸಲು ಸಹ ಮಹಿಳೆಯರಿಗೆ ಕಷ್ಟವಾಗಿದೆ ಎಂದು ಅವರು ಹೇಳಿದರು.

ಬಿಜೆಪಿ ಶಾಸಕರೊಬ್ಬರು ತಮ್ಮ ವಿರುದ್ಧ ಸಲ್ಲಿಸಿದ್ದ ದೂರನ್ನು ತಳ್ಳಿಹಾಕಿದ ಅವರು, 2028 ರಲ್ಲಿ ಕಾಂಗ್ರೆಸ್ ಮತ್ತೆ ಗೆಲ್ಲುವ ಬಗ್ಗೆ ತಮಗೆ ಭಯವಿಲ್ಲ ಮತ್ತು ವಿಶ್ವಾಸವಿದೆ ಎಂದು ಹೇಳಿದರು.

ಕರ್ನಾಟಕ ಕಾಂಗ್ರೆಸ್ ಇಂದು ಫ್ರೀಡಂ ಪಾರ್ಕ್‌ನಲ್ಲಿ ಕೇಂದ್ರ ಸರ್ಕಾರದ ವಿರುದ್ಧ ಪ್ರತಿಭಟನೆ ನಡೆಸಿತು. ಬೆಲೆ ಏರಿಕೆ ಮತ್ತು ಸಾಮಾನ್ಯ ಜನರು ಎದುರಿಸುತ್ತಿರುವ ಕಷ್ಟಗಳಿಗೆ ಕೇಂದ್ರದಲ್ಲಿರುವ ಬಿಜೆಪಿ ನೇತೃತ್ವದ ಸರ್ಕಾರವನ್ನು ದೂಷಿಸಿದೆ. ಎಐಸಿಸಿ ಪ್ರಧಾನ ಕಾರ್ಯದರ್ಶಿ ರಣದೀಪ್ ಸಿಂಗ್ ಸುರ್ಜೇವಾಲಾ, ಸಲೀಂ ಅಹ್ಮದ್ ಸೇರಿದಂತೆ ಹಲವು ನಾಯಕರು ಪ್ರತಿಭಟನೆಯಲ್ಲಿ ಭಾಗಿಯಾಗಿದ್ದರು.

'ಕೇಂದ್ರ ಭರವಸೆ ನೀಡಿದ ಒಳ್ಳೆಯ ದಿನಗಳು ಇವೇನಾ?': ಸಿಎಂ ಸಿದ್ದರಾಮಯ್ಯ

ಕೇಂದ್ರ ಸರ್ಕಾರ ಇತ್ತೀಚೆಗೆ ಎಲ್‌ಪಿಜಿ ಬೆಲೆ ಏರಿಕೆ ಮಾಡಿದ್ದಕ್ಕೆ ಮತ್ತು ಪಕ್ಷದ ನಾಯಕರಾದ ಸೋನಿಯಾ ಗಾಂಧಿ ಮತ್ತು ರಾಹುಲ್ ಗಾಂಧಿ ವಿರುದ್ಧ ಜಾರಿ ನಿರ್ದೇಶನಾಲಯ ಸಲ್ಲಿಸಿದ ಆರೋಪಪಟ್ಟಿಯ ವಿರುದ್ಧ ಮುಖ್ಯಮಂತ್ರಿ ಸಿದ್ದರಾಮಯ್ಯ ಗುರುವಾರ ತೀವ್ರ ವಾಗ್ದಾಳಿ ನಡೆಸಿದ್ದಾರೆ.

ಪ್ರತಿಭಟನೆಯಲ್ಲಿ ಮಾತನಾಡಿದ ಅವರು, ಬಿಜೆಪಿ ಅಧಿಕಾರಕ್ಕೆ ಬಂದಾಗಿನಿಂದ ಇಂಧನ ಮತ್ತು ಅಗತ್ಯ ವಸ್ತುಗಳ ಬೆಲೆ ಹೆಚ್ಚುತ್ತಿವೆ. ಕಳೆದ 11 ವರ್ಷಗಳಿಂದ ಬಿಜೆಪಿ ನಿಯಮಿತವಾಗಿ ಇಂಧನ ಬೆಲೆಗಳನ್ನು ಹೆಚ್ಚಿಸುತ್ತಿದೆ. ಈಗ ಮತ್ತೆ ಪೆಟ್ರೋಲ್ ಮತ್ತು ಗ್ಯಾಸ್ ಬೆಲೆಗಳು ಏರಿಕೆಯಾಗಿವೆ. ಇದು ಎಲ್ಲರ ಮೇಲೆ ಕೆಟ್ಟ ಪರಿಣಾಮ ಬೀರುತ್ತಿದೆ ಎಂದು ಅವರು ಹೇಳಿದರು.ಇಂಧನ ಬೆಲೆಯಲ್ಲಿ 2 ರೂ. ಹೆಚ್ಚಳವಾದರೂ ಪರಿಣಾಮ ಬೀರುತ್ತದೆ ಎಂದು ಕಾಂಗ್ರೆಸ್ ನಾಯಕ ರಣದೀಪ್ ಸುರ್ಜೇವಾಲಾ ಮೊದಲೇ ಎಚ್ಚರಿಸಿದ್ದರು. ಬಿಜೆಪಿ ಮತ್ತು ಜೆಡಿಎಸ್‌ಗೆ ಈಗ ಪ್ರತಿಭಟಿಸುವ ನೈತಿಕ ಹಕ್ಕಿಲ್ಲ. ಅವರಿಗೆ ಮರ್ಯಾದೆ ಇದ್ದಿದ್ದರೆ ಅವರು ಹೀಗೆ ಮಾಡುತ್ತಿರಲಿಲ್ಲ ಎಂದು ಅವರು ಹೇಳಿದರು.ಬೆಲೆ ಏರಿಕೆ ವಿರುದ್ಧ ಬೆಂಗಳೂರಿನಲ್ಲಿ ನಡೆದ ಕಾಂಗ್ರೆಸ್ ಪ್ರತಿಭಟನೆಯಲ್ಲಿ ಮಾತನಾಡಿದ ಸಚಿವ ಕೃಷ್ಣ ಬೈರೇಗೌಡ, ಬಿಜೆಪಿ ಸರ್ಕಾರವು ಶ್ರೀಮಂತರಿಗೆ ಅನುಕೂಲಕರವಾಗಿದೆ. ಹೆಚ್ಚಿನ ತೆರಿಗೆಗಳು ಮತ್ತು ಬೆಲೆ ಏರಿಕೆಯ ಮೂಲಕ ಬಡವರನ್ನು ಶೋಷಿಸುತ್ತಿದೆ. ಶ್ರೀಮಂತರಿಗೆ ತೆರಿಗೆ ಕಡಿತ ಮತ್ತು ಅನಿಲ, ತೈಲ ಮತ್ತು ಸಿಮೆಂಟ್‌ನಂತಹ ಅಗತ್ಯ ವಸ್ತುಗಳ ಬೆಲೆ ಏರಿಕೆಯಾಗಿದ್ದು, ಇದು ಜನರ ರಕ್ತ ಹೀರುವ ಕ್ರಮವಾಗಿದೆ ಎಂದು ಕರೆದರು.ಮತ್ತೊಂದೆಡೆ, ಕೇಂದ್ರ ಸಚಿವ ಮತ್ತು ಜೆಡಿಎಸ್ ನಾಯಕ ಎಚ್.ಡಿ. ಕುಮಾರಸ್ವಾಮಿ ಅವರು, ಕರ್ನಾಟಕ ಕಾಂಗ್ರೆಸ್ ಸರ್ಕಾರವು ರಾಜ್ಯದ ಜನರ ಮೇಲೆ ತೆರಿಗೆ ಹೊರೆ ಹೇರುತ್ತಿದೆ. ಯುಪಿಎ ಅವಧಿಗಿಂತ ಇಂದಿನ ಎಲ್‌ಪಿಜಿ ಬೆಲೆಗಳು ಕಡಿಮೆಯಾಗಿದೆ ಮತ್ತು ಇಂಧನ ಬೆಲೆ ಏರಿಕೆಯನ್ನು ಹೆಚ್ಚಾಗಿ ಕಂಪನಿಗಳು ಭರಿಸುತ್ತವೆ, ಸಾರ್ವಜನಿಕರಲ್ಲ ಎಂದು ಅವರು ಕೇಂದ್ರ ಸರ್ಕಾರವನ್ನು ಸಮರ್ಥಿಸಿಕೊಂಡರು.

## ಅರಣ್ಯ ಸಿಬ್ಬಂದಿಗಳ ಅಮಾನತ್ತು ಮಾಡಿ

ಹಾಗೂ ಜಿಲ್ಲಾ ಉಸ್ತುವಾರಿ ಮಂತ್ರಿ ಈಶ್ವರ ಖಂಡ್ರೆ ಅವರಿಗೆ ಮನವಿ ಪತ್ರ ಸಲ್ಲಿಸಿ, ಒಬ್ಬ ಪತ್ರಕರ್ತನೆಂಬುದನ್ನು ಮರೆತು ಮನ ಬಂದಂತೆ ಥಳಿಸಿದಲ್ಲದೇ ಅವಾಚ್ಯ ಶಬ್ದಗಳಿಂದ ಹಾಗೂ ಜಾತಿ ನಿಂದನೆ ಮಾಡಿರುವ ಅರಣ್ಯ ಇಲಾಖೆ ಸಿಬ್ಬಂದಿಗಳಾದ ದಸ್ತಗೀರ್, ಶಾಂತಕುಮಾರ, ಸಂಗಮೇಶ ಹಾಗೂ ಗಜಾನಂದ ಅವರನ್ನು ಸೇವೆಯಿಂದ ಅಮಾನತು ಮಾಡಬೇಕು ಎಂದು ಒಪ್ಪಾಯಿಸಿದರು.

ಈ ಸಂದರ್ಭದಲ್ಲಿ ಕರ್ನಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾಧ್ಯಕ್ಷ ಡಿ.ಕೆ ಗಣಪತಿ, ಜಿಲ್ಲಾ ಪ್ರಧಾನ ಕಾಯ್ದರ್ಶಿ ಶಿವಕುಮಾರ ಸ್ವಾಮಿ, ಉಪಾಧ್ಯಕ್ಷ ನಾಗಶೆಟ್ಟಿ ಧರಂಪುರ, ಖಜಾಂಚಿ ಎಂ.ಪಿ ಮುದಾಳೆ, ಜಿಲ್ಲಾ ಕಾರ್ಯಕಾರಿಣಿ ಸದಸ್ಯ ಸಂತೋಷ ಚಟ್ಟಿ, ಹಿರಿಯ ಪತ್ರಕರ್ತರಾದ ಶಶಿಕಾಂತ ಶೆಂಬೆಳ್ಳಿ, ವಿಜಯಕುಮಾರ ಬೆಲ್ದೆ, ಸಂಜುಕುಮಾರ ಬುಕ್ಕಾ, ಮಹಾರುದ್ರ ಡಾಕುಳಗಿ, ಸುನಿಲ ಬಾವಿಕಟ್ಟಿ, ಶಕ್ತಿಕಾಂತ, ಹಲ್ಲೆಗೊಳಗಾದ ಪತ್ರಕರ್ತ ರವಿ ಭೂಸಂಡೆ ಹಾಗೂ ಇತರರು ಹಾಜರಿದ್ದರು.

## ಬಸವ ಜಯಂತಿ ಉತ್ಸವ ಸಮಿತಿ ಕಚೇರಿ ಉದ್ಘಾಟನೆ ಇಂದು

ಬೀದರ. ಏ. 17 : ನಗರದ ಉದಗೀರ್ ರಸ್ತೆಯಲ್ಲಿ ಇರುವ ವಾಲಿ ಕಾಂಪ್ಲೆಕ್ಸ್‌ನಲ್ಲಿ ಬಸವ ಜಯಂತಿ ಉತ್ಸವ ಸಮಿತಿಯ ಕಚೇರಿಉದ್ಘಾಟನಾಕಾರ್ಯಕ್ರಮ ಏಪ್ರಿಲ್ 18 ರಂದು ಬೆಳಿಗ್ಗೆ 10ಕ್ಕೆ ನಡೆಯಲಿದೆ.



ಬಸವಕಲ್ಯಾಣದ ಅನುಭವ ಮಂಟಪದ ಅಧ್ಯಕ್ಷ ಡಾ. ಬಸವಲಿಂಗ ಪಟ್ಟದ್ದೇವರು, ಲಿಂಗಾಯತ ಮಹಾ ಮಠದ ಡಾ. ಗಂಗಾಂಬಿಕೆ ಅಕ್ಕ, ಸಮಿತಿಯ ಅಧ್ಯಕ್ಷ ಜೈರಾಜ ಖಂಡ್ರೆ, ಸಮಾಜದ ಮುಖಂಡರು, ಬಸವ ಪರ ಸಂಘಟನೆಗಳ ಪದಾಧಿಕಾರಿಗಳು ಪಾಲ್ಗೊಳ್ಳಲಿದ್ದಾರೆ.

ಬಸವ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು ಎಂದು ಬಸವ ಜಯಂತಿ ಉತ್ಸವ ಸಮಿತಿಯ ಪ್ರಧಾನ ಕಾರ್ಯದರ್ಶಿ ಸಂಜೀವಕುಮಾರ ಪಾಟೀಲ ಮನವಿ ಮಾಡಿದ್ದಾರೆ.

## ಯಥಾಸ್ಥಿತಿ ಕಾಪಾಡಲು ಸುಪ್ರೀಂ ಕೋರ್ಟ್ ಆದೇಶ

ಸರ್ಕಾರಕ್ಕೆ 7 ದಿನಗಳ ಕಾಲಾವಕಾಶ ನೀಡಿದೆ.

"ಇಷ್ಟು ಅರ್ಜಿಗಳನ್ನು ನಿಭಾಯಿಸುವುದು ಅಸಾಧ್ಯ. ಕೇವಲ 5 ಅರ್ಜಿಗಳನ್ನು ಮಾತ್ರ ಆಲಿಸಲಾಗುವುದು. ಯಾವ ಐದು ಅರ್ಜಿಗಳನ್ನು ವಿಚಾರಣೆ ನಡೆಸಬೇಕು ಎಂಬುದನ್ನು ನೀವೇ ಆಯ್ಕೆ" ಎಂದು ಸುಪ್ರೀಂ ಕೋರ್ಟ್ ಹೇಳಿದೆ.

ಅರ್ಜಿದಾರರು 5 ದಿನಗಳಲ್ಲಿ ಕೇಂದ್ರದ ಉತ್ತರಕ್ಕೆ ಮರು ಪ್ರತಿಕ್ರಿಯೆ ಸಲ್ಲಿಸಬಹುದು, ನಂತರ ಮಧ್ಯಂತರ ಆದೇಶಗಳಿಗಾಗಿ ವಿಷಯವನ್ನು ಪಟ್ಟಿ ಮಾಡಲಾಗುವುದು ಎಂದು ಹೇಳಿ, ವಿಚಾರಣೆಯನ್ನು ಮೇ 5ಕ್ಕೆ ಸುಪ್ರೀಂ ಕೋರ್ಟ್ ಮುಂದೂಡಿದೆ.

"ಕೇಂದ್ರ ಸರ್ಕಾರದ ಪರವಾಗಿ ವಿಚಾರಣೆಗೆ ಹಾಜರಾದ ಸಾಲಿಸಿಟರ್ ಜನರಲ್ ತುಷಾರ್ ಮೆಹ್ತಾ ಅವರು, ಕೆಲವು ಸಾಮಗ್ರಿಗಳೊಂದಿಗೆ ಪ್ರಾಥಮಿಕ ಉತ್ತರ ನೀಡಲು ನನಗೆ ಒಂದು ವಾರ ಸಮಯ ನೀಡಿ" ಎಂದು ಸುಪ್ರೀಂ ಕೋರ್ಟ್ ಅನ್ನು ಕೇಳಿಕೊಂಡರು.

"ಈ ಮಧ್ಯೆ ಕೇಂದ್ರ ವಕ್ಫ್ ಮಂಡಳಿ ಮತ್ತು ಇತರ ಮಂಡಳಿಗಳಲ್ಲಿ ಯಾವುದೇ ನೇಮಕಾತಿ ನಡೆಸಬಾರದು" ಎಂದು ಕೇಂದ್ರ ಸರ್ಕಾರ ಸಮಯ ಕೇಳಿದ ನಂತರ ಸುಪ್ರೀಂ ಕೋರ್ಟ್ ಹೇಳಿದೆ.

"1995 ರ ಕಾಯ್ದೆಯಡಿ ಈಗಾಗಲೇ ನೋಟಿಫೈ ಮಾಡಿದ ಅಥವಾ ನೋಂದಾಯಿಸಲಾದ ಹಾಗೂ ದೀರ್ಘ ಕಾಲದಿಂದ ಧಾರ್ಮಿಕ ಕಾರ್ಯಕ್ರಮಗಳಿಗೆ ಬಳಸುತ್ತಿರುವ (ವಕ್ಫ್ ಬೈ ಯೂಸರ್) ಆಸ್ತಿಗಳನ್ನು ಒಳಗೊಂಡಂತೆ ಯಾವುದೇ ವಕ್ಫ್ ಆಸ್ತಿಗಳನ್ನು ಡಿನೋಟಿಫೈ ಮಾಡುವಂತಿಲ್ಲ. ಜಿಲ್ಲಾಧಿಕಾರಿಗಳು ಅವುಗಳ ಸ್ಥಿತಿಯಲ್ಲಿ ಯಾವುದೇ ಬದಲಾವಣೆಗಳನ್ನು ಮಾಡಬಾರದು ಎಂದು ನ್ಯಾಯಾಲಯ ಸೂಚಿಸಿದೆ.

ಮುಂದಿನ ವಿಚಾರಣೆಯವರೆಗೆ 'ವಕ್ಫ್ ಬೈ ಡೀಡ್' ಮತ್ತು 'ಬಳಕೆದಾರ-ರಿಂದ ವಕ್ಫ್' ಅನ್ನು ಡಿನೋಟಿಫೈ ಮಾಡುವುದಿಲ್ಲ ಎಂದು ಕೇಂದ್ರ ಸರ್ಕಾರ ಸುಪ್ರೀಂ ಕೋರ್ಟ್‌ಗೆ ಭರವಸೆ ನೀಡಿದೆ.

## ಪತ್ರಕರ್ತನ ಮೇಲಿನ ಹಲ್ಲೆ ಖಂಡಿಸಿ ಪ್ರತಿಭಟನೆ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:ಏ.17:ಬೀದರನಲ್ಲಿ ಪತ್ರಕರ್ತ ರವಿ ಬಸವರಾಜ ಭೂಸಂಡೆ ಅವರ ಮೇಲೆ ಅಮಾನವೀಯವಾಗಿ ವರ್ತಿಸಿ ಹಲ್ಲೆ ಮಾಡಿರುವ ನಾಲ್ಕು ಜನ ಅರಣ್ಯ ಇಲಾಖೆಯ ಪೊಲೀಸ ಅಧಿಕಾರಿ ಮತ್ತು ಸಿಬ್ಬಂದಿಗಳನ್ನು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿವುದರ ಜತೆಗೆ ಅವರನ್ನು ಸೇವೆಯಿಂದ ವಜಾ ಮಾಡುವಂತೆ ಆಗ್ರಹಿಸಿ ತಾಲೂಕು ಕಾರ್ಯನಿರತ ಪತ್ರಕರ್ತರ ಸಂಘದ ವತಿಯಿಂದ ಗುರುವಾರ ಪ್ರತಿಭಟನೆ ನಡೆಸಿ ತಹಸಿಲ್ದಾರ ಮಂಜುನಾಥ ಪಂಚಾಳ ಅವರಿಗೆ ಮನವಿ ಪತ್ರ ಸಲ್ಲಿಸಿದರು.

ಅರಣ್ಯ ಇಲಾಖೆಯ ಸಿಬ್ಬಂದಿಗಳಾದ ದಸ್ತಗೀರ, ಶಾಂತಕುಮಾರ, ಗಜಾನಂದ ಹಾಗೂ ಸಂಗಮೇಶ ಎಂಬುವವರು ಪತ್ರಕರ್ತ ರವಿ ಭೂಸಂಡೆ ಅವರಿಗೆ ಅವಾಚ್ಯ ಶಬ್ದಗಳಿಂದ ನಿಂದಿಸಿರುವುದು ಮತ್ತು ಕಾಲರ ಪಟ್ಟಿ ಹಿಡಿದು ಎಳೆದಾಡಿರುವ ವಿಡಿಯೋ ವೈರಲ್ ಆಗಿದ್ದು ಈ ಅಮಾನವೀಯ ಘಟನೆಗೆ ಕಾರಣರಾದವರನ್ನು ಈ ಕೂಡಲೇ ಕರ್ತವ್ಯದಿಂದ ಅಮಾನತುಗೊಳಿಸಬೇಕು ಇಲ್ಲವಾದರೆ ಮುಂದಿನ ದಿನಗಳಲ್ಲಿ ಉಗ್ರ ಹೋರಾಟವನ್ನು ಮಾಡುವ ಮೂಲಕ ರಾಜ್ಯವ್ಯಾಪಿ ಹೋರಾಟ ನಡೆಸಲಾಗುವುದು ಎಂದರು. ಚಿಟಗುಪ್ಪ ಪತ್ರಕರ್ತರ ಸಂಘದ ಅಧ್ಯಕ್ಷ ನವೀನ ಗಂಜಿ, ಹುಮನಾಬಾದ ತಾಲೂಕು ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ದುರ್ಯೋಧನ ಹೂಗಾರ, ಉಪಾಧ್ಯಕ್ಷ ಕೃಷ್ಣಾಚಾರ ಪಂಚಾಳ, ಪ್ರಧಾನ ಕಾರ್ಯದರ್ಶಿ ಸೈಯದ ಮುಸ್ತಫಾ ಖಾದ್ರಿ, ಪತ್ರಕರ್ತರಾದ ರಾಜಕುಮಾರ ಆರ್. ಹಡಪದ, ವಿದ್ಯಾಸಾಗರ ಕಟ್ಟಿಮನಿ, ಮೊಯಿಯೋದ್ದಿನ ಲಾಥೋಡಿ, ಸೈಯದ ಅಜೀಮ, ಸಲಾವುದ್ದಿನ ಸಿದ್ದಿಕ, ಸಂಗಮೇಶ ಜವಾದಿ, ಗುಂಡು ಅತಿವಾಳ ಸೇರಿದಂತೆ ಪ್ರಮುಖರು ಉಪಸ್ಥಿತರಿದ್ದರು.

### ರಾಜ್ಯದ ವೈದ್ಯಕೀಯ ಶಿಕ್ಷಣ ಸಚಿವರ ಪ್ರವಾಸ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಏ.17:ರಾಜ್ಯದ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರಾದ ಡಾ.ಶರಣಪ್ರಕಾಶ ಆರ್.ಪಾಟೀಲ್ ಅವರು ಹೈದ್ರಾಬಾದ್‌ದಿಂದ ರಸ್ತೆ ಮೂಲಕ ಏಪ್ರಿಲ್ 19 ರಂದು ಶನಿವಾರ ಸಂಜೆ 4 ಗಂಟೆಗೆ ಸೇಡಂಗೆ ಆಗಮಿಸುವರು. ನಂತರ ಸಂಜೆ 4.30 ಗಂಟೆಗೆ ಸೇಡಂ ಪಟ್ಟಣದಲ್ಲಿ ಹಮ್ಮಿಕೊಳ್ಳಲಾದ ಡಾ. ಬಿ.ಆರ್. ಅಂಬೇಡ್ಕರ್ ಜಯಂತ್ಯೋತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸುವರು. ಏಪ್ರಿಲ್ 20 ರಂದು ಭಾನುವಾರ ಕಲಬುರಗಿ ಹಾಗೂ ಸೇಡಂದಲ್ಲಿ ಸ್ಥಳೀಯ ಕಾರ್ಯಕ್ರಮಗಳಲ್ಲಿ ಭಾಗವಹಿಸಿ ವಾಸ್ತವ್ಯ ಮಾಡುವರು.

## ಜನರ ಅಹವಾಲು ಸ್ವೀಕರಿಸಿದ ಸಿಎಂ; ಮಾರ್ಗದುದ್ದಕ್ಕೂ ಹೂಮಳೆಗರೆದು ಸ್ವಾಗತ

ಮಲ್ಲಮ್ಮ ನುಡಿ ವಾರ್ತೆ

ಬೀದರ.ಏ.17:ಬೆಂಗಳೂರು-ಬೀದರ್ ವಿಮಾನಯಾನ ಸೇವೆಗೆ ಬುಧವಾರ ಸಂಜೆ ಇಲ್ಲಿ ಚಾಲನೆ ನೀಡಿದ ಮುಖ್ಯಮಂತ್ರಿ ಸಿದ್ದರಾಮಯ್ಯನವರು ವಿಮಾನ ನಿಲ್ದಾಣದ ಎದುರು ಸಾರ್ವಜನಿಕರಿಂದ ಅಹವಾಲು ಸ್ವೀಕರಿಸಿದರು. ತಮ್ಮ ಸಮಸ್ಯೆ ಹೇಳಿಕೊಳ್ಳಲು ವಿವಿಧ ಕಡೆಗಳಿಂದ ಹೆಚ್ಚಿನ ಸಂಖ್ಯೆಯಲ್ಲಿ ಜನ ಬಂದಿದ್ದರು. ಹೆಜ್ಜೆ ಹಾಕುತ್ತ ಎಲ್ಲರ ಅಹವಾಲುಗಳನ್ನು ಸ್ವೀಕರಿಸುತ್ತಲೇ ಮುಖ್ಯಮಂತ್ರಿಯವರು ಅಲ್ಲಿಂದ ಕಾರು ಹತ್ತಿ ನೆಹರೂ ಕ್ರೀಡಾಂಗಣಕ್ಕೆ ತೆರಳಿದರು.



ಅಹವಾಲು ಸಲ್ಲಿಸಲು ಬಂದಿದ್ದ ಜನರು ಸಮಸ್ಯೆ ಹೇಳಿಕೊಳ್ಳಲು ಸಾಧ್ಯವಾಗಲಿಲ್ಲ. ಕೇವಲ ಮನವಿ ಪತ್ರ ಸಲ್ಲಿಸಲಷ್ಟೇ ಸಾಧ್ಯವಾಯಿತು. ಚಿದ್ರಿಯಿಂದ ಕಾರಿನಲ್ಲಿ ನೆಹರೂ ಕ್ರೀಡಾಂಗಣದ ವರೆಗೆ ತೆರಳಿದ ಮುಖ್ಯಮಂತ್ರಿಗೆ ಮಾರ್ಗದುದ್ದಕ್ಕೂ ಪಕ್ಷದ ಕಾರ್ಯಕರ್ತರು, ಬೆಂಬಲಿಗರು ಹೂಮಳೆಗರೆದರು. ಜೆಸಿಬಿ ಮೂಲಕ ಹೂಮಳೆ ಸುರಿಸಿದರು. ಸಿಎಂ ಜನರತ್ತ ಕೈಬೀಸಿದಾಗ ಶಿಳ್ಳೆ, ಕೇಕೆ ಹಾಕಿದರು. ಜಯಘೋಷ ಹಾಕಿದರು. ಅಲ್ಲಲ್ಲಿ ಪಕ್ಷದ ಮುಖಂಡರು, ಕಾರ್ಯಕರ್ತರು ಸಿಎಂಗೆ ಹೂಮಾಲೆ ಹಾಕಿ, ಮನವಿ ಸಲ್ಲಿಸಿದರು.

ಸಿಎಂ ಕಾರಿನ ಹಿಂದೆ ನೂರಾರು ವಾಹನಗಳು ಮುಖ್ಯರಸ್ತೆಯ ಮೂಲಕ ಸಾಗಿದ ಕಾರಣ ಸಾರ್ವಜನಿಕರ ವಾಹನಗಳ ಸಂಚಾರ ನಿರ್ಬಂಧಿಸಲಾಗಿತ್ತು. ಇದರಿಂದ ಕೆಲಸಮಯ ಸಾರ್ವಜನಿಕರು ಪರದಾಡಿದರು.

## ಪತ್ರಕರ್ತ ರವಿ ಬುಸುಂಡೆ ಮೇಲಿನ ಹಲ್ಲೆ ಖಂಡನೀಯ



ಮಲ್ಲಮ್ಮ ನುಡಿ ವಾರ್ತೆ

ಔರಾದ:ಏ.17:ದಿನಾಂಕ 15.04.2025 ಮಂಗಳವಾರ ಬೀದರ್ ನಗರದ ಚಿದ್ರಿ ಹತ್ತಿರ ಅರಣ್ಯ ಇಲಾಖೆ ಅಧಿಕಾರಿಗಳಿಂದ ಪತ್ರಕರ್ತ ರವಿ ಬುಸುಂಡೆ ಅವರ ಮೇಲೆ ಹಲ್ಲೆಯಾಗಿದ್ದು, ಇದನ್ನು ಕರ್ನಾಟಕ ಮೀಡಿಯಾ ಜರ್ನಲಿಸ್ಟ್ ಯುನಿಯನ್, ತಾಲೂಕು ಘಟಕ ಔರಾದ್ ತೀವ್ರವಾಗಿ ಖಂಡಿಸುತ್ತದೆ.

ಪ್ರಜ್ಞಾವಂತ ಸಮಾಜ ತಲೆ ತಗ್ಗಿಸುವಂತ ಘಟನೆ ಇದಾಗಿದ್ದು, ಒಬ್ಬ ಪತ್ರಕರ್ತನ ಜೊತೆಯಲ್ಲಿ ಈ ರೀತಿಯಾಗಿ ನಡೆದುಕೊಂಡ ಅರಣ್ಯ ಅಧಿಕಾರಿಗಳ ನಡೆ ನಿಜಕ್ಕೂ ಅಮಾನವೀಯ ಎಂಬುದು ಸ್ಪಷ್ಟವಾಗಿ ಕಾಣುತ್ತಿದೆ.

ಪ್ರಯುಕ್ತ ಸದರಿ ಪತ್ರಕರ್ತ ರವಿ ಬುಸುಂಡೆ ಅವರು ಈ ಕುರಿತು ಬೀದರ್ ನಗರದ ಗಾಂಧಿ ಗಂಜ್ ಪೊಲೀಸ್ ಠಾಣೆಯಲ್ಲಿ ಅರಣ್ಯ ಇಲಾಖೆ ಅಧಿಕಾರಿಗಳ ವಿರುದ್ಧ ಪ್ರಕರಣ ದಾಖಲಿಸಿದ್ದು, ಅಧಿಕಾರಿಗಳ ವಿರುದ್ಧ ಕ್ರಮವಹಿಸುವಂತೆ ಸಂಘವು ಒತ್ತಾಯಿಸುತ್ತದೆ. ಒಂದುವೇಳೆ ಕ್ರಮಕ್ಕೆ ಮುಂದಾಗದಿದ್ದಲ್ಲಿ ಸಂಬಂಧಿತ ಅಧಿಕಾರಿಗಳ ವಿರುದ್ಧ ಹೋರಾಟ ಮಾಡಲಾಗುವುದು ಎಂದು ಸಂತೋಷ ಚ್ಯಾಂಡೆಸುರೆ ಕರ್ನಾಟಕ

ಮೀಡಿಯಾ ಜರ್ನಲಿಸ್ಟ್ ಯುನಿಯನ್ ತಾಲೂಕು ಅಧ್ಯಕ್ಷರು ತಿಳಿಸಿದ್ದರು ಈ ಸಂದರ್ಭದಲ್ಲಿ ರವಿ ಮುಕ್ತೆದಾರ, ಬಸವರಾಜ್ ಶಿವುಪೂಜೆ, ರಾಮದಾಸ್ ಪಾಟೀಲ್, ಶಿವುಕುಮಾರ ಬಿರಾದರ್, ಶಿವಕುಮಾರ್ ಬೇಂದ್ರೆ, ಲಕ್ಕಿ ರಾಥೋಡ್, ಸಂದೀಪ್ ಪಾಟೀಲ್, ಸತೀಷ ಚಂಡೇಶ್ವರಿ ಇದ್ದರು.

## ಸಾವರಗಾಂವ ಗ್ರಾಮಸ್ಥರಿಗೆ ತಕ್ಷಣ ಕುಡಿಯುವ ನೀರು ಪೂರೈಸಲು ಆಗ್ರಹ

ಔರಾದ:ಏ.17: ಔರಾದ ತಾಲೂಕಿನ ಬೋಂತಿ ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿನ ಸಾವರಗಾಂವ ಗ್ರಾಮದಲ್ಲಿ ಸದ್ಯ ಕುಡಿಯುವ ನೀರಿನ ಗಂಭೀರ ಸಮಸ್ಯೆ ನಿರ್ಮಾಣವಾಗಿದೆ. ಜನರು ಕುಡಿಯುವ ನೀರಿಗಾಗಿ ಹಗಲು ರಾತ್ರಿ ಅಲೆದಾಡುತ್ತಿದ್ದಾರೆ. ಅದರಿಂದ ಜಿಲ್ಲಾಡಳಿತವು ತಕ್ಷಣ ಗ್ರಾಮಸ್ಥರಿಗೆ ಸಮರ್ಪಕ ಕುಡಿಯುವ ನೀರು ಪೂರೈಸುವ ವ್ಯವಸ್ಥೆ ಮಾಡಬೇಕೆಂದು ಸಮಾಜ ಸೇವಕ ಗುರುನಾಥ ವಡ್ಡೆಯವರು ಜಿಲ್ಲಾಧಿಕಾರಿ ಹಾಗೂ ಸಹಾಯಕ ಆಯುಕ್ತರು



ಬೀದರ ಇವರಿಗೆ ಸಲ್ಲಿಸಿದ ಮನವಿಯಲ್ಲಿ ಆಗ್ರಹಿಸಿದ್ದಾರೆ.

2021-22 ವರ್ಷದಲ್ಲಿ ಸಾವರಗಾಂವ ಗ್ರಾಮಕ್ಕೆ 141.00 ಲಕ್ಷ ರೂಪಾಯಿ ಅನುದಾನದ ಜಲಜೀವನ್ ಮಿಷನ್ ಯೋಜನೆ ಮಂಜೂರಾಗಿರುತ್ತದೆ. ಆದರೆ ಇಲ್ಲಿಯವರೆಗೆ ಸದರಿ ಯೋಜನೆಯಿಂದ ಗ್ರಾಮಸ್ಥರಿಗೆ ನೀರು ಸಿಕ್ಕಿರುವುದಿಲ್ಲ. ಗ್ರಾಮ ಪಂಚಾಯತ್‌ದಿಂದ ಕೂಡ ಗ್ರಾಮಸ್ಥರಿಗೆ ಕುಡಿಯುವ ನೀರಿನ ಸಮರ್ಪಕ ವ್ಯವಸ್ಥೆ ಮಾಡಿರುವುದಿಲ್ಲ. ಕುಡಿಯುವ ನೀರಿಗಾಗಿ ಇಲ್ಲಿನ ಗ್ರಾಮಸ್ಥರು ಬಹಳಷ್ಟು ತೊಂದರೆ ಅನುಭವಿಸುತ್ತಿದ್ದಾರೆ. ಅದ-ರಿಂದ ತಕ್ಷಣ ಗ್ರಾಮಸ್ಥರಿಗೆ ಕುಡಿಯುವ ನೀರಿನ ವ್ಯವಸ್ಥೆ ಮಾಡಬೇಕೆಂದು ಸಮಾಜ ಸೇವಕ ಗುರುನಾಥ ವಡ್ಡೆಯವರು ಮನವಿಯಲ್ಲಿ ಆಗ್ರಹಿಸಿದ್ದಾರೆ.

## ಬೀದರ ಪತ್ರಕರ್ತರನ ಮೇಲಿನ ಹಲ್ಲೆ ಖಂಡಿಸಿ ಪ್ರತಿಭಟನೆ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಏ.17: ಬೀದರನಲ್ಲಿ ಪತ್ರಕರ್ತ ರವಿ ಭೂಸಂಡೆಯವರ ಮೇಲೆ ಅಮಾನವೀಯ ಹಲ್ಲೆ ನಡೆಸಿದ ಅರಣ್ಯ ಇಲಾಖೆಯ ಸಿಬ್ಬಂದಿಗಳನ್ನು ತಕ್ಷಣವೇ ಬಂಧಿಸಿ ಸೂಕ್ತ ಕ್ರಮಕೈಗೊಳ್ಳಬೇಕು ಎಂದು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ತಾಲೂಕು ಘಟಕದ ವತಿಯಿಂದ ಪ್ರತಿಭಟನೆ ನಡೆಸಿ ಮುಖ್ಯ ಮಂತ್ರಿಗಳಿಗೆ ಬರೆದ ಮನವಿ ಪತ್ರ ತಹಸೀಲ್ದಾರ ಮೂಲಕ ಸಲ್ಲಿಸಲಾಯಿತು.

ನಂತರ ಮಾತನಾಡಿದ ಹಿರಿಯ ಪತ್ರಕರ್ತ ಚಂದ್ರಕಾಂತ ಪಾಟೀಲ, ಪ್ರಜಾಪ್ರಭುತ್ವದ ನಾಲ್ಕನೇ ಸ್ಥಂಬವೆಂದು ಬಿಂಬಿಸುವ ಪತ್ರಿಕಾ ರಂಗದಲ್ಲಿ ಕಾರ್ಯನಿರ್ವಹಿಸಲು ಕಷ್ಟವಾಗಿದೆ. ನೈಜ ವರದಿ ಸಲ್ಲಿಸಲು ತೆರಳಿದ ಪತ್ರಕರ್ತರಿಗೆ ಅರಣ್ಯ ಇಲಾಖೆ ಅಧಿಕಾರಿಗಳು ಅಮಾನವೀಯವಾಗಿ ಹಲ್ಲೆ ನಡೆಸಿರುವುದು ಖಂಡನೀಯವಾಗಿದೆ. ಇಂತಹ ಘಟನೆ ಮತ್ತೆ ನಡೆ-ಯದಂತೆ ನೋಡಿಕೊಳ್ಳಬೇಕು. ಪತ್ರಕರ್ತರಿಗೆ ಹಲ್ಲೆ ಮಾಡಿದ ಅಧಿಕಾರಿ ಸಿಬ್ಬಂದಿಗಳ ಮೇಲೆ ಸೂಕ್ತ ಕ್ರಮ ಕೈಗೊಂಡು ಅವರಿಗೆ ಸೇವೆಯಿಂದ ವಜಾ ಮಾಡಬೇಕು ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಕಾರ್ಯನಿರತ ಪತ್ರಕರ್ತರ ಸಂಘದ ತಾಲೂಕು ಅಧ್ಯಕ್ಷ ಜಯರಾಜ ದಾಬಶೆಟ್ಟಿ, ಕಾರ್ಯದರ್ಶಿ ಗಣಪತಿ ಬೋಚರೆ, ಖಜಾಂಚಿ ಸಂತೋಷ ಬಿಜಿಪಾಟೀಲ, ಜಂಟಿ ಕಾರ್ಯದರ್ಶಿ ಭದ್ರೇಶ ಗುರಯ್ಯಾಸ್ವಾಮಿ, ಕಾರ್ಯಕಾರಿಣಿ ಸದಸ್ಯರಾದ ದೀಪಕ ಥಮಕೆ, ಪರಶುರಾಮ ಕರ್ಣ, ದೀಪಕ ಥಮಕೆ, ನರೇಂದ್ರ ಸೋಮಶೆಟ್ಟಿ, ಶಾಮವೆಲ್ ಕೆಪಿನ್ಯೂಜ್, ಸಂತೋಷ ನಾಟೆಕರ, ದಿಲೀಪ ಶೇರಿಕಾರ, ಶಾಂತಕುಮಾರ ನಾಟೆಕರ, ತುಕಾರಾಮ ಮೋರೆ, ಇಸ್ಮಾಯಿಲ್ ಗೂಗಲ್ ಕಂಪ್ಯೂಟರ್ ಮತ್ತಿತರರು ಇದ್ದರು.

## ಜ್ಯಾಂತಿಯಲ್ಲಿ ರೋಜಗಾರ್ ದಿನಾಚರಣೆ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಏ.17:ಬಡಜನರ, ಕೂಲಿ ಕಾರ್ಮಿಕರ ಆರ್ಥಿಕ ಸಬಲತೆಗೆ ನರೇಗಾ ಯೋಜನೆ ಸಹಕಾರಿ ಆಗಿದೆ ಎಂದು ತಾಲೂಕು ಪಂಚಾಯತಿ ಸಹಾಯಕ ನಿರ್ದೇಶಕ ಚಂದ್ರಶೇಖರ ಬನ್ನಾಳೆ ಹೇಳಿದರು.

ತಾಲೂಕಿನ ಜ್ಯಾಂತಿ ಗ್ರಾಮದಲ್ಲಿ ಗುರುವಾರ ಆಯೋಜಿಸಿದ್ದ ರೋಜಗಾರ ದಿನಾಚರಣೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.


ನರೇಗಾ ಯೋಜನೆಯ ಮಾರ್ಗಸೂಚಿ ಪ್ರಕಾರ ಪ್ರತಿ ದಿನಕ್ಕೆ ರೂ 370 ನಿಗದಿಪಡಿಸಿದ್ದು ಕೂಲಿ ಕಾರ್ಮಿಕರು ಇದರ ಸದುಪಯೋಗಪಡೆದುಕೊಂಡು ಪ್ರತಿಯೊಬ್ಬ ಕೂಲಿಕಾರರು ಗುಳೆ ಹೋಗದೇ ನರೇಗಾ ಯೋಜನೆಯಡಿ ನಡೆಯುವ ಕೂಲಿ ಕೆಲಸ ನಿರ್ವಹಿಸಿ ಕೂಲಿ ಪಡೆದು ಆರ್ಥಿಕವಾಗಿ ಪ್ರಗತಿ ಸಾಧಿಸಬೇಕು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಗ್ರಾಮ ಪಂಚಾಯತಿ ಕಾರ್ಯದರ್ಶಿ ಅನಿತಾ ಕೆಪ್ಪೆ, ಕಾಯಕ ಮಿತ್ರ, ಮೇಟಿ ಸೇರಿದಂತೆ ಹಲವರು ಇದ್ದರು.


# ಆರೋಗ್ಯ ತಪಾಸಣೆ ಮತ್ತು ರಕ್ತದಾನ ಶಿಬಿರ ದಿನಾಂಕ 20 ರಂದು.

ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :- ಏ 17 ಇಲ್ಲಿನ ಶ್ರೀ ಬಸವೇಶ್ವರರ ಜಯಂತಿ ನಿಮಿತ್ಯ ಹಾಗೂ ಮಹಾತ್ಮಾ ಬಸವೇಶ್ವರರ 75 ನೇ ಜಾತ್ರಾ ಅಮೃತ ಮಹೋತ್ಸವದ ಪ್ರಯುಕ್ತ ರವಿವಾರ ದಿನಾಂಕ 20 -4- 2025 ರಂದು ಮುಂಜಾನೆ 9:00ಗಂಟೆಗೆ ಶ್ರೀ ಬಸವೇಶ್ವರ ಪದವಿ ಪೂರ್ವ ಹಾಗೂ ಅಕ್ಕಮಹಾದೇವಿ ಮಹಿಳಾ ಮಹಾವಿದ್ಯಾಲಯದಲ್ಲಿ ಉಚಿತ ಆರೋಗ್ಯ ತಪಾಸಣೆ ಹಾಗೂ ರಕ್ತದಾನ ಶಿಬಿರ ವನ್ನು ಏರ್ಪಡಿಸಲಾಗಿದೆ ಶಿಬಿರದಲ್ಲಿ



ಖ್ಯಾತ ಹೃದಯ ತಜ್ಞರಾದ ಡಾ. ಶರತ್ ಮಸೂದಿ ಡಿಎಂ ಕಾರ್ಡಿಯಲೊಜಿ ಗ್ಯಾಸ್ಟಲೋಜಿ ತಜ್ಞರಾದ ಡಾಕ್ಟರ್ ಗುರುಬಸವ ಲಕ್ಕಾಜಿ ಮೂತ್ರಪಿಂಡ ತಜ್ಞರಾದ ಡಾಕ್ಟರ್ ಅನಿಲ್ ಮುದ್ದಾ ನರರೋಗ ತಜ್ಞರಾದ ಡಾ- ಕ್ಟರ್ ಸಿದ್ದಲಿಂಗ ಮಠಪತಿ. ಸಾಮಾನ್ಯ ಚಿಕಿತ್ಸೆಯ ತಜ್ಞರಾದ ಡಾಕ್ಟರ್ ಸದಾನಂದ ಪಾಟೀಲ್ ಡಾ. ಪೃಥ್ವಿರಾಜ್ ಬಿರಾದಾರ್ ಡಾಕ್ಟರ್ ಸಂದೀಪ ರಂಗದಾಳ ಆಗಮಿಸುತ್ತಿದ್ದಾರೆ ಸಾರ್ವಜನಿಕರು ಶಿಬಿರದ ಸದುಪಯೋಗಪಡಿಸಿ ಕೊಳ್ಳಬೇಕೆಂದು ಶ್ರೀ ಬಸವೇಶ್ವರ ದೇವಸ್ಥಾನ ಪಂಚ ಕಮಿಟಿ ಮತ್ತು ವಿಶ್ವಸ್ಥ ಸಮಿತಿಯಿಂದ ಪ್ರಕಟಣೆಯಲ್ಲಿ ತಿಳಿಸಲಾಗಿದೆ.




ಬಸವಕಲ್ಯಾಣ:-ತಾಲೂಕಿನ ಖೇಡಾ9(ಬಿ)ಗ್ರಾಮದ ಸದ್ಗುರು ಶ್ರೀ ಶಿವಲಿಂಗೇಶ್ವರ ಜಾತ್ರಾ ಮಹೋತ್ಸವ ಧರ್ಮಸಭೆ ಹಾಗೂ ಪ್ರಶಸ್ತಿ ಪ್ರಧಾನ ಸಮಾರಂಭದಲ್ಲಿ ಅಂಕಣಕಾರರಾದ ನಾಗಪ್ಪಾ ನಿಣ್ಣೆ ಯವರಿಗೆ ಮಠದ ಪೂಜ್ಯರಾದ ಶ್ರೀ ಮ.ನಿ.ಪ್ರ. ಶಿವಲಿಂಗ ಮಹಾಸ್ವಾಮಿಗಳು ಸನ್ಮಾನಿಸಿದರು ಇದೇ ಸಂದರ್ಭದಲ್ಲಿ ಹುಲಸೂರಿನ ಪೂಜ್ಯರಾದ ಡಾ. ಶಿವಾನಂದ ಮಹಾಸ್ವಾಮಿಗಳು. ಹಿರೆನಾಗಾಂವದಪೂಜ್ಯ ಶ್ರೀ ಜಯಶಾಂತಲಿಂಗ ಮಹಾಸ್ವಾಮಿಗಳು ಅಲ್ಲದೆ ಮಾಜಿ ಸಚಿವರಾದ ರಾಜಶೇಖರ್ ಬಿ ಪಾಟೀಲ್. ವೇದಿಕೆ ಮೇಲೆ ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ).

# ಅಗ್ನಿಶಾಮಕ ದಳದಿಂದ ಅಣಕು ಪ್ರದರ್ಶನ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ: ಅಗ್ನಿಶಾಮಕ ಸೇವಾ ಸಪ್ತಾ ದಿನಾಚರಣೆ ಏಪ್ರಿಲ್14ರಿಂದ20ರ ವರೆಗೆ ಆಚರಿಸುತ್ತೇವೆ ಅದರ ನಿಮಿತ್ಯ ಪಟ್ಟಣದ ಜ್ಞಾನಗಂಗಾ ಪ್ರೌಢಶಾಲೆ ಮತ್ತು ಕಾಲೇಜಿನಲ್ಲಿ ಗುರುವಾರ ಅಗ್ನಿಶಾಮಕ ದಳದ ವತಿಯಿಂದ ಈಚೆಗೆ ಬೆಂಕಿ ಆರಿಸುವ ಅಣುಕು ಪ್ರದರ್ಶನ ನಡೆಯಿತು.ಠಾಣಾಧಿಕಾರಿ ನಾರಂದ ಮಾತನಾಡಿ, ಬೆಂಕಿ ಮಾನವ ಜೀವನಕ್ಕೆ ಅವಶ್ಯಕ. ಅಜಾಗೂರುಕತೆ ಮಾಡಿದರೆ ಅಪಾಯಕಾರಿ. ಶಾಲೆಗಳಲ್ಲಿ ಬೆಂಕಿ ನಂದಿಸುವ ಸಾಧನ ಇಟ್ಟುಕೊಂಡಿರುವುದು ಉತ್ತಮ ಬೆಳವಣಿಗೆ. ಅಗ್ನಿಶಾಮಕ ದಳದವರು 24 ಗಂಟೆಯೂ ಸೇವೆ ನೀಡುತ್ತಾರೆ. ಅಗ್ನಿ ದುರಂತ, ತುರ್ತು ಸೇವೆಗಳಿಗಾಗಿ 112 ಸಂಖ್ಯೆಗೆ ಕರೆ ಮಾಡಿ ಸದಾ ಸನ್ನದ್ಧರಾಗಿರುತ್ತಾರೆ ಎಂದರು. ಬೆಂಕಿ ನಂದಿಸುವ ಕಾರ್ಯಾಚರಣೆ ಕುರಿತು ಮಾಹಿತಿ ನೀಡಿದ ಅವರು, ಅಗ್ನಿ ದುರಂತ ಮತ್ತು ತುರ್ತು ಸೇವೆ ಸಂದರ್ಭದಲ್ಲಿ ಜನರು ಅಗ್ನಿ ಶಾಮಕ ಠಾಣೆಯನ್ನು ಸಂಪರ್ಕಿಸಲು ಕೋರಿದರು. ಅರುಣಕುಮಾರ್ ಬೆಂಕಿಯಲ್ಲಿ 4 ರೀತಿಯ ವರ್ಗೀಕರ್ಣಗಳ ಬಗ್ಗೆ ಮಾಹಿತಿ ನೀಡಿದರು. ಅಗ್ನಿಶಾಮಕ ಸಿಬ್ಬಂದಿಯಿಂದ ಬೆಂಕಿ ಆರಿಸುವ ರೋಮಾಂಚಕ ದೃಶ್ಯ ಗಮನ ಸೆಳೆಯಿತು. ಈ ಸಂದರ್ಭದಲ್ಲಿ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಸುರೇಶ್ ಕುಂಬಾರ್, ಮುಖ್ಯಶಿಕ್ಷಕ ಶರದ್ ಕುಂಬಾರ್, ಮಹಾದೇವ ಹಿರಸಕ್ಕರ್, ಅಗ್ನಿಶಾಮಕ ಸಿಬ್ಬಂದಿಗಳಾದ ರಾಮಲಿಂಗ, ವೆಂಕಟರೆಡ್ಡಿ, ಸಂತೋಷ, ಅಸ್ಲಾಂಬಾಷ, ಶಿಕ್ಷಕರಾದ ಕುಪೇಂದ್ರ ಪಾಟೀಲ್, ಶಾಂತಕುಮಾರ್, ಈರಮ್ಮಾ, ಆಶಾಕುಮಾರಿ, ಸುಧಾ ರೆಡ್ಡಿ, ಶಿವಲೀಲಾ, ಜೇಮ್ಸ್, ಗಾಬ್ರಿಲ್, ಗುರುರಾಜ್, ಪಾರ್ವತಿ, ಮೋಹನ್ ಸೇರಿದಂತೆ ವಿದ್ಯಾರ್ಥಿಗಳು ಇದ್ದರು.

ರಾಯಚೂರ ಜಿಲ್ಲೆಯಲ್ಲಿ ಏಪ್ರೀಲ್ 21 ರಿಂದ ಮೇ 4ರವರೆಗೆ ಲಸಿಕಾ ಕಾರ್ಯಕ್ರಮ

# ಉಚಿತ ಸಾಮೂಹಿಕ ಲಸಿಕಾ ಕಾರ್ಯದ ಸದುಪಯೋಗಕ್ಕೆ ಸಚಿವರ ಸಲಹೆ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಏಪ್ರಿಲ್ 17-: ಪಶುಪಾಲನೆ ಮತ್ತು ಪಶು ವೈದ್ಯಕೀಯ ಸೇವಾ ಇಲಾಖೆಯಿಂದ ರಾಷ್ಟ್ರೀಯ ಜಾನುವಾರು ರೋಗನಿಯಂತ್ರಣ ಕಾರ್ಯಕ್ರಮದಡಿಯಲ್ಲಿ 7ನೇ ಸುತ್ತಿನ ಕಾಲು ಬಾಯಿ ರೋಗದ ಉಚಿತ ಸಾಮೂಹಿಕ ಲಸಿಕಾ ಹಾಗೂ ಚರ್ಮಗಂಟು ರೋಗದ ಲಸಿಕಾ ಕಾರ್ಯಕ್ರಮವನ್ನು ಜಿಲ್ಲೆಯಲ್ಲಿ ಏಪ್ರಿಲ್ 21ರಿಂದ ಮೇ 04ರವರೆಗೆ ಹಮ್ಮಿಕೊಳ್ಳಲಾಗಿದ್ದು, ರೈತರು ಕಾರ್ಯಕ್ರಮಕ್ಕೆ ಸಹಕರಿಸುವಂತೆ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಶರಣ ಪ್ರಕಾಶ್ ರುದ್ರಪ್ಪ ಪಾಟೀಲ್ ಅವರು ಹೇಳಿದರು.

ಇತ್ತಿಚೆಗೆ ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ರಾಷ್ಟ್ರೀಯ ಜಾನುವಾರು ರೋಗನಿಯಂತ್ರಣ ಕಾರ್ಯಕ್ರಮದಡಿಯಲ್ಲಿ 7ನೇ ಸುತ್ತಿನ ಕಾಲು ಬಾಯಿ ರೋಗದ ಉಚಿತ ಸಾಮೂಹಿಕ ಲಸಿಕಾ ಹಾಗೂ ಚರ್ಮಗಂಟು ರೋಗದ ಲಸಿಕಾ ಕಾರ್ಯಕ್ರಮದ ಪೋಸ್ಟರ್ ಬಿಡುಗಡೆ ಮಾಡಿ ಅವರು ಮಾತನಾಡಿದರು.

ಕಾರ್ಯಕ್ರಮದಡಿ ಇಲಾಖಾ ಸಿಬ್ಬಂದಿ ತಮ್ಮ ಹಳ್ಳಿಗೆ ಲಸಿಕೆ ಹಾಕಲು ಬಂದಾಗ ಎಲ್ಲಾ ರೈತ ಬಾಂಧವರು ತಮ್ಮಲ್ಲಿರುವ ಎಲ್ಲಾ ದನ ಮತ್ತು ಎಮ್ಮೆ ಮತ್ತು 3 ತಿಂಗಳ ಮೇಲ್ಪಟ್ಟ ಕರುಗಳಿಗೆ ಲಸಿಕೆ ಹಾಕಿಸಿ ಸಾಂಕ್ರಾಮಿಕ ರೋಗದಿಂದಾಗುವ ಆರ್ಥಿಕ ನಷ್ಟವನ್ನು ತಪ್ಪಿಸಬೇಕು ಎಂದರು.

ಇದೇ ಸಂದರ್ಭದಲ್ಲಿ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್.ಎಸ್.ಬೋಸರಾಜು, ರಾಯಚೂರು ಲೋಕಸಭಾ ಸದಸ್ಯರಾದ ಜಿ.ಕುಮಾರ ನಾಯಕ, ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮಾಂತರ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್, ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ಅಧ್ಯಕ್ಷರು ಆಗಿರುವ ಮಸ್ಕಿ ಕ್ಷೇತ್ರದ ಶಾಸಕರಾದ ಆರ್.ಬಸನಗೌಡ ತುರ್ವಿಹಾಳ, ಕರ್ನಾಟಕ ರಾಜ್ಯ ಕೈಗಾರಿಕಾ ಮೂಲಸೌಲಭ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ಸಿಂಧನೂರು ಕ್ಷೇತ್ರದ ಶಾಸಕರಾದ ಹಂಪನಗೌಡ ಬಾದರ್ಲಿ, ರಾಯಚೂರು ನಗರ ಕ್ಷೇತ್ರದ ಶಾಸಕರಾದ ಡಾ.ಎಸ್.ಶಿವರಾಜ ಪಾಟೀಲ್, ಮಾನವಿ ಕ್ಷೇತ್ರದ ಶಾಸಕರಾದ ಜಿ.ಹಂಪಯ್ಯ ನಾಯಕ, ವಿಧಾನ ಪರಿಷತ್ ಶಾಸಕರಾದ ಎ.ವಸಂತಕುಮಾರ, ಬಸನಗೌಡ ಬಾದರ್ಲಿ, ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ರಾಹುಲ್ ತುಕಾರಾಂ ಪಾಂಡ್ವೆ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಪುಟ್ಟಮಾದಯ್ಯ ಎಂ, ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ, ಆಯುಕ್ತರಾದ ಗಜಾನನ ಬಾಳೆ, ಬಸವಣೆಪ್ಪಾ ಕಲಶೆಟ್ಟಿ, ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಾಪಾತ್ರ, ಪಶುಪಾಲನಾ ಮತ್ತು ಪಶುವೈದ್ಯಸೇವಾ ಇಲಾಖೆಯ ಉಪನಿರ್ದೇಶಕರಾದ ಡಾ.ಅಶೋಕ ಕೋಲಾಕರ್ ಸೇರಿದಂತೆ ಇತರರು ಇದ್ದರು.

# ಶ್ರೀ ರಾಮನ ಶೋಭಾ ಯಾತ್ರೆ ನಿಮಿತ್ಯ ಶಾಂತಿ ಸಭೆ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪಾ ಪಟ್ಟಣ್ಣದ ಪೊಲೀಸ ಠಾಣೆಯ ಆವರಣದಲ್ಲಿ ಶ್ರೀ ರಾಮನವಮಿ ಉತ್ಸವ ನಿಮಿತ್ಯ ಗುರುವಾರ ಶಾಂತಿ ಸಭೆ ನಡೆಯಿತ್ತು. ಸಿಪಿಐ ಶ್ರೀನಿವಾಸ ಅಲ್ಲಾಪುರ್ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ಶ್ರೀ ರಾಮನವಮಿ ಉತ್ಸವವನ್ನು ಶಾಂತಿಯುತವಾಗಿ ಆಚರಿಸಿ ಪ್ರೀತಿ ವಿಶ್ವಾಸ ಮರುಕಳಿಸಬೇಕು ಹೊರತು ದ್ವೇಶವಲ್ಲ ಕಾನೂನು ಸುವ್ಯವಸ್ಥೆ ಕಾಪಾಡುವುದರೊಂದಿಗೆ ಶಾಂತಿಯುತವಾಗಿ ಆಚರಿಸಬೇಕು ಎಂದು ತಿಳಿಸಿದರು. ಪಿಎಸ್ಐ ಬಾಷುಮಿಯಾ ಕೊಂಚೂರ್ ಮಾತನಾಡಿ, ಯಾವುದೇ ರೀತಿಯ ಗಲಾಟೆಯಾಗದಂತೆ ಶ್ರೀರಾಮನವಮಿ ಉತ್ಸವ ಆಚರಣೆ ಮಾಡಬೇಕು ಸರ್ಕಾರದ ನಿಯಮಗಳು, ಕಾನೂನು ಪ್ರತಿಯೊಬ್ಬರು ಪಾಲನೆ ಮಾಡಬೇಕು. ತಾವುಗಳು ಪೊಲೀಸ್ ಇಲಾಖೆ ಅಂದರೆ ಕಾನೂನಿಗೆ ಸಹಕರಿಸಿ ಗೌರವಿಸಿದರೆ ನಮ್ಮ ಪೊಲೀಸ್ ಇಲಾಖೆ ಯಾವುದೇ ರೀತಿಯ ತೊಂದರೆಗಳು ಆಗದಂತೆ ನೋಡಿಕೊಳ್ಳುತ್ತೇವೆ ಎಂದರು. ಕೋಮುಗಲಭೆಗಳು ಆಗದಂತೆ ಸೌಹಾರ್ದತೆಯಿಂದ ಎಲ್ಲರೂ ಸಂವಿಧಾನದ ಚೌಕಟ್ಟಿನಲ್ಲಿ ಆಚರಿಸಬೇಕು ಎಂದರು. ಮಲ್ಲಿಕಾರ್ಜುನ ಪಾಟೀಲ್, ರಾಶೀದ್ ಪಟೇಲ್, ಸಚಿನ ಮಠಪತಿ, ಪ್ರವೀಣ, ರಾಜದೀಪ್ ಜಾಬಾ, ಅನೀಲಕುಮಾರ ಸಿಂಧೆ ಶಾಂತಿ ಸಭೆ ಉದ್ದೇಶಿಸಿ ಮಾತನಾಡಿದರು. ಈ ಸಂದರ್ಭದಲ್ಲಿ ಪುರಸಭೆ ಸದಸ್ಯರು, ಶ್ರೀ ರಾಮನವಮಿ ಉತ್ಸವ ಸಮಿತಿ ಪದಾಧಿಕಾರಿಗಳು ಪಟ್ಟಣದ ಪ್ರಮುಖರು, ಹಾಗೂ ಪೊಲೀಸ್ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

# ಬಸವ ಜಯಂತಿಗೆ ಅಗತ್ಯ ಸಿದ್ಧತೆ ಕೈಗೊಳ್ಳಿ: ಶಿವಾನಂದ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಏಪ್ರಿಲ್ 17- ಜಿಲ್ಲಾಡಳಿತದಿಂದ ಏಪ್ರಿಲ್ 30ರಂದು ನಡೆಯಲಿರುವ ಶ್ರೀ ಬಸವ ಜಯಂತ್ಯುತ್ಸವ ಆಚರಣೆಗೆ ಅಗತ್ಯ ಸಿದ್ಧತೆ ಕೈಗೊಳ್ಳಬೇಕು ಎಂದು ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಏಪ್ರಿಲ್ 17ರ ಗುರುವಾರ ನಡೆದ ಶ್ರೀ ಬಸವ ಜಯಂತ್ಯುತ್ಸವದ ಪೂರ್ವಭಾವಿ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಪ್ರತಿ ವರ್ಷದಂತೆ ಈ ವರ್ಷವೂ ಅದ್ದೂರಿಯಾಗಿ ಹಾಗೂ ವಿಜೃಂಭಣೆಯಿಂದ ಜಯಂತಿಯನ್ನು ಆಚರಿಸಲು ಅಗತ್ಯ ಕ್ರಮಕೈಗೊಳ್ಳಬೇಕು. ಏಪ್ರಿಲ್ 30ರ ಬೆಳಿಗ್ಗೆ 9 ಗಂಟೆಗೆ ನಗರದ ವೀರಶೈವ ಕಲ್ಯಾಣ ಮಂಟಪದಲ್ಲಿ ವೇದಿಕೆ ಕಾರ್ಯಕ್ರಮ ನಡೆಯಲಿದೆ. ಅಂದು ಸಂಜೆ ಮೆರವಣಿಗೆ ನಡೆಯಲಿದ್ದು, ಈ ಜಯಂತಿ ಕಾರ್ಯಕ್ರಮಗಳಲ್ಲಿ ಅಧಿಕಾರಿಗಳು ಹಾಗೂ ಸಿಬ್ಬಂದಿ ತಪ್ಪದೇ ಹಾಜರಿರಬೇಕು. ಸಮಾಜದ ಮುಖಂಡರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು ಎಂದು ತಿಳಿಸಿದರು.

ಮಹಾತ್ಮರ ಭಾವಚಿತ್ರಗಳಿಗೆ ಮಾಲಾರ್ಪಣೆ, ಪೂಜಾ ಕಾರ್ಯಕ್ರಮ ಸರಿಯಾಗಿ ನಡೆಯಬೇಕು. ಹೂದಾನಿಗಳಿಂದ ವೇದಿಕೆಯನ್ನು ಅಲಂಕಾರಗೊಳಿಸಬೇಕು. ವೀರಶೈವ ಕಲ್ಯಾಣ ಮಂಟಪದಲ್ಲಿ ಕುಡಿಯುವ ನೀರಿನ ವ್ಯವಸ್ಥೆ ಹಾಗೂ ಸ್ವಚ್ಛತೆ ಕಾಪಾಡಲು ಮಹಾನಗರ ಪಾಲಿಕೆಯ ಅಧಿಕಾರಿಗಳು ಮತ್ತು ಸಿಬ್ಬಂದಿ ಅಗತ್ಯ ಕ್ರಮವಹಿಸಬೇಕು. ಶಿಷ್ಟಾಚಾರ ಪ್ರಕಾರ ಆಹ್ವಾನ ಪತ್ರಿಕೆಯನ್ನು ಮುದ್ರಿಸಿ ಗಣ್ಯರಿಗೆ ತಲುಪಿಸಬೇಕೆಂದು ಸಂಬಂಧಿಸಿದ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಸರ್ಕಾರಿ, ಅರೆ ಸರಕಾರಿ ಕಚೇರಿಗಳಲ್ಲಿ ಕಡ್ಡಾಯವಾಗಿ ಜಯಂತಿಯನ್ನು ಆಚರಣೆ ಮಾಡಬೇಕು ಎಂದರು.

ಮಹಾತ್ಮರ ವಿಚಾರಧಾರೆಗಳು, ಜೀವನ ಸಿದ್ದಾಂತಗಳನ್ನು ಸಾರ್ವಜನಿಕರಿಗೆ ಪರಿಚಯಿಸುವ ಸಲುವಾಗಿ ಜಯಂತಿಗಳನ್ನು ಅರ್ಥಪೂರ್ಣವಾಗಿ ಆಚರಿಸಬೇಕಿದೆ. ಮಹಾತ್ಮರ ಜಯಂತಿಗಳನ್ನು ಒಂದು ಜಾತಿ, ಸಮುದಾಯಗಳಿಗೆ ಸೀಮಿತಗೊಳಿಸಬಾರದು, ಎಲ್ಲರೂ ಭಾಗಿಯಾಗಬೇಕು ಎಂದು ಅವರು ಸಭೆಯ ಮೂಲಕ ಸಾರ್ವಜನಿಕರಲ್ಲಿ ಮನವಿ ಮಾಡಿದರು.

ಯಶಸ್ವಿಯಾಗಿ ಜರುಗಿದ ಕಸಾಪ ತಾಲೂಕ ಪದಾಧಿಕಾರಿಗಳ ಪದಗ್ರಹಣ

# ಕನ್ನಡ ಭಾಷೆ ಶ್ರೇಷ್ಠ ಭಾಷೆ ಕನ್ನಡ ಕಲೆ ಸಾಹಿತ್ಯ, ಸಂಸ್ಕೃತಿ ಉಳಿಸಿ ಬೆಳೆಸಲು ಚನಶೆಟ್ಟಿ ಕರೆ







ಕನ್ನಡ ಸಾಹಿತ್ಯ ಚರಿತ್ರೆ ಬಹಳ ಅಮೋಘವಾದದ್ದು, ಅತಿ ಹೆಚ್ಚು ಜ್ಞಾನಪೀಠ ಪ್ರಶಸ್ತಿ ಪಡೆದ ಭಾಷೆ ನಮ್ಮದಾಗಿದೆ. ಈ ಭೂಮಿ ಶರಣರು ನಾಡು ಆಧ್ಯಾತ್ಮಿಕ ಬೀಡು. ಇಲ್ಲಿಯೇ ವಚನ ಸಾಹಿತ್ಯ, ದಾಸ ಸಾಹಿತ್ಯ, ತತ್ವಪದ, ಜನಪದ ಎಲ್ಲಾ ಕ್ಷೇತ್ರದಲ್ಲಿ ತಾಲ್ಲೂಕು ಕಸಾಪ ಉತ್ತಮ ಕೆಲಸ ಮಾಡಲಿ ಎಂದು ಕನ್ನಡ ಸಾಹಿತ್ಯ ಪರಿಷತ್ ಜಿಲ್ಲಾಧ್ಯಕ್ಷ ಸುರೇಶ ಚೆನ್ನಶೆಟ್ಟಿ ಹಾರೈಸಿದರು.

" ಚಿಟಗುಪ್ಪ ತಾಲೂಕ ಕನ್ನಡ ಸಾಹಿತ್ಯ ಪರಿಷತ್ತಿನ ತಾಲೂಕ ಪದಾಧಿಕಾರಿಗಳ ಪದಗ್ರಹಣ ಹಾಗೂ ಕಾರ್ಯ ಚಟುವಟಿಕೆಗಳ ಉದ್ಘಾಟನಾ ಸಮಾರಂಭವನ್ನು ಯಶ್ವಸಿಯಾಗಿ ಜರುಗಲು ಸಹಕರಿಸಿದ ಕನ್ನಡಾಭಿಮಾನಿಗಳಿಗೆ, ವಿಶೇಷವಾಗಿ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲರಾದ ಡಾ. ಜಯಕುಮಾರ್ ಸಿಂಧೆ ಅವರಿಗೆ ಹಾಗೂ ಸಂಘ ಸಂಸ್ಥೆಗಳ ಅಧ್ಯಕ್ಷರಿಗೆ ಪದಾಧಿಕಾರಿಗಳಿಗೆ, ಜನ ಪ್ರತಿನಿಧಿಗಳಿಗೆ, ಕಾಲೇಜಿನ ವಿದ್ಯಾರ್ಥಿಗಳಿಗೆ ತುಂಬು ಹೃದಯದ ಧನ್ಯವಾದಗಳು ಸಲ್ಲಿಸುತ್ತೇನೆ.



-ಕಸಾಪ ನೂತನ ತಾಲೂಕಾಧ್ಯಕ್ಷ

ಅನೀಲಕುಮಾರ್ ಎಂ. ಸಿಂಧೆ

ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ: ಗಡಿ ಭಾಗದಲ್ಲಿ ಕನ್ನಡ ಭಾಷೆ, ಸಂಸ್ಕೃತಿ ಹಾಗೂ ಸಂಸ್ಕಾರ ಕಣ್ಮರೆಯಾಗುತ್ತಿದೆ. ಅದನ್ನು ಉಳಿಸಿ-ಬೆಳೆಸಲು ಪ್ರತಿಯೊಬ್ಬರೂ ಪ್ರಯತ್ನಿಸಬೇಕು ಎಂದು ಡಾ. ಜಯಕುಮಾರ್ ಸಿಂಧೆ ಹೇಳಿದರು. ಪಟ್ಟಣದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಹಮ್ಮಿಕೊಂಡಿದ್ದ ಕನ್ನಡ ಸಾಹಿತ್ಯ ಪರಿಷತ್ ತಾಲೂಕ ಪದಾಧಿಕಾರಿಗಳ ಪದಗ್ರಹಣ ಹಾಗೂ ಕಾರ್ಯ ಚಟುವಟಿಕೆಗಳ ಉದ್ಘಾಟನಾ ಸಮಾರಂಭ ಉದ್ಘಾಟಿಸಿ ಮಾತನಾಡಿದ ಅವರು, ಕನ್ನಡಕ್ಕೆ ಸಾವಿರಾರು ವರ್ಷಗಳ ಇತಿಹಾಸವಿದೆ. ಹೀಗಾಗಿ ಮೊದಲ ನಾವು ಕನ್ನಡಕ್ಕೆ ಆದ್ಯತೆ ನೀಡಬೇಕು, ನಾವೆಲ್ಲರೂ ಮಾತೃ ಭಾಷೆಯಾಗಿರುವ ಕನ್ನಡದ ಮೇಲೆ ಅಭಿಮಾನವನ್ನು ಬೆಳೆಸಿಕೊಳ್ಳಬೇಕು. ಕನ್ನಡ ನಾಡಿನ ನೆಲ, ಜಲ, ಭಾಷೆ ರಕ್ಷಿಸುವ ಹೊಣೆ ಕನ್ನಡಿಗರಾದ ನಮ್ಮ ಹೊಣೆಗಾರಿಕೆಯಾಗಿದೆ. ವಿದ್ಯಾರ್ಥಿಗಳೂ ಕೂಡ ಕನ್ನಡದ ಬಗ್ಗೆ ಅಭಿಮಾನವನ್ನು ಬೆಳೆಸಿಕೊಳ್ಳಬೇಕು. ಪಾಲಕರು ಮಕ್ಕಳನ್ನೂ ಕನ್ನಡದಲ್ಲಿ ವ್ಯಾಸಂಗ ಮಾಡಿಸುವಂತಾಗಬೇಕು ಎಂದರು. ನಮ್ಮ ಕಾಲೇಜಿನಲ್ಲಿ ವಿದ್ಯಾರ್ಥಿಗಳಿಗೆ ಆಸನದ ವ್ಯವಸ್ಥೆ ಹಾಗೂ ಮೂಲ ಸೌಕರ್ಯ ಕಲ್ಪಿಸಿಕೊಂಡಬೇಕೆಂದು ಮನವಿ ಮಾಡಿದರು. ಗೌರವಾಧ್ಯಕ್ಷ ಮಹಾರುದ್ರಪ್ಪ ಅಣದೂರೆ ಮಾತನಾಡಿ, ಕಲ್ಯಾಣ ಕರ್ನಾಟಕ ಗಡಿ ಭಾಗವಾದ ಚಿಟಗುಪ್ಪ ಪಟ್ಟಣ ಹಾಗೂ ಸುತ್ತಮುತ್ತಲಿನ ಬಹುತೇಕ ಗ್ರಾಮೀಣ ಭಾಗಗಳಲ್ಲಿ ತೆಲುಗು, ಮರಾಠಿ, ಭಾಷೆ ಪ್ರಭಾವ ಹೆಚ್ಚಾಗಿದೆ, ದೈನಿಂದಿನ ವ್ಯವಹಾರಕ್ಕೆ ಕನ್ನಡ ಭಾಷೆಯನ್ನು ಬಳಸಿ, ಭಾಷೆಯನ್ನು ಉಳಿಸುವಲ್ಲಿ ಪ್ರಯತ್ನಿಸಬೇಕು, ಕನ್ನಡ ಸಂಸ್ಕೃತಿ ಬೆಳೆಸುವಲ್ಲಿ ಮುಂದಾಗಬೇಕು, ಕನ್ನಡ, ನೆಲ, ಜಲ, ಭಾಷೆ, ಸಂಸ್ಕೃತಿ ಕಾಪಾಡುವಲ್ಲಿ ಕೇವಲ ಕನ್ನಡ ಪರ ಸಂಘಟನೆಗಳು ಕಾರ್ಯನಿರ್ವಹಿಸಿದರೆ ಸಾಲದು, ನಾಡಿನ ಪ್ರತಿಯೊಬ್ಬ ಪ್ರಜೆ ಮುಂದೆ ಬರಬೇಕು, ಕನ್ನಡ ಭಾಷೆ ಹಲವಾರು ಜ್ಞಾನನ ಪೀಠ ಪ್ರಶಸ್ತಿ ವಿಜೇತರನ್ನು ನೀಡಿದ ಭಾಷೆಯಾಗಿದೆ, ಪ್ರತಿಯೊಬ್ಬ ಕನ್ನಡಿಗರಲ್ಲಿ ಮಾತೃಭಾಷೆಯ ಅಭಿಮಾನ ಇರಬೇಕು ಎಂದು ಮನವಿ ಮಾಡಿದರು. ತಹಶೀಲ್ದಾರ್ ಮಂಜುನಾಥ್ ಪಂಚಾಳ ಮಾತನಾಡಿ, ಕನ್ನಡವನ್ನು ಉಳಿಸುವ ಮನೊಭಾವದೊಂದಿಗೆ ಕನ್ನಡದಲ್ಲಿರುವ ಜ್ಞಾನವನ್ನು ಇತರರಿಗೆ ತಿಳಿ ಹೇಳುವ ಅಗತ್ಯ ಇದೆ. ಇಂದು ಸಾಮಾಜಿಕ ಜಾಲತಾಣಗಳಲ್ಲಿ ಮುಳುಗಿ ಸಾಹಿತ್ಯದ ಚಿಂತನೆಯಲ್ಲಿ ತೊಡಗುವವರ ಸಂಖ್ಯೆ ಕಡಿಮೆಯಾಗುತ್ತಿದೆ. ಸಾಮಾಜಿಕ ಜಾಲತಾಣಗಳನ್ನು ಬಳಸಿ ಕನ್ನಡವನ್ನು ಉಳಿಸುವ ಕಾರ್ಯವನ್ನು ಮಾಡುವತ್ತ ಚಿಂತನೆ ನಡೆಸಬೇಕಿದೆ ಎಂದರು. ಕನ್ನಡ ಭಾಷೆ ಕೇವಲ ಒಂದೆರಡು ದಿನದಿಂದ ನಿರ್ಮಾಣವಾದದ್ದು ಅಲ್ಲ. ಕನ್ನಡ ಭಾಷೆಗೆ ತನ್ನದೇ ಆದ ಇತಿಹಾಸವಿದೆ, ಎಲ್ಲರೂ ಕನ್ನಡ ಭಾಷೆ ಉಳಿಸಿ ಬೆಳೆಸೋಣ ಎಂದು ಹೇಳಿದರು. ಕನ್ನಡ ಸಾಹಿತ್ಯ ಪರಿಷತ್ತಿನ ಜಿಲ್ಲಾಧ್ಯಕ್ಷ ಸುರೇಶ ಚನಶೆಟ್ಟಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಕನ್ನಡ ಸಾಹಿತ್ಯ ಪರಿಷತ್ತು ಕನ್ನಡ ಕಟ್ಟುವ ಕೆಲಸದ ಜೊತೆಗೆ ಕನ್ನಡಿಗರ ಸಮಸ್ಯೆಗಳಿಗೆ ಸ್ಪಂದಿಸುತ್ತಿದೆ. ಕನ್ನಡ ಶ್ರೀಮಂತ ಭಾಷೆ. ಅದಕ್ಕೆ ಸಾವಿರಾರು ವರ್ಷಗಳ ಇತಿಹಾಸವಿದೆ ಎಂದರು. ಪ್ರಸ್ತುತ ದಿನಗಳಲ್ಲಿ ಕನ್ನಡ ಭಾಷೆಗೆ ಹಲವಾರು ಸವಾಲುಗಳಿವೆ. ಸ್ಥಳೀಯ ಪ್ರಜ್ಞಾವಂತರು ಜಾಗೃತರಾಗಿ ಕನ್ನಡದ ಸೇವಕರಾಗಿ ಕಾರ್ಯನಿರ್ವಹಿಸುವುದು ಅಗತ್ಯವಿದೆ, ಕನ್ನಡ ಭಾಷೆ ಉಳಿವಿಗಾಗಿ ಹಗಲಿರಳು ಶ್ರಮಿಸುತ್ತೇನೆ, ಗ್ರಾಮೀಣ ಭಾಗದವೂ ಸಹ ಕನ್ನಡ ಸಾಹಿತ್ಯ ಪರಿಷತ್ತಿನ ಚುರುಕುಗಿಳಿಸುವುದು ಇದೆ, ಪ್ರತಿಯೊಬ್ಬ ಕನ್ನಡಿ ಕನ್ನಡ ನಾಡು, ನುಡಿಗಾಗಿ ಶ್ರಮಿಸಬೇಕು ಎಂದರು. ಚಿಟಗುಪ್ಪ ಪಟ್ಟಣ ಹಲವಾರು ಸ್ವಾತಂತ್ರ್ಯ ಹೋರಾಟಗಾರರು ನೆಲಸಿದ ಪವಿತ್ರ ನೆಲವಾಗಿದೆ ಇಲ್ಲಿನ ಸ್ವಾತಂತ್ರ್ಯ ಹೋರಾಟಗಾರರು ದೇಶ ಪ್ರೇಮಿಗಳಾಗಿದರು ಎಂದರು. ತಾಲೂಕಿನಲ್ಲಿ ಹೊಸ ಸಾಹಿತ್ಯಗಳು, ಕವಿಗಳು, ಹಾಗೂ ಕಲಾವಿದರುಗಳಿಗೆ ಪ್ರೋತ್ಸಾಹಿಸುವ ಕೆಲಸ ಮಾಡುವುದಾಗಿ ತಿಳಿಸಿದರು. ನೂತನ ತಾಲೂಕಾಧ್ಯಕ್ಷ ಅನೀಲಕುಮಾರ ಸಿಂಧೆ ಮಾತನಾಡಿ, ಕಸಾಪ ಕನ್ನಡ ಮನಸ್ಸನ್ನು ಒಂದುಗೂಡಿಸುವ ಕಾರ್ಯದಲ್ಲಿ ತೊಡಗಿದೆ. ಈ ಕಾಲಘಟ್ಟದಲ್ಲಿ ನಾವು ಇತಿಹಾಸವನ್ನು ಮರೆಯುವಂತಿಲ್ಲ. ತಾಲೂಕಿನಲ್ಲಿ ಕಸಾಪಕ್ಕೆ ಸಂಬಂಧಿಸಿದಂತೆ ಅದರ ಇತಿಹಾಸವನ್ನು ಅರಿಯುವ ಕಾರ್ಯವನ್ನು ಮಾಡಿ. ಹಳೆಯ ಅನುಭವದ ಆಧಾರದಿಂದಲೇ ಹೊಸ ಕೆಲಸಗಳನ್ನು ಹಿರಿಯರ ಮಾರ್ಗದರ್ಶನ ಮತ್ತು ಕಿರಿಯರ ಸಹಕಾರದೊಂದಿಗೆ ಮುಂದೆ ಕನ್ನಡಕ್ಕೆ ಸಂಬಂಧಿಸಿದಂತೆ ಉತ್ತಮ ಕಾರ್ಯವನ್ನು ಪ್ರಾಮಾಣಿಕವಾಗಿ ಮಾಡುತ್ತೇನೆ, ತಾಲೂಕ ಕೇಂದ್ರವಾಗಿ ಸುಮಾರು ವರ್ಷಗಳು ಕಳೆದಿವೆ ಆದರೂ ತಾಲೂಕಿಗೆ ಬರಬೇಕಾದ ಕಚೇರಿಗಳು ಬಂದಿಲ್ಲಾ ಮುಂದಿನ ದಿನಗಳಲ್ಲಿ ಕಛೇರಿಗಳು ತರಲು ಉಸ್ತುವಾರಿ ಸಚಿವರಿಗೆ ಶಾಸಕರಿಗೆ, ಎಂಎಲ್ಸಿಗಳಿಗೆ ಮನವಿ ಮಾಡಿ ಕಚೇರಿಗಳು ತರಲು ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆ ಎಂದು ಹೇಳಿದರು. ಚಾಂಗಲೇರಾ-ಚಿಟಗುಪ್ಪ ಹಿರೇಮಠ ಸಂಸ್ಥಾನದ ಪೂಜ್ಯ ಷ.ಬ್ರ.ಗುರುಲಿಂಗ ಶಿವಾಚಾರ್ಯರು ಕಾರ್ಯಕ್ರಮದ ದಿವ್ಯ ಸಾನಿಧ್ಯ ವಹಿಸಿ ಆಶೀರ್ವಚನ ನೀಡಿದರು. ಈ ಸಂದರ್ಭದಲ್ಲಿ ಪುರಸಭೆ ಮುಖ್ಯಾಧಿಕಾರಿ ಹುಸಾಮುದ್ದೀನ್ ಬಾಬಾ, ಹಿರಿಯ ಸಾಹಿತಿ ಮಾಣಿಕ ನೇಳಗಿ, ನಿಕಟಪೂರ್ವ ಅಧ್ಯಕ್ಷ ರಮೇಶ್ ಸಲಗರ್, ರಾಜಕುಮಾರ ಬೇಲೂರೆ, ರಾಜಶೇಖರ ಉಪ್ಪಿನ, ಅಶೋಕಕುಮಾರ್ ಮಹಿಂದ್ರಕ್ಕರ್, ರಾಜಪ್ಪ ಜಮಾದರ್, ಪ್ರೇಮಿಳಾ ರೆಡ್ಡಿ, ಡಾ. ವಿಜಯ ಹಿರಸಕ್ಕರ್, ಮಹಮ್ಮದ್ ಅಸ್ಲಾಂಮಿಯಾ ಸೇರಿದಂತೆ ಕನ್ನಡಾಭಿಮಾನಿಗಳು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ಕಾರ್ಯಕ್ರಮವನ್ನು ಅತಿಥಿ ಉಪನ್ಯಾಸಕ ಚಂದ್ರಕಾಂತ ನಾರಾಯಪುರ್ ನಿರೋಪಿಸಿ ವಂದಿಸಿದರು.

# ಜಾತಿ ಜನಗಣತಿ ಮಾಡಿ ಜಾತಿ ಜಾತಿಗಳ ಮಧ್ಯೆ ವಿಷ ಬೀಜ ಬಿತ್ತಿರುವುದು ಕಾಂಗ್ರೆಸ್ ಪಕ್ಷ: ಡಾ.ಬೆಲ್ದಾಳೆ



ಮಲ್ಲಮ್ಮ ನುಡಿ ವಾರ್ತೆ

ಬೀದರ.ಆ.17: ರಾಜ್ಯದಲ್ಲಿ ಜಾತಿ ಜನಗಣತಿ ಮಾಡಿ ಜಾತಿ ಜಾತಿಗಳ ಮಧ್ಯೆ ವಿಷ ಬೀಜ ಬಿತ್ತಿರುವುದು ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಪಕ್ಷ ಎಂದು ಭಾರತೀಯ ಜನತಾ ಪಕ್ಷದ ರಾಜ್ಯ ಕಾರ್ಯದರ್ಶಿಗಳು ಹಾಗೂ ಬೀದರ್ ದಕ್ಷಿಣ ಕ್ಷೇತ್ರದ ಶಾಸಕ ಡಾ ಶೈಲೇಂದ್ರ ಬೆಲ್ದಾಳೆ ವಾಗ್ದಾಳಿ ನಡೆಸಿದರು.

ಜಿಲ್ಲಾ ಪತ್ರಿಕಾ ಭವನದಲ್ಲಿ ಗುರುವಾರ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿರುವ ಅವರು, ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ಜಾತಿ ಜನಗಣತಿ ಮಾಡಿ ಸೌಹಾರ್ದತೆಯಿಂದ ಬದುಕುತ್ತಿದ್ದ ನಮ್ಮೆಲ್ಲ ಸಹೋದರರ ಮಧ್ಯೆ ಜಗಳ ಹಚ್ಚುವ ಕಾರ್ಯ ಮಾಡಿದ್ದಾರೆ. ಈಗ ಅವರ ಸ್ವ ಪಕ್ಷದವರೇ ಇದನ್ನು ಧಿಕ್ಕರಿಸಿರುವುದರಿಂದ ಅವರಿಗೆ ಸಂಕಟ ಎದುರಾಗಿದೆ ಎಂದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಅಧಿಕಾರ ಸ್ವೀಕರಿಸಿ 22 ತಿಂಗಳು ಕಳೆದಿದೆ. ಅವರು ಬಂದಾಗಿನಿಂದ ರಾಜ್ಯದಲ್ಲಿ ಭ್ರಷ್ಟಾಚಾರ ತಾಂಡವಾಡುತ್ತಿದೆ, ಸರ್ಕಾರ ಆರ್ಥಿಕವಾಗಿ ದಿವಾಳಿಯಾಗಿದೆ, ಯಾವುದೇ ಅಭಿವೃದ್ಧಿ ಕೆಲಸಗಳು ಆಗುತ್ತಿಲ್ಲ. ಶಾಸಕರಿಗೆ ಹೆಚ್ಚಿನ ಅನುದಾನ ದೊರೆಯುತ್ತಿಲ್ಲ. ಅವರ ಸ್ವಪಕ್ಷದ ಶಾಸಕರಿಗೆ ಅನುದಾನ ದೊರೆಯುತ್ತಿಲ್ಲ. ಅಭಿವೃದ್ಧಿ ಕೆಲಸಗಳು ಕುಂಠಿತವಾಗಿವೆ. ನಿನ್ನೆ ಮುಖ್ಯಮಂತ್ರಿಗಳು ತಮ್ಮ ಭಾಷಣದ ಮೂಲಕ ನಮ್ಮ ಸರಕಾರ ಸದೃಢವಾಗಿದೆ ಎಂದು ಹೇಳಿರುವುದು ಹಸಿ ಸುಳ್ಳು ಎರಡನೇ ಹಂತದ ಜನಾಕ್ರೋಶ ಕಾರ್ಯಕ್ರಮ ಹಮ್ಮಿಕೊಳ್ಳುವ ಮುಖ್ಯ ಉದ್ದೇಶವೆಂದರೆ ರಾಜ್ಯದಲ್ಲಿ ಬೆಲೆ ಏರಿಕೆ ಗಗನಕ್ಕೇರಿದೆ. ಪ್ರಧಾನಿ ನರೇಂದ್ರ ಮೋದಿಯವರು ದೇಶದ ಜನರಿಗೆ ಅಚ್ಛೆ ದಿನ್ ಕೊಟ್ಟರೆ, ರಾಜ್ಯ ಸರ್ಕಾರ ನಮ್ಮ ನಾಡಿಗೆ ಮಹೆಂಗಾಯಿ ದಿನ್ ನೆನಪಿಸಿದೆ. ಹಾಲಿನ ದರ ಎರಡು ವರ್ಷದಲ್ಲಿ ಮೂರು ಪಟ್ಟು ಹೆಚ್ಚಾಗಿದೆ ಅಂದರೆ ಪ್ರತಿ ತಿಂಗಳಿಗೆ 270 ಯಿಂದ ರೂ.300 ವರೆಗೆ ಹೆಚ್ಚಳ ಮಾಡಿದಂತಾಗಿದೆ.

ಪೆಟ್ರೋಲ್ ಹಾಗೂ ಡೀಸೆಲ್ ಮೇಲಿನ ಸುಂಕ 3 ರಿಂದದ 5 ರೂಪಾಯಿ ವರೆಗೆ ಏರಿಸಿದೆ. ಕಾಂಗ್ರೆಸ್ನವರು ಕೇಂದ್ರ ಸರ್ಕಾರ ಪೆಟ್ರೋಲ್ ಡೀಸೆಲ್ ಜಾಸ್ತಿ ಮಾಡಿದೆ ಎಂದು ಹೇಳುತ್ತಿದ್ದಾರೆ ಆದರೆ ನರೇಂದ್ರ ಮೋದಿಯವರು ಪೆಟ್ರೋಲಿಯಂ ಕಂಪನಿಗಳ ಮೇಲಿನ ಆದಾಯದ ಮೇಲೆ ತೆರಿಗೆ ಹಾಕಿರುತ್ತಾರೆ. ಉದಾಹರಣೆಯಾಗಿ ಬಿ.ಪಿ.ಸಿ.ಎಲ್, ಐ ಓ ಸಿ ಎಲ್ ನಂತರಾ ಕಂಪನಿಗಳ ಲಾಭಾಂಶದಲ್ಲಿ ತೆರಿಗೆ ಹೆಚ್ಚಿಸಲಾಗಿದೆ ಹೊರತು ಜನರ ಮೇಲಲ್ಲ. ವಿದ್ಯುತ್ ಪ್ರತಿ ಯೂನಿಟ್ ಗೆ 35 ಪೈಸೆ ಜಾಸ್ತಿ ಮಾಡುವುದು ಮಾಡಿರುವುದು ಸ್ಮಾರ್ಟ್ ಮೀಟರ್ ಮೇಲೆ 950 ಇದ್ದಿದ್ದು 25,000 ವರೆಗೆ ಹೆಚ್ಚಿಸಲಾಗಿದೆ. ನೀರಿನ ಪಂಪ್ಸೆಟ್ಟುಗಳ ದರ ರೂ.30000 ಇಂದ 3 ಲಕ್ಷದ ವರೆಗೆ ಹೆಚ್ಚಿಸಿದೆ. ಜನನ ಮರಣ ಪ್ರಮಾಣ ಪತ್ರದ ಬೆಲೆ ಸೇರಿ ಒಟ್ಟು 48 ವಸ್ತುಗಳ ಬೆಲೆ ಈ ಸರ್ಕಾರ ಹೆಚ್ಚಿಸಿದೆ.

ಮೊನ್ನೆ ಬೆಂಗಳೂರಿನಲ್ಲಿ ಕಸದ ಮೇಲೆ ಸಹ ತೆರಿಗೆ ಹಾಕಿ ಈ ಸರ್ಕಾರ ಲೂಟಿ ಮಾಡುತ್ತಿದೆ ಎಂದರು ತಪ್ಪಾಗಲಾರದು. ಮೊದಲು ಸಾವಿರ ರೂಪಾಯಿಗೆ ಇದ್ದ ಮುದ್ರಾಂಕ ಶುಲ್ಕ 5,000 ಗೆ ಹೆಚ್ಚಳವಾಗಿದೆ. 550 ಏಪಿಎ, ಎಂಪಿ, ಟಿ.ಎಮ್.ಸಿ ದರ ಹೆಚ್ಚಳವಾಗಿದೆ. ಕೃಷಿ ಭೂಮಿಗೆ ರೂ.250 ಇದ್ದುದ್ದು ಒಂದು ಸಾವಿರ ರೂಪಾಯಿಗೆ ಹೆಚ್ಚಿಸಲಾಗಿದೆ. ಮದ್ಯದ ಬೆಲೆ 40 ಪ್ರತಿಶತ ಹೆಚ್ಚಳವಾಗಿದೆ. ಗ್ಯಾರಂಟಿ ಹಣ ಸರಿದೂಗಿಸಲು ಇಷ್ಟು ಹೆಚ್ಚಿನ ಭಾರ ಜನರ ಮೇಲೆ ಹೇರಿಸಲಾಗಿದೆ. ಬಸ್ ದರ 15 ಪ್ರತಿಶತ ಹೆಚ್ಚಳ ಮಾಡಲಾಗಿದೆ. ಒಂದು ಕಡೆ ತಾಯಂದಿರಿಗೆ ಉಚಿತ ಬಸ್ ಪ್ರಯಾಣ ಮಾಡಲಾಗಿದೆ ಎಂದು ಹೇಳಿಕೊಂಡು ಮತ್ತೊಂದೆಡೆ ಪ್ರಯಾಣ ದರ ಹೆಚ್ಚಳ ಮಾಡಿ ಜನರ ಕಣ್ಣಿಗೆ ಮಣ್ಣೆರೆಚುವ ಕಾರ್ಯ ಈ ಸರಕಾರ ಮಾಡುತ್ತಿದೆ. ಇಲ್ಲಿಯ ವರೆಗೆ ಒಂದು ಹೊಸ ಬಸ್ ಖರೀದಿ ಮಾಡಲು ಇವರಿಂದ ಸಾಧ್ಯವಾಗಿಲ್ಲ ಉದಾಹರಣೆಯಾಗಿ ನನ್ನ ಕ್ಷೇತ್ರದ ದರೂರ್ ಹಾಗೂ ಮಣ್ಣಳ್ಳಿ ರಸ್ತೆಯಲ್ಲಿ ಓಡಾಡುತ್ತಿದ್ದ ನಾಲ್ಕು ಬಸ್ಸುಗಳ ಪೈಕಿ ಈಗ ಎರಡು ಬಸ್ಸುಗಳು ಮಾತ್ರ ಓಡಾಡುತ್ತಿವೆ. ಆ ಬಸ್ಸುಗಳಲ್ಲಿ 60 ಜನ ಓಡಾಡುವ ಬಸ್ಸಿನಲ್ಲಿ 135ಕ್ಕೂ ಹೆಚ್ಚು ಜನರು ಓಡಾಡುತ್ತಿರುವುದು ನಾಚಿಕೆಗೇಡಿನ ಸಂಗತಿ ಎಂದು ಹರಿಹೈದರು. ಆಸ್ಪತ್ರೆ ಸೇವಾ ಶುಲ್ಕ ರೂ. 50 ಇಂದ 100 ರೂಪಾಯಿಗೆ ಹೆಚ್ಚಿಸಲಾಗಿದೆ. ನೋಂದಣಿ ಶುಲ್ಕ 30% ಹೆಚ್ಚಳ ಮಾಡಲಾಗಿದೆ. ನೀರಿನ ದರ ಮೆಟ್ರೋ ದರ, ರೈತರ ಬಿತ್ತನೆ ಬೀಜ ದರ ಹೆಚ್ಚಿಸಿದೆ. ಬಾಂಡ್ ದರ ಹೆಚ್ಚಳ ಮಾಡಲಾಗಿದೆ ಒಟ್ಟಾರೆ ಅಗತ್ಯ ವಸ್ತುಗಳ ಬೆಲೆ ಈ ಸರ್ಕಾರ ಹೆಚ್ಚಿಗೆ ಮಾಡಿದೆ ಎಂದು ಆರೋಪಿಸಿದರು.

ವಿಧಾನ ಪರಿಷತ್ ಸದಸ್ಯರಾದ ಎಮ್.ಜಿ ಮುಳೆ, ಬಿಜೆಪಿ ಜಿಲ್ಲಾಧ್ಯಕ್ಷರಾದ ಸೋಮನಾಥ ಪಾಟೀಲ, ಮಾಜಿ ಕೇಂದ್ರ ಸಚಿವ ಭಗವಂತ ಖುಬಾ, ಮಾಜಿ ವಿದನ ಪರಿಷತ್ ಸಭಾಪತಿ ರಘುನಾಥರಾವ ಮಲ್ಕಾಪುರೆ, ಸ್ಥಳಿಯ ಹಿರಿಯ ಮುಖಂಡರಾದ ಈಶ್ವರಸಿಂಗ ಠಾಕೂರ, ಕಲಬುರಗಿ ವಿಭಾಗ ಮಾಧ್ಯಮ ಪ್ರಮುಖ ವೆಂಕಟೇಶ ಮಾಲಪಾಟಿ, ಬುಡಾ ಮಾಜಿ ಅದ್ಯಕ್ಷ ಬಾಬು ವಾಲಿ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಪೀರಪ್ಪಾ ಔರಾದೆ, ಕೀರಣ ಪಾಟೀಲ, ಜಿಲ್ಲಾ ಸಹ ವಕ್ತಾರ ಗುರುನಾಥ ರಾಜಗೀರಾ, ಬೀದರ ನಗರ ಅದ್ಯಕ್ಷ ಶಶಿಧರ ಹೋಸಳ್ಳಿ, ಬೀದರ ದಕ್ಷಿಣ ಅದ್ಯಕ್ಷ ಗುರುನಾಥ ರಾಜ-ಗೀರಾ ಬಗದಲ್, ಮಾದ್ಯಮ ಪ್ರಮುಖ ಶ್ರೀನಿವಾಸ ಚೌದರಿ ಇದ್ದರು.

# ಬಾಬು ಜಗಜೀವನರಾಂ ಮೂರ್ತಿ ಸ್ಥಳಾಂತರಿಸಿ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಆ. 17 : ನಗರದ ನಯಾ ಕಮಾನ್ ಹತ್ತಿರ ಹೈದರಾಬಾದ್ ರಸ್ತೆಯಲ್ಲಿ ಇರುವ ಡಾ. ಬಾಬು ಜಗಜೀವನರಾಂ ಅವರ ಮೂರ್ತಿಯನ್ನು ಕೂಡಲೇ ಬೇರೆಡೆ ಸ್ಥಳಾಂತರಿಸಬೇಕು ಎಂದು ಮಾದಿಗ ಮುಖಂಡ ಜಾನಸನ್ ಘೋಡೆ ಒತ್ತಾಯಿಸಿದ್ದಾರೆ.

ಮೂರ್ತಿ ಇರುವ ಸ್ಥಳದಲ್ಲಿ ಸಾರ್ವಜನಿಕರು ಮೂತ್ರ ವಿಸರ್ಜನೆ ಮಾಡುತ್ತಿದ್ದು, ಅಕ್ಕ ಪಕ್ಕದ ಮಾಂಸದ ಅಂಗಡಿಯವರು ತ್ಯಾಜ್ಯ ಹಾಕುತ್ತಿದ್ದಾರೆ. ಇದರಿಂದ ನಾಯಕರಿಗೆ ಅಪಮಾನ ಮಾಡಿದಂತಾಗುತ್ತಿದೆ ಎಂದು ಜಿಲ್ಲಾಧಿಕಾರಿ ಅವರಿಗೆ ಗುರುವಾರ ಸಲ್ಲಿಸಿರುವ ಮನವಿ ಪತ್ರದಲ್ಲಿ ತಿಳಿಸಿದ್ದಾರೆ. ಕನಿಷ್ಠ ಒಂದು ಎಕರೆ ಪ್ರದೇಶದಲ್ಲಿ ಮೂರ್ತಿ ಸ್ಥಾಪಿಸಿ, ಸೌಂದರ್ಯೀಕರಿಸಿ ಜಗಜೀವನರಾಂ ಅವರಿಗೆ ಗೌರವ ಸಲ್ಲಿಸಬೇಕು ಎಂದು ಬೇಡಿಕೆ ಮಂಡಿಸಿದ್ದಾರೆ.

## ಈಶ್ವರ ಖಂಡ್ರೆ ಕಾಂಗ್ರೆಸ್ ವರಿಷ್ಟರಿಗೆ ಕಮಿಷನ್ ಏಜೆಂಟ್ ಆಗಿದ್ದಾರೆ: ಖೂಬಾ




ಮಲ್ಲಮ್ಮ ನುಡಿ ವಾರ್ತೆ

ಬೀದರ. ಆ. 17 : ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಅವರು ಜಿಲ್ಲೆಯಲ್ಲಿ ಭ್ರಷ್ಟಾಚಾರದಲ್ಲಿ ಮುಳುಗಿ ಮುಖ್ಯಮಂತ್ರಿ ಸಿದ್ಧರಾಮಯ್ಯ ಹಾಗೂ ಕಾಂಗ್ರೆಸ್ ವರಿಷ್ಟರಿಗೆ ಲೂಟಿ ಹೊಡೆದ ಹಣ ನೀಡುವ ಮೂಲಕ ಕಮಿಷನ್ ಏಜೆಂಟ್ ಆಗಿದ್ದಾರೆ ಎಂದು ಕೇಂದ್ರ ಸಚಿವ ಭಗವಂತ ಖೂಬಾ ಹೇಳಿದರು. ಸುದ್ದಿಗೋಷ್ಟಿ ಉದ್ದೇಶಿಸಿ ಮಾತನಾಡಿರುವ ಅವರು, ಮೊನ್ನೆ ಪತ್ರಕರ್ತ ರವಿ ಎನ್ನುವವರ ಮೇಲೆ ಹಲ್ಲೆ ಮಾಡಿದ ನಿಮ್ಮ ಇಲಾಖೆಯ ಅಧಿಕಾರಿಗಳಿಗೆ ಅಮಾನತ್ತು ಮಾಡುತ್ತಿರೋ ಅಥವಾ ಪ್ರಶಸ್ತಿ ನೀಡುತ್ತಿರಿ? ಎಂಬುದು ಸ್ಪಷ್ಟಪಡಿಸಬೇಕು.

ನಾನು ಕೇಂದ್ರ ಸಚಿವನಾಗಿದ್ದ ಸಂದರ್ಭದಲ್ಲಿ ಕೇಂದ್ರದಿಂದ ನಮ್ಮ ಪಾಲಿನ 50 ಕೋಟಿ ಹಣ ಸಿಪೆರಟ್ ಕಾಲೇಜಿಗೆ ನೀಡಿದ್ದರೂ ತಾವು ಅದ-ಕ್ಕೆ ನಯಾ ಪೈಸೆ ನೀಡಿಲ್ಲ. ನಮ್ಮ ಯೋಜನೆಗಳನ್ನೆ ತಾನು ಮಾಡಿಸಿರುವೆನೆಂದು ಶಹಬ್ಬಾಸಗಿರಿ ಪಡೆದುಕೊಳ್ಳುತ್ತಿರುವುದು ನಾಚಿಕೆಗೇಡಿನ ಸಂಗತಿ ಎಂದು ಆಕ್ರೋಶ ಹೊರ ಹಾಕಿದರು.

ಬಿಜೆಪಿ ರಾಜ್ಯ ಕಾರ್ಯದರ್ಶಿಗಳು ಹಾಗೂ ಬೀದರ್ ದಕ್ಷಿಣ ಶಾಸಕ ಡಾ.ಶೈಲೇಂದ್ರ ಬೆಲ್ದಾಳೆ, ವಿಧಾನ ಪರಿಷತ್ ಸದಸ್ಯರಾದ ಎಮ್.ಜಿ ಮುಳೆ, ಮಾಜಿ ವಿದನ ಪರಿಷತ್ ಸಭಾಪತಿ ರಘುನಾಥರಾವ ಮಲ್ಕಾಪುರೆ, ಸ್ಥಳಿಯ ಹಿರಿಯ ಮುಖಂಡರಾದ ಈಶ್ವರಸಿಂಗ ಠಾಕೂರ, ಕಲಬುರಗಿ ವಿಭಾಗ ಮಾಧ್ಯಮ ಪ್ರಮುಖ ವೆಂಕಟೇಶ ಮಾಲಪಾಟಿ, ಬುಡಾ ಮಾಜಿ ಅದ್ಯಕ್ಷ ಬಾಬು ವಾಲಿ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಪೀರಪ್ಪಾ ಔರಾದೆ, ಕೀರಣ ಪಾಟೀಲ, ಜಿಲ್ಲಾ ಸಹ ವಕ್ತಾರ ಗುರುನಾಥ ರಾಜಗೀರಾ, ಬೀದರ ನಗರ ಅದ್ಯಕ್ಷ ಶಶಿಧರ ಹೋಸಳ್ಳಿ, ಬೀದರ ದಕ್ಷಿಣ ಅದ್ಯಕ್ಷ ಗುರುನಾಥ ರಾಜ-ಗೀರಾ ಬಗದಲ್, ಮಾದ್ಯಮ ಪ್ರಮುಖ ಶ್ರೀನಿವಾಸ ಚೌದರಿ ಇದ್ದರು.

# ಬೀದರ್ ನಲ್ಲಿ 2025 ಕೋಟಿ ರೂ. ಅಭಿವೃದ್ಧಿ ಕಾಮಗಾರಿಗಳಿಗೆ ಸಿಎಂ ಚಾಲನೆ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಆ. 17 : ಗ್ಯಾರಂಟಿಗಳನ್ನು ಜಾರಿ ಮಾಡಿ ಕಾಂಗ್ರೆಸ್ ಸರ್ಕಾರ ನುಡಿದಂತೆ ನಡೆದಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಬೀದರ್ ಜಿಲ್ಲೆಯಲ್ಲಿ ರೂ 2025 ಕೋಟಿ ಮೌಲ್ಯದ ವಿವಿಧ ಅಭಿವೃದ್ಧಿ ಕಾಮಗಾರಿಗಳ ಉದ್ಘಾಟನೆ ಹಾಗೂ ಶಂಕುಸ್ಥಾಪನೆ ಸಮಾರಂಭ ಹಾಗೂ ಬೀದರ್ ಹಾಗೂ ಬೆಂಗಳೂರು ನಾಗರಿಕ ವಿಮಾನ ಸೇವೆಯ ಪುನರಾರಂಭ ಕಾರ್ಯಕ್ರಮ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

2025ರ ಮೇ 20 ರಂದು ಸರ್ಕಾರಕ್ಕೆ ಎರಡು ವರ್ಷ ತುಂಬಲಿದ್ದು, ಸರ್ಕಾರದ ಎರಡು ವರ್ಷದ ಸಾಧನೆಯ ಕಾರ್ಯಕ್ರಮವನ್ನು ರಾಜ್ಯದ ಯಾವುದಾದರೂ ಜಿಲ್ಲೆಯಲ್ಲಿ ಆಚರಿಸಲಿದ್ದೇವೆ. ಕರ್ನಾಟಕ ರಾಜ್ಯದ ಮುಕುಟ ಎಂದೇ ಕರೆಯಲ್ಪಡುವ ಬೀದರ್ ಜಿಲ್ಲೆಯಲ್ಲಿ ಇಂದು 2025 ಕೋಟಿ. ರೂ. ಅಭಿವೃದ್ಧಿ ಕಾರ್ಯಕ್ರಮಗಳಿಗೆ ಚಾಲನೆ ನೀಡಲಾಗಿದೆ. ಅರಣ್ಯ ಸಚಿವ ಈಶ್ವರ ಖಂಡ್ರೆ ಹಾಗೂ ಶಾಸಕ ರಹೀಂ ಖಾನ್ ರವರು ಕ್ಷೇತ್ರಕ್ಕೆ ಉತ್ತಮ ಕೊಡುಗೆ ನೀಡುತ್ತಿದ್ದಾರೆ. ಲೋಕಸಭೆ ಚುನಾವಣೆಯಲ್ಲಿ ಗೆಲುವು ಸಾಧಿಸಿದ ಸಾಗರ್ ಖಂಡ್ರೆಯವರು ಭವಿಷ್ಯದಲ್ಲಿ ಉತ್ತಮ ಜನನಾಯಕನಾಗಿ ಹೊರಹೊಮ್ಮಲಿ ಎಂದು ಶುಭ ಹಾರೈಸಿದರು. ಬೀದರ್ ನ ಎಲ್ಲ ಕ್ಷೇತ್ರಗಳಿಗೆ ಭೇಟಿ ನೀಡಿದ್ದೇನೆ ಎಂದರು.

ರಾಜ್ಯ ಆರ್ಥಿಕವಾಗಿ ದಿವಾಳಿಯಾಗುತ್ತದೆ ಎಂದು ಟೀಕಿಸಿದ ಬಿಜೆಪಿ

ನಮ್ಮ ಸರ್ಕಾರ ನುಡಿದಂತೆ ನಡೆದಿದೆ. ಚುನಾವಣಾ ಪೂರ್ವದಲ್ಲಿ ನೀಡಿದ್ದ ಐದು ಭರವಸೆಗಳನ್ನು ಕಾಂಗ್ರೆಸ್ ಸರ್ಕಾರ ಜಾರಿ ಮಾಡಿದೆ. ಗ್ಯಾರಂಟಿಗಳನ್ನು ಜಾರಿ ಮಾಡಲು ಸಾಧ್ಯವಿಲ್ಲ ಹಾಗೂ ರಾಜ್ಯ ಆರ್ಥಿಕವಾಗಿ ದಿವಾಳಿಯಾಗುತ್ತದೆ ಎಂದು ಪ್ರಧಾನಿ ಮೋದಿಯವರು ಹಾಗೂ ಬಿಜೆಪಿಯವರು ಟೀಕೆ ಮಾಡಿದರು. ಕಾಂಗ್ರೆಸ್ ಪಕ್ಷ ಕೊಟ್ಟ ಮಾತಿನಂತೆ ನಡೆಯುತ್ತದೆ ಎಂಬುದನ್ನು ಜನರು ಅರಿತಿದ್ದಾರೆ. ಆದ್ದರಿಂದಲೇ ವಿಧಾನಸಭೆ ಹಾಗೂ ಲೋಕಸಭೆಯಲ್ಲಿ ರಾಜ್ಯದ ಜನ ಕಾಂಗ್ರೆಸ್ ಪಕ್ಷವನ್ನು ಬೆಂಬಲಿಸಿದ್ದಾರೆ ಎಂದರು.

ದೇಶದಲ್ಲಿ ಬೆಲೆಯೇರಿಕೆಯಾಗಲು ಕೇಂದ್ರದ ಬಿಜೆಪಿ ಸರ್ಕಾರ ಕಾರಣ ಪ್ರತಿಪಕ್ಷಗಳು ಗ್ಯಾರಂಟಿ ಯೋಜನೆ ಜಾರಿ ಮಾಡಿ ಅಭಿವೃದ್ಧಿ ಕೆಲಸಗಳಿಗೆ ತಿಲಾಂಜಲಿ ಇಟ್ಟಿದ್ದಾರೆ ಎಂದು ಆರೋಪಿಸುತ್ತಾರೆ. ಬಿಜೆಪಿಯ ಆರ್.ಅಶೋಕ್, ನಾರಾಯಣಸ್ವಾಮಿ ಹಾಗೂ ವಿಜಯೇಂದ್ರ ಅವರು ಬೀದರ್ ಬಂದು ನೋಡಲು ಆಹ್ವಾನ ನೀಡುತ್ತೇನೆ ಎಂದು ಸವಾಲು ಹಾಕಿದ ಮುಖ್ಯಮಂತ್ರಿಗಳು, ಸರ್ಕಾರ ದಿವಾಳಿಯಾಗಿದ್ದರೆ 2025 ಕೋಟಿಗಳ ಅಭಿವೃದ್ಧಿ ಕಾರ್ಯಕ್ರಮಗಳಿಗೆ ಶಂಕುಸ್ಥಾಪನೆ ಹಾಗೂ ಉದ್ಘಾಟನೆ ನೆರವೇರಿಸಲು ಸಾಧ್ಯವಾಗುತ್ತಿತ್ತೆ ಎಂದರು. ಬಿಜೆಪಿ ರಾಜ್ಯಾದ್ಯಂತ ಜನಾಕ್ರೋಶ ಯಾತ್ರೆ ಕೈಗೊಂಡಿದ್ದಾರೆ. ಬಿಜೆಪಿಗೆ ಮಾನ ಮರ್ಯಾದೆ ಇದ್ದರೆ, ಕಿಂಚಿತ್ತಾದರೂ ಜನಪರವಾದ ಕಾಳಜಿ ಇದ್ದರೆ ಸುಳ್ಳು ನಾಟಕವನ್ನು ಬಂದ್ ಮಾಡಬೇಕು. ದೇಶದಲ್ಲಿ ಬೆಲೆಯೇರಿಕೆಯಾಗಿದ್ದರೆ ಕೇಂದ್ರದ ಬಿಜೆಪಿ ಸರ್ಕಾರ ಕಾರಣ ಎಂದರು.

ಜನರ ಗಮನವನ್ನು ಬೇ-ರೆಡೆಗೆ ಸೆಳೆಯಲು ಜನಾಕ್ರೋಶ ಯಾತ್ರೆ

ಮನ್ ಮೋಹನ್ ಸಿಂಗ್ ಅವರ ಸರ್ಕಾರವಿದ್ದಾಗ ಪೆಟ್ರೋಲ್ ಬೆಲೆ 73 ರೂ. ಹಾಗೂ ಡೀಸೆಲ್ ಬೆಲೆ 46.59 ಪೈಸೆ ಇತ್ತು. ಇಂದು ಎಷ್ಟಾಗಿದೆ? ಎಂದು ಪ್ರಶ್ನಿಸಿದ ಮುಖ್ಯಮಂತ್ರಿಗಳು ಅಚ್ಛೆ ದಿನ್ ಬರುತ್ತದೆ ಎಂದು ನರೇಂದ್ರ ಮೋದಿ ಹೇಳಿದ್ದರು. ಅಚ್ಛೆ ದಿನ್ ಬಂದಿದೆಯೇ ಎಂದು ಪ್ರಶ್ನಿಸಿದರು. ಅಬಕಾರಿ ಡ್ಯೂಟಿ ಡೀಸೆಲ್ ಮೇಲೆ 100.45 ರೂಗಳಿತ್ತು. 9.40ರೂ ಪೆಟ್ರೋಲ್ ಮೇಲಿತ್ತು ಇಂದು ಎಷ್ಟಾಗಿದೆ ಎಂದು ಮುಖ್ಯಮಂತ್ರಿಗಳು ಪ್ರಶ್ನಿಸಿದರು. ಅಂತರರಾಷ್ಟ್ರೀಯ ಮಾರುಕಟ್ಟೆಯಲ್ಲಿ ಕಚ್ಚಾತೈಲದ ಬೆಲೆ 118 ರಿಂದ 120 ರೂ. ವರೆಗಿತ್ತು. ಮೊನ್ನೆಯವರೆಗೆ ಅಂತರರಾಷ್ಟ್ರೀಯ ಮಾರುಕಟ್ಟೆಯಲ್ಲಿ ಕಚ್ಚಾತೈಲ ಬೆಲೆ ಕಡಿಮೆಯಾಗಿದೆ. 35 ಡಾಲರ್ ಗಳಿಗೆ ಇಳಿದಿದೆ. 120 ಡಾಲರ್ ಇರುವಾಗ ಪೆಟ್ರೋಲ್ ಬೆಲೆ 73, ಡೀಸಲ್ ಬೆಲೆ 46 ರೂ.ಗಳಿದ್ದರೆ, ಇಂದು 90 ರೂ.ಗಳಿಗಿಂತ ಹೆಚ್ಚು ಮಾಡಿದ್ದಾರೆ. ಇದಕ್ಕೆ ನರೇಂದ್ರ ಮೋದಿಯವರ ಕೇಂದ್ರ ಸರ್ಕಾರ. ಬಿಜೆಪಿಯವರಿಗೆ ಮಾನ ಮರ್ಯಾದೆ ಇದ್ದರೆ ಇದ್ದನ್ನು ಕೇಳಬೇಕು. ಗ್ಯಾಸ್ ಸಿಲಿಂಡರ್ ಬೆಲೆ 420 ರೂ ಇತ್ತು, ಈಗ ಸಾವಿರ ರೂಪಾಯಿಗೆ ಏರಿದೆ. ಅವರ ಆಡಳಿತದ ತಪ್ಪುಗಳನ್ನು ಮುಚ್ಚಿಕೊಂಡು ಜನರ ಗಮನವನ್ನು ಬೇ-ರೆಡೆಗೆ ಸೆಳೆಯಲು ಜನಾಕ್ರೋಶ ಯಾತ್ರೆ ಕೈಗೊಂಡಿದ್ದಾರೆ. ಬಿಜೆಪಿ ಲಜ್ಜೆಗೆಟ್ಟವರು. 2018 ರಲ್ಲಿ ನೀಡಿದ್ದ 400 ಭರವಸೆಗಳಲ್ಲಿ 10% ಭರವಸೆಗಳನ್ನು ಈಡೇರಿಸಲಾಗಲಿಲ್ಲ. 2008, 2018ರಲ್ಲಿ ಜನರ ಆಶೀರ್ವಾದ ಪಡೆದು ಅಧಿಕಾರಕ್ಕೆ ಬಂದಿಲ್ಲ. ಹಿಂಬಾಗಿಲಿನಿಂದ ಅಧಿಕಾರಕ್ಕೆ ಬಂದರು. ಆಪರೇಶನ್ ಕಮಲ ಮಾಡಿ ಅಧಿಕಾರಕ್ಕೆ ಬಂದವರು ನಮಗೆ ಪಾಠ ಹೇಳಲು ಬರುತ್ತಾರೆ. ಇವರು ಜನವಿರೋಧಿ ಸರ್ಕಾರ ಎಂದು ಹಣೆಪಟ್ಟಿ ಹಚ್ಚಲು ಹೊರಟಿದ್ದಾರೆ.

ಕಳೆದ ವರ್ಷ 3 ಲಕ್ಷ 71ಸಾವಿರ ಕೋಟಿ ರೂ.ಗಳ ಬಜೆಟ್ ಮಂಡಿಸಿದ್ದು, ಈ ವರ್ಷ 4 ಲಕ್ಷದ 9 ಸಾವಿರ ಕೋಟಿ ರೂ.ಗಳ ಬಜೆಟ್ ಮಂಡಿಸಲಾಗಿದೆ. ಆರ್ಥಿಕವಾಗಿ ಸದೃಢವಿದ್ದುದ್ದಕ್ಕೆ 38 ಸಾವಿರ ಕೋಟಿಗಳಿಗೆ ಬಜೆಟ್ ಗಾತ್ರ ಹೆಚ್ಚಿಸಲು ಸಾಧ್ಯವಾಯಿತು ಎಂದರು.

ಕಳೆದ ವರ್ಷ 56 ಸಾವಿರ ಕೋಟಿ ಬಂಡವಾಳ ವೆಚ್ಚ ಮಾಡಿದ್ದರೆ, ಈ ವರ್ಷ 83 ಸಾವಿರ ಕೋಟಿ.ಗಳ ಬಂಡವಾಳ ವೆಚ್ಚ ಮಾಡಲಾಗುವುದು. ದಿವಾಳಿಯಾಗಿರುವ ಸರ್ಕಾರ ಬಂಡವಾಳ ವೆಚ್ಚ ಮಾಡಲು ಸಾಧ್ಯವಿಲ್ಲ. 2002 ರಲ್ಲಿ ವಿತ್ತೀಯ ಹೊಣೆಗಾರಿಕೆ ಕಾಯ್ದೆಯನ್ನು ಕರ್ನಾಟಕದಲ್ಲಿ ಜಾರಿ ಮಾಡಿದ್ದು, ಅದರ ಮೂರು ಮಾನದಂಡಗಳ ಪ್ರಕಾರ ಬಜೆಟ್ ಮಂಡನೆ ಮಾಡುವಾಗ ಹಣಕಾಸಿನ ಪರಿಸ್ಥಿತಿ ಚೆನ್ನಾಗಿದ್ದರೆ ರಿವನ್ಯೂ ಸರ್ಪ್ಲಸ್ ಇರಬೇಕು. ಸಾಲ ಮಾಡುವಾಗ ಜಿಡಿಪಿ ಯ 25% ಒಳಗಿರಬೇಕು. ನಾವು ಈ ಮಾನದಂಡಗಳ ಒಳಗೆ ಇದ್ದೇವೆ. ನಾವು ಅಭಿವೃದ್ಧಿಗೆ, ಗ್ಯಾರಂಟಿ ಯೋಜನೆಗಳಿಗೆ ಹಣವನ್ನು ಮೀಸಲಿಟ್ಟಿದ್ದೇವೆ. ಕಳೆದ ವರ್ಷ ಗ್ಯಾರಂಟಿಗಳಿಗೆ 52009 ಸಾವಿರ ಕೋಟಿ ಮೀಸಲಿಟ್ಟು, ಈ ವರ್ಷ 50,018 ಕೋಟಿ ಗಳನ್ನು ಮೀಸಲಿಟ್ಟಿದ್ದು, ಕರ್ನಾಟಕ ಆರ್ಥಿಕವಾಗಿ ಸದೃಢವಾಗಿದೆ. ಆದ್ದರಿಂದಲೇ 2025 ಕೋಟಿ ರೂ.ಗಳ ಅಭಿವೃದ್ಧಿ ಕಾರ್ಯಗಳನ್ನು ರೂಪಿಸಲಾಗಿದೆ ಎಂದರು.

ಸುಳ್ಳೇ ಬಿಜೆಪಿ ಮನೆದೇವರು

ಬಿಜೆಪಿ ಸುಳ್ಳು ಹೇಳುವುದರಲ್ಲಿ ನಿಸ್ಸೀಮರು. ಸುಳ್ಳು ಅವರ ಮನೆದೇವರು. ರಾಜ್ಯದ ಜನರನ್ನು ಸುಳ್ಳು ಹೇಳಿ ದಾರಿ ತಪ್ಪಿಸುವ ಕೆಲಸ ಮಾಡುತ್ತಿದ್ದಾರೆ. ಸರ್ಕಾರ, ಹಾಗೂ ನನ್ನ ಮೇಲೆ ಅಪಪ್ರಚಾರ, ಸುಳ್ಳು ಆಪಾದನೆಗಳನ್ನು ಮಾಡಿದ್ದಾರೆ. ಆದರೂ ಮೂರೂ ಉಪಚುನಾವಣೆಗಳಲ್ಲಿ ನಾವು ಗೆದ್ದಿದ್ದೇವೆ ಎಂದರು.

# ಇಂದು ಬೀದರ್‌ನಲ್ಲಿ ಎರಡನೇ ಜನಾಕ್ರೋಶ ಯಾತ್ರೆ: ಬಿಜೆಪಿ ರಾಜ್ಯಾಧ್ಯಕ್ಷರು ಸೇರಿ ಪಕ್ಷದ ಹಲವು ರಾಜ್ಯ ನಾಯಕರು ಭಾಗಿ: ಸೋಮನಾಥ ಪಾಟೀಲ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಆ. 17 : ಇಂದು ಸಾಯಂಕಾಲ ನಗರದಲ್ಲಿ ಎರಡನೇ ಜನಾಕ್ರೋಶ ಯಾತ್ರೆ ಹಮ್ಮಿಕೊಳ್ಳಲಾಗಿದ್ದು, ಪಕ್ಷದ ರಾಜ್ಯಾಧ್ಯಕ್ಷರಾದ ಬಿ.ವೈ ವಿಜಯಂದ್ರ, ವಿಧಾನ ಸಭೆ ವಿರೋಧ ಪಕ್ಷದ ನಾಯಕರಾದ ಆರ್.ಅಶೋಕ, ವಿಧಾನ ಪರಿಷತ್ ವಿರೋಧ ಪಕ್ಷದ ನಾಯಕರಾದ ನಾರಾಯಣಸ್ವಾಮಿ, ಸಂಸದ ಗೋವಿಂದ ಕಾರಜೋಳ, ವಿಧಾನ ಪರಿಷತ್ ಸದಸ್ಯರಾದ ಸಿ.ಟಿ ರವಿ, ಮಾಜಿ ಸಚಿವ ಬಿ.ಶ್ರೀರಾಮಲು, ಕಲಬುರಗಿ ದಕ್ಷಿಣ ಶಾಸಕ ಬಸವರಾಜ ಮತ್ತಿಮೂಡ ಸೇರಿದಂತೆ ಪಕ್ಷದ ಹಲವು ನಾತಕರು ಭಾಗವಹಿಸಲಿದ್ದಾರೆ ಎಂದು ಭಾರತೀಯ ಜನತಾ ಪಕ್ಷದ ಜಿಲ್ಲಾಧ್ಯಕ್ಷ ಸೋಮನಾಥ ಪಾಟೀಲ ಹೇಳಿದರು.

ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಟಿ ಉದ್ದೇಶಿಸಿ ಮಾತನಾಡಿರುವ ಅವರು, ಮೊನ್ನೆ ಬೆಳಗಾವಿಯಿಂದ ಆರಂಭವಾಗಿ ನಿನ್ನೆ ಬಾಗಲಕೋಟೆ, ವಿಜಯಪುರ, ಇಂದು ಕಲಬುರಗಿ ಮುಗಿಸಿ ಸಂಜೆ 4 ಗಂಟೆಗೆ ಬೀದರ್‌ಗೆ ಆಗಮಿಸಲಿದ್ದಾರೆ. ನಗರದ ಗಣೇಶ ಮೈದಾನಕ್ಕೆ ತೆರಳಿ ಅಲ್ಲಿ ಗಣೇಶನಿಗೆ ವಿಶೇಷ ಪೂಜೆ ಸಲ್ಲಿಸಿ, ನಂತರ ಗಣೇಶ ಮೈದಾನದಿಂದ ಆರಂಭವಾಗುವ ಜನಾಕ್ರೋಶ ಯಾತ್ರೆ ರಾಜ್ಯ ಕಾಂಗ್ರೆಸ್ ಸರ್ಕಾರದ ಜನವಿರೋಧಿ ನೀತಿಯನ್ನು ಜನರ ಮನೆ ಬಾಗಿಲಿಗೆ ತಲುಪಿಸುವ ಉದ್ದೇಶದಿಂದ ರ್‍ಯಾಲಿ ಹಮ್ಮಿಕೊಂಡು ಗುದಗೆ ಆಸ್ಪತ್ರೆ ಮುಂಭಾಗದಿಂದ ಜನರಲ್ ಕರಿಯಪ್ಪ ವೃತ್ತ, ಅಂಬೇಡ್ಕರ್ ಸರ್ಕಲ್ ಮಾರ್ಗವಾಗಿ ಶಿವಾಜಿ ವೃತ್ತದಲ್ಲಿ ಕೊನೆಗೊಂಡು ಅಲ್ಲಿ ಸಾರ್ವಜನಿಕ ಕಾರ್ಯಕ್ರಮ ಜರುಗಲಿದೆ ಎಂದು ವಿವರಿಸಿದರು ಮುಂದುವರೆದು ಮಾತನಾಡಿರುವ ಅವರು, ಜಿಲ್ಲಾ ಉಸ್ತುವಾರಿ ಸಚಿವರು ತಮ್ಮ ಮಗನಿಗೆ ಮುಖ್ಯಮಂತ್ರಿಗಳಿಂದ ಹೊಗಳಿಸಲು ಸಿದ್ಧರಾಮಯ್ಯ ಹಾಗೂ ಅರ್ಧ ಡಜನ್ ಸಚಿವರಿಗೆ ಕರೆಸಿದ್ದಾರೆ. ಪೌರಾಡಳಿತ ಸಚಿವ ರಹಿಮ್ ಖಾನ್ ಅವರು ಜಿಲ್ಲೆಯಲ್ಲಿ ಉರ್ದು ಬೋರ್ಡ್ ಅಳವಡಿಸಲು ಶುರು ಮಾಡಿದ್ದಾರೆ. ಧರ್ಮಾಧರಿತ ಮೀಸಲಾತಿ ನೀಡಲು ಹೊರಟಿರುವ ಕಾಂಗ್ರೆಸ್ ಸರ್ಕಾರಕ್ಕೆ ತಕ್ಕ ಶಾಸ್ತಿ ಮಾಡಲು ಜನಾಕ್ರೋಶ ಯಾತ್ರೆ ಹಮ್ಮಿಕೊಂಡಿದ್ದೇವೆ. ವಿಧಾನ ಸಭೆಯಲ್ಲಿ ನಮ್ಮ 18 ಜನ ಶಾಸಕರ ವಿರೂದ್ಧ ಸ್ಪೀಕರ್ ನಡೆದುಕೊಂಡ ರೀತಿ ಖಂಡಿಸಲು ಈ ಯಾತ್ರೆ ಹಮ್ಮಿಕೊಳ್ಳಲಾಗಿದ್ದು ಹೆಚ್ಚಿನ ಸಂಖ್ಯೆಯಲ್ಲಿ ಜನರು ಈ ಕಾರ್ಯಕ್ರಮದಲ್ಲಿ ಭಾಗವಹಿಸುವಂತೆ ಪಾಟೀಲ ಮನವಿ ಮಾಡಿದರು.

# ಔರಾದ್ | ಪತ್ರಕರ್ತ ರವಿ ಬೋಸುಂಡೆ ಮೇಲೆ ಹಲ್ಲೆ; ಖಂಡನೀಯ



ಬೀದರ.ಏ. 17: ಬೀದರ್‌ನ ಕರ್ತವ್ಯ ನಿರತ ಪತ್ರಕರ್ತ ರವಿ ಭೂಸಂಡೆ ಎಂಬುವರ ಮೇಲೆ ಅರಣ್ಯ ಇಲಾಖೆ ಅಧಿಕಾರಿಗಳು ನಡೆಸಿದ ಹಲ್ಲೆಯನ್ನು ಔರಾದ್ ತಾಲ್ಲೂಕು ಕಾರ್ಯನಿರತ ಪತ್ರಕರ್ತರ ಸಂಘದ ಪದಾಧಿಕಾರಿಗಳು ತೀವ್ರವಾಗಿ ಖಂಡಿಸಿದ್ದಾರೆ.

ಈ ಸಂಬಂಧ ಔರಾದ್ ತಾಲ್ಲೂಕು ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಶಿವಾನಂದ ಮೊಕ್ತೆದಾರ್ ನೇತೃತ್ವದಲ್ಲಿ ಗುರುವಾರ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಹೆಸರಿಗೆ ಬರೆದ ಹಕ್ಕೊತ್ತಾಯ ಪತ್ರವನ್ನು ತಹಸೀಲ್ದಾರ್ ಮಹೇಶ್ ಪಾಟೀಲ್ ಅವರಿಗೆ ಸಲ್ಲಿಸಿದರು

ಬೀದರ ನಗರದ ಚಿದ್ರಿ ರಸ್ತೆಯಲ್ಲಿ ಏ.15 ರಂದು ರಾತ್ರಿ ರವಿ ಭೂಸಂಡೆ ಅವರು ವರದಿಗಾಗಿ ಫೋಟೋ ತೆಗೆಯಲು ಹೋದ ವೇಳೆ ಪ್ರಾದೇಶಿಕ ಅರಣ್ಯ ಇಲಾಖೆ ಅಧಿಕಾರಿ ದಸ್ತಗಿರ, ಉಪವಲಯ ಅರಣ್ಯಾಧಿಕಾರಿ ಶಾಂತಕುಮಾರ, ವಲಯ ಅರಣ್ಯಾಧಿಕಾರಿ ಗಜಾನಂದ, ಬೀಟ್ ವನಪಾಲಕ ಸಂಗಮೇಶ ಸೇರಿದಂತೆ ಇನ್ನೂ ಮೂರಾಲ್ಕು ಜನರು ಹಲ್ಲೆ ನಡೆಸಿದ್ದಾರೆ' ಎಂದು ಆರೋಪಿಸಿದರು.

ನಾನು ಪತ್ರಕರ್ತ ಎಂದು ರವಿ ಭೂಸಂಡೆ ಅವರು ಹೇಳಿದರೂ ಮತ್ತಷ್ಟು ಅತಿರೇಕಕ್ಕೇರಿದ ಅಧಿಕಾರಿಗಳು ರವಿ ಅವರನ್ನು ಕಪಾಳಮೋಕ್ಷ ಮಾಡಿ ದರ್ಪ ಮೆರೆದಿದ್ದು ಅಲ್ಲದೆ, ಅವಾಚ್ಯ ಶಬ್ದಗಳಿಂದ ನಿಂದಿಸಿದ್ದಾರೆ. ಬಳಿಕ ಪತ್ರಕರ್ತ ರವಿ ಅವರನ್ನು ಅಧಿಕಾರಿಗಳು ತಮ್ಮ ಖಾಸಗಿ ವಾಹನದಲ್ಲಿ ಪೊಲೀಸ್ ಠಾಣೆಗೆ ಕರೆದೊಯ್ದಿದ್ದಾರೆ' ಎಂದು ಮನವಿಯಲ್ಲಿ ತಿಳಿಸಿದ್ದಾರೆ.

ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಮಾಧ್ಯಮಗಳಿಗೆ ತನ್ನದೇ ಆದ ಸ್ವಾತಂತ್ರ್ಯವಿದೆ. ಅರಣ್ಯ ಅಧಿಕಾರಿಗಳು ಕರ್ತವ್ಯನಿರತ ಪತ್ರಕರ್ತರ ಮೇಲೆ ಅಮಾನುಷವಾಗಿ ಹಲ್ಲೆ ನಡೆಸಿ ಮಾಧ್ಯಮ ಸ್ವತಂತ್ರ ಹತ್ತಿಕ್ಕಲು ಹೊರಟಿರುವುದು ಪ್ರಜಾಪ್ರಭುತ್ವ ವ್ಯವಸ್ಥೆಗೆ ಕೊಡಲಿ ಪೆಟ್ಟಾಗಿದೆ. ಕೂಡಲೇ ತಪ್ಪಿತಸ್ಥ ಅರಣ್ಯಾಧಿಕಾರಿಗಳಿಗೆ ಬಂಧಿಸಿ, ಅವರನ್ನು ಸೇವೆಯಿಂದ ವಜಾಗೊಳಿಸಬೇಕು' ಎಂದು ಒತ್ತಾಯಿಸಿದರು.

ತಾಲೂಕು ಕಾರ್ಯನಿರತ ಪತ್ರಕರ್ತ ಸಂಘದ ಪ್ರಧಾನ ಕಾರ್ಯದರ್ಶಿ ಸುನೀಲ್ ಜಿರೋಬೆ, ಖಜಾಂಚಿ ಸುಧೀರ್ ಕುಮಾರ್ ಪಾಂಡ್ರೆ, ಕಾರ್ಯದರ್ಶಿ ಅಹ್ಮದ್ ಸೇರಿದಂತೆ ಪ್ರಮುಖರಾದ ಶರಣಪ್ಪ ಚಿಟ್ಮೆ, ಮಲ್ಲಪ್ಪಗೌಡ, ಶಿವಕುಮಾರ್ ಸಾಧುರೆ, ಅಮರ ಸ್ವಾಮಿ, ರಾಚಯ್ಯ ಸ್ವಾಮಿ, ರವಿ ಮಠಪತಿ, ಅಂಬರೇಶ್ ಚಿದ್ರೆ, ರವಿ ಸಿಂಧೆ, ಪ್ರಭುಲಿಂಗ ಸ್ವಾಮಿ ಹಾಗೂ ಮತ್ತಿತರರಿದ್ದರು.

# ಯುವ ಪೀಳಿಗೆಗೆ ಜಾನಪದ ತರಬೇತಿ ಅತ್ಯವಶ್ಯಕ – ಗೊಲ್ಲಹಳ್ಳಿ ಶಿವಪ್ರಸಾದ್



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಯುವ ಪೀಳಿಗೆಗೆ ಜಾನಪದ ತರಬೇತಿ ನೀಡುವುದು ಅತ್ಯವಶ್ಯಕವಾಗಿದ್ದು, ಕರ್ನಾಟಕ ಜಾನಪದ ಅಕಾಡೆಮಿಯಿಂದ ಜಾನಪದ ಸಂಭ್ರಮ, ವಿವಿಧ ವಿಚಾರ ಸಂಕೀರ್ಣಗಳು ಮತ್ತು ತರಬೇತಿಗಳನ್ನು ಹಮ್ಮಿಕೊಳ್ಳುವ ಮೂಲಕ ಸಾರ್ವಜನಿಕರಲ್ಲಿ ಹಾಗೂ ವಿಶೇಷವಾಗಿ ಯುವ ಸಮುದಾಯದಲ್ಲಿ ಅರಿವು ಮೂಡಿಸಲಾಗುತ್ತಿದೆ ಎಂದು ಕರ್ನಾಟಕ ಜಾನಪದ ಅಕಾಡೆಮಿಯ ಅಧ್ಯಕ್ಷರಾದ ಗೊಲ್ಲಹಳ್ಳಿ ಶಿವಪ್ರಸಾದ್ ಹೇಳಿದರು.

ಅವರು ಗುರುವಾರ ನಗರದ ಶ್ರೀ ಗವಿಸಿದ್ಧೇಶ್ವರ ಬಿ.ಇಡಿ ಮಹಾವಿದ್ಯಾಲಯದಲ್ಲಿ ಕರ್ನಾಟಕ ಜಾನಪದ ಅಕಾಡೆಮಿಯ, ಬೆಂಗಳೂರು ವತಿಯಿಂದ ಆಯೋಜಿಸಲಾಗಿದ್ದ ಗಿಡ–ಗಿಡಕ ಕೂತು ಕೈಮಾಡಿ ಕರೀತಾವ... ಉಪನ್ಯಾಸ ಹಾಗೂ ಜಾನಪದ ಗಾಯನ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ನಾವು ಕರಿದರೆ ನಮಗೆ ಇಷ್ಟವಾದವರನ್ನ, ಆಪ್ತರನ್ನ, ಸ್ನೇಹಿತರನ್ನ ಹಾಗೂ ಬಂದು ಬಳಗದವರನ್ನ ಕರೆಯಬಹುದು. ಆದರೆ ಗಿಡದ ಮೇಲೆ ಕುಳಿತ ಪಕ್ಷಿಗಳಾಗಲಿ, ಜೀವಕೋಟಿಗೆ ಸಂಬಂಧಿಸಿದ ಸಸ್ತನಿಗಳಾಗಲಿ ಕರೆದರೆ ಅವರ ಬಂದುಗಳನ್ನ ಮಾತ್ರ ಕರಿಯಲ್ಲ ಇಡೀ ಜಗತ್ತಿನ್ನೆ ಕರೆಯುತ್ತವೆ. ಹಾಗಾಗಿ ಈ ಕಾರ್ಯಕ್ರಮಕ್ಕೆ ಗಿಡ–ಗಿಡಕ ಕೂತು ಕೈ ಮಾಡಿ ಕರೀತಾವ.. ಹಾಡುವ ಹಕ್ಕಿ ಬಳಗ ಎಂಬ ಶೀರ್ಷಿಕೆಯನ್ನು ತೆಗೆದುಕೊಂಡು ಕಾರ್ಯಕ್ರಮ ಹಮ್ಮಿಕೊಳ್ಳಲಾಗುತ್ತಿದೆ. ಜಾನಪದ ಅಕಾಡೆಮಿ ಇವತ್ತಿನ ದಿನಗಳಲ್ಲಿ ಎಲ್ಲಾ ಜಿಲ್ಲೆಗಳಲ್ಲಿ ವಿಶಿಷ್ಟ ಶಿರ್ಷಿಕೆ ಕೋಡುವುದರ ಮುಕಾಂತರ ಕಾರ್ಯಕ್ರಮ ಮಾಡುತ್ತ ಬಂದಿದ್ದು, ಚಾಮರಾಜನಗರದಲ್ಲಿ 'ಮತೀಗಲ ಧರಣಿಸೋ ಮಹಾದೇವ' ಎನ್ನುವ ಶೀರ್ಷಿಕೆ ನೀಡಿ ಕಾರ್ಯಕ್ರಮ ಮಾಡಿದೇವು. ಹಾಗೆಯೇ ಕೋಲಾರದಲ್ಲಿ 'ನಾದವಾದಿಸೇ ಮನಸೇ ನಾದವಾದಿಸೆ' ಎಂದು, ಚಿತ್ರದುರ್ಗದಲ್ಲಿ 'ಕಿಲಾರಿ ಕಲರವ' ಎಂದು ಹಾಗೂ ತುಮಕೂರು ವಿಶ್ವವಿದ್ಯಾಲಯದಲ್ಲಿ 'ವಿದ್ಯಾರ್ಥಿಗಳ ಕಡೆ ನಮ್ಮ ನಡೆ' ಎನ್ನುವಂತಹ ವಿಶೇಷ ಶೀರ್ಷಿಕೆಗಳನ್ನ ನೀಡುತ್ತಾ ಕಾರ್ಯಕ್ರಮ ಮಾಡುತ್ತಾ, ಇಂದು ಕೊಪ್ಪಳದಲ್ಲಿ 'ಗಿಡ–ಗಿಡಕ ಕೂತು ಕೈ ಮಾಡಿ ಕರಿತಾವ' ಎನ್ನುವಂತಹ ವಿಶೇಷ ಶೀರ್ಷಿಕೆ ನೀಡಿದ್ದೇವೆ ಎಂದರು. ಇವತ್ತು ಸಮಾಜದಲ್ಲಿ ರಿಯಾಲಿಟಿ ಇಲ್ಲದಿರುವ ಶೋಗಳನ್ನ, ರಿಯಾಲಿಟಿ ಶೋಗಳು ಎಂದು ನಾವು ಕರಿತಾ ಇದ್ದೇವೆ. ಯಾವ ಕಡೆ ನಮ್ಮ ನಡೆ ಪ್ರಾರಂಭವಾಗಿದೆ ಎಂದರೆ ರಿಯಾಲಿಟಿ ಇಲ್ಲದನ್ನ ನಾವೆ ಮಾತನಾಡಿ, ಜನರನ್ನ ಒಪ್ಪಿಸುವ ಕೆಲಸವಾಗುತ್ತಿದೆ. ಇದು ಮುಂದಿನ ದಿನಮಾನಗಳಲ್ಲಿ ಬಹಳ ಆತಂಕಾರಿ ವಾತವರಣ ಸೃಷ್ಟಿ ಮಾಡುತ್ತೆದೆ. ಇದನ್ನು ತಪ್ಪಿಸಲು ಇಂತಹ ಕಾರ್ಯಕ್ರಮಗಳನ್ನು ಮಾಡುವುದು ಅತ್ಯವಶ್ಯಕವಾಗಿದೆ. ಮುಂದಿನ ದಿನಮಾನಗಳಲ್ಲಿ ಸಂಬಂಧಗಳನ್ನ ಸಾಲದ ರೂಪದಲ್ಲಿ ತರಬೇಕಾಗುತ್ತದೆ ಎನ್ನುವ ಆತಂಕ ನಮ್ಮನ್ನ ಕಾಡುತ್ತಿದೆ. ಸಂಬಂಧಗಳು ಎನ್ನುವುದು ಬಹಳ ದೋಡ್ಡದ್ದಾಗಿದ್ದು, ಅವುಗಳನ್ನು ಕಾಪಾಡಿಕೊಳ್ಳುವುದು ಮುಖ್ಯವಾಗಿದೆ ಎಂದು ಹೇಳಿದರು. ಸಾಹಿತಿ ಡಾ. ಸಿದ್ದಲಿಂಗಪ್ಪ ಕೊಟ್ನೆಕಲ್ ಅವರು "ಕೊಪ್ಪಳ ಪರಿಸರದ ಜನಪದ ಭಾಷಾ ವೈಶಿಷ್ಟತೆ" ವಿಷಯದ ಕುರಿತು ಉಪನ್ಯಾಸ ನೀಡಿ, ಜನಪದ ಎಂದರೆ, ಒಂದು ಭಾಗವಾಗಿದ್ದು, ಜನಪದ ಸಾಹಿತ್ಯ, ಜನಪದ ಸಂಗೀತ, ಜನಪದ ಸಂಸ್ಕೃತಿ, ಜನಪದ ಊಟೋಪಚಾರಗಳು, ಜನಪದ ಉಡುಗೆ–ತೊಡುಗೆಗಳು, ಜನಪರ ವಾದ್ಯಗಳು, ಇವೆಲ್ಲವುಗಳ ಸಮಗ್ರವಾದುದೇ ಜಾನಪದ. ಸಿಂಪಿ ಲಿಂಗಣ್ಣ ಮತ್ತು ದ.ರಾ ಬೇಂದ್ರರವರು ಹಳ್ಳಿ–ಹಳ್ಳಿಗಳಿಂದ ಅನೇಕ ಹಾಡುಗಳು, ಕಥೆಗಳು, ಅನೇಕ ಅಂತಿ ಪದಗಳನ್ನು ಸಂಗ್ರಹ ಮಾಡುವ ಮೂಲಕ ಜನಪದ ಉಳುವಿಕೆಗೆ ಶ್ರಮಿಸಿದ್ದಾರೆ. ಜನಪದ ವಿಷಯಗಳ ಬಗ್ಗೆ ಅಧ್ಯಾಯನ ಹೆಚ್ಚಾಗಿ ನಡೆಯಲಿ. ಕೊಪ್ಪಳ ಭಾಗದಲ್ಲಿ ಕಡಿಮೆ ಅಕ್ಷರದಲ್ಲಿ ಬರುವ ಶಬ್ಧಗಳ ಬಳಕೆ ಮಾಡಲಾಗುತ್ತದೆ. ಕೊಪ್ಪಳ ಪರಿಸರ ಭಾಷೆಯು ವಿಶಿಷ್ಟವಾಗಿದ್ದು, ಅದನ್ನು ನಾವು ತಿಳಿದುಕೊಂಡು ಮುಂದುವರೆಸಿಕೊಂಡು ಹೋಗಬೇಕು ಎಂದು ವಿವರವಾಗಿ ಮಾತನಾಡಿದರು.

ಕರ್ನಾಟಕ ಜಾನಪದ ಅಕಾಡೆಮಿಯ ಸದಸ್ಯರಾದ ಡಾ. ಜೀವನಸಾಬ್ ವಾಲಿಕಾರ್ ಬಿನ್ನಾಳ ಅವರು ಪ್ರಾಸ್ತಾವಿಕ ನುಡಿಗಳನ್ನಾಡಿ, ಗಿಡ, ಗಿಡಕ ಕೂತು ಕೈ ಮಾಡಿ ಕರೀತಾವ.. ಎನ್ನುವ ವಿಶೇಷ ಶೀರ್ಷಿಕೆಯಲ್ಲಿ ಕೊಪ್ಪಳ ಜಿಲ್ಲೆಯಲ್ಲಿ ಜಾನಪದ ಅಕಾಡೆಮಿಯ ಕಾರ್ಯಕ್ರಮ ಹಮ್ಮಿಕೊಂಡಿದ್ದು, ಇದು ಈ ವರ್ಷದ ಮೊದಲನೆಯ ಕಾರ್ಯಕ್ರಮ. ಇಂತಹ ವಿವಿಧ ಶೀರ್ಷಿಕೆಯ ಕಾರ್ಯಕ್ರಮಗಳನ್ನ ಕರ್ನಾಟಕದ ಸುಮಾರು 12 ರಿಂದ 15 ಜಿಲ್ಲೆಗಳಲ್ಲಿ ಹಮ್ಮಿಕೊಂಡಿದೆ. ಶಿವರಾಜ ಎಸ್. ತಂಗಡಗಿ ಅವರು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರಾದ ಬಳಿಕ ಇಂತಹ ಕಾರ್ಯಕ್ರಮಗಳು ನಮ್ಮ ಭಾಗದಲ್ಲಿ ನಡೆಯಲು ಸಾಧ್ಯವಾಗಿದೆ ಮತ್ತು ವಿವಿಧ ಅಕಾಡೆಮಿಗಳಿಗೂ ನಮ್ಮ ಭಾಗದ ಜನರು ಸದಸ್ಯರಾಗಲು ಅವಕಾಶ ಸಿಕ್ಕಿದ್ದು, ಕರ್ನಾಟಕದ ಇತಿಹಾಸದಲ್ಲಿ ಕೊಪ್ಪಳ ಜಿಲ್ಲೆಯಿಂದ ಸುಮಾರು 12 ಜನ ಸದಸ್ಯರನ್ನು ವಿವಿಧ ಅಕಾಡೆಮಿಗೆ ನೇಮಿಸಿರುವ ಕೀರ್ತಿ ಸಚಿವರಿಗೆ ಸಲ್ಲುತ್ತದೆ ಎಂದರು.

ಕನ್ನಡನಾಡಿನ ಅಸ್ಮಿಯತೆ ಎಂದರೆ ಅದು ಜನಪದ. ಜಾನಪದ ತಾಯಿ ತನ್ನೊಡಲೊಳಗೆ ಹಲವಾರು ಬಹುತ್ವವನ್ನು, ಸಾಮರಸ್ಯವನ್ನು, ಸೌಂದರ್ಯವನ್ನು, ಎಲ್ಲದಕ್ಕೂ ಮಿಗಿಲಾಗಿ ಸಹೋದರತ್ವವನ್ನು ಹಾಗೂ ಕೂಡಿ ಬಾಳುವುದನ್ನು ತನ್ನ ಒಡಲಿನೊಳಗೆ ಹೊದಗಿಸಿಕೋಂಡಿದೆ. ಇಂತಹ ಜಾನಪದ ಸಂಸ್ಕೃತಿಯನ್ನ ನಾಡಿನುದ್ದಕ್ಕು ಬಿತ್ತರಿಸಲು ಬಹುದೊಡ್ಡ ಅಕಾಡೆಮಿ ಕರ್ನಾಟಕ ರಾಜ್ಯದಲ್ಲಿ ಆರಂಭವಾಗಿದೆ ಎಂದು ಹೇಳಿದರು. ಶ್ರೀ ಗವಿಸಿದ್ಧೇಶ್ವರ ಬಿ.ಇಡಿ ಮಹಾವಿದ್ಯಾಲಯದ ಪ್ರಾಚಾರ್ಯರು ಡಾ. ಎಸ್.ಬಿ. ಕಂಬಾರ ಅವರು ಅಧ್ಯಕ್ಷತೆ ವಹಿಸಿದ್ದರು. ಪದ್ಮಶ್ರೀ ಪ್ರಶಸ್ತಿ ಪುರಸ್ಕೃತರಾದ ಭೀಮವ್ವ ಶಿಳ್ಳೆಕ್ಯಾತರ, ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರಾದ ಪ್ರೊ. ಅಲ್ಲಮಪ್ರಭು ಬೆಟ್ಟದೂರು ಮತ್ತು ಎ.ಎಮ್.ಮದರಿ ಅವರಿಗೆ ಕಾರ್ಯಕ್ರಮದಲ್ಲಿ ಸನ್ಮಾನಿಸಿ ಗೌರವಿಸಲಾಯಿತು.

ಈ ಸಂದರ್ಭದಲ್ಲಿ ಕರ್ನಾಟಕ ಜಾನಪದ ಅಕಾಡೆಮಿಯ ಸದಸ್ಯರಾದ ಮೆಹಬೂಬ ಕಿಲ್ಲೆದಾರ, ಕರ್ನಾಟಕ ಜಾನಪದ ಪರಿಷತ್ ಕೊಪ್ಪಳ ಜಿಲ್ಲಾ ಅಧ್ಯಕ್ಷರಾದ ಹಿರಿಯ ಕಲಾವಿಧ ಶರಣಪ್ಪ ವಡಿಗೇರಿ ಸೇರಿದಂತೆ ಕನ್ನಡ ಜಾನಪದ ಪರಿಷತ್ ಕೊಪ್ಪಳ ಜಿಲ್ಲಾಧ್ಯಕ್ಷರಾದ ಮಂಜುನಾಥ ಗೊಂಡಬಾಳ, ಕರ್ನಾಟಕ ಚಲಚಿತ್ರ ಅಕಾಡೆಮಿ ಸದಸ್ಯರಾದ ಸಾವಿತ್ರಿ ಮುಜಮದಾರ ಸೇರಿದಂತೆ ಹಾಡು ಹಕ್ಕಿ ಬಳಗದ ಹಾಗೂ ವಾದ್ಯ ವೃಂದದವರು ಉಪಸ್ಥಿತರಿದ್ದರು.

## ಏ.23 ಕ್ಕೆ ಯಾದಗಿರಿಗೆ ಜನಾಕ್ರೋಶ ಯಾತ್ರೆ : ನವೀನ್ ಕೋಟ್ಟಿಗೆ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ: ರಾಜ್ಯ ಸರ್ಕಾರದ ವೈಫಲ್ಯಗಳನ್ನು ಜನರಿಗೆ ತಿಳಿಸುವ ನಿಟ್ಟಿನಲ್ಲಿ ಭಾರತೀಯ ಜನತಾ ಪಕ್ಷ ಹಮ್ಮಿಕೊಂಡಿರುವ ಜನಾಕ್ರೋಶ ಯಾತ್ರೆ ಏ.23 ರಂದು ನಗರಕ್ಕೆ ಆಗಮಿಸಲಿದೆ ಎಂದು ಬಿಜೆಪಿ ನಾಯಕ, ಎಂಎಲ್ ಸಿ ನವೀನ ಕೋಟ್ಟಿಗೆ ಹೇಳಿದರು.

ಇಲ್ಲಿನ ಜಿಲ್ಲಾ ಬಿಜೆಪಿ ಕಚೇರಿಯಲ್ಲಿ ಗುರುವಾರ ಸಂಜೆ ನಡೆದ ಪಕ್ಷದ ಪದಾಧಿಕಾರಿಗಳ ಸಭೆ ನಂತರ ತಮ್ಮನ್ನು ಭೇಟಿ ಮಾಡಿದ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ನೇತೃತ್ವದಲ್ಲಿ ನಢಯಲಿರುವ ಜನಾಕ್ರೋಶ ಯಾತ್ರೆಯಲ್ಲಿ ಪ್ರತಿಪಕ್ಷದ ನಾಯಕರುಗಳಾದ ಆರ್.ಅಶೋಕ, ಛಲವಾದಿ ನಾರಾಯಣಸ್ವಾಮಿ, ಸಂಸದ ಗೋವಿಂದ ಕಾರಜೋಳ, ಮಾಜಿ ಮಂತ್ರಿ ಶ್ರೀರಾಮುಲು ಸೇರಿದಂತೆಯೇ ಅನೇಕರು ಭಾಗವಹಿಸಲಿದ್ದು, ಜಿಲ್ಲೆಯ ನಾಲ್ಕು ವಿಧಾನಸಭಾ ಕ್ಷೇತ್ರಗಳ ಪಕ್ಷದ ನಾಯಕರು, ಕಾರ್ಯಕರ್ತರು ಅಂದಿನ ಹೋರಾಟಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಬೇಕೆಂದು ಮನವಿ ಮಾಡಿದರು.

ಅಂದು ಬೆಳಗ್ಗೆ 10ರಿಂದ ಮಧ್ಯಾಹ್ನ 12.30 ರ ತನಕ ರಾಜ್ಯ ಸರ್ಕಾರದ ವಿರುದ್ಧ ಹೋರಾಟ ನಡೆಯಲಿದೆ.

ಸಿಎಂ ಸಿದ್ದರಾಮಯ್ಯ ನೇತೃತ್ವದ ರಾಜ್ಯ ಸರ್ಕಾರ ಎಲ್ಲ ರಂಗಗಳಲ್ಲಿ ವಿಫಲವಾಗಿದೆ. ಜನರ ವಿಶ್ವಾಸ ಕಳೆದುಕೊಂಡಿದ್ದಾರೆ, ಹಳ್ಳಿಗಳಲ್ಲಿ ಸಾರ್ವಜನಿಕರು ಹಿಡಿ ಶಾಪ ಹಾಕುತ್ತಿದ್ದಾರೆಂದು ನವೀನ್ ದೂರಿದರು.

ಕಲ್ಯಾಣ ಕರ್ನಾಟಕ ಭಾಗವನ್ನು ಅಭಿವೃದ್ಧಿ ಮಾಡುವುದಾಗಿ ಸುಳ್ಳು ಹೇಳಿ ಜನರಿಗೆ ಮೊಸ ಮಾಡಲಾಗುತ್ತಿದೆ. ಕಲಬುರಗಿಯಲ್ಲಿ ನಡೆದ ಸಂಪುಟ ಸಭೆಯಲ್ಲಿ ಕೈಗೊಂಡ ಯಾವ ನಿರ್ಧಾರವೂ ಜಾರಿಯಾಗಿಲ್ಲ ಎಂದು ಅವರು ದೂರಿದರು.

ಈಗ ಜಾತಿಗಣತಿ ವಿಷಯದಲ್ಲಿ ಎಲ್ಲ ನಡುವೆ ಜಗಳ ಹಚ್ಚುವ ಕೆಲಸ ಈ ಸರ್ಕಾರ ಮಾಡಿದೆ ಎಂದರು.

ಈ ಸಂದರ್ಭದಲ್ಲಿ ಜಿಲ್ಲಾಧ್ಯಕ್ಷ ಬಸವರಾಜ ವಿಭೂತಿಹಳ್ಳಿ, ರಾಜ್ಯ ಕಾರ್ಯದರ್ಶಿ ಮತ್ತು ನಗರಸಭೆ ಅಧ್ಯಕ್ಷೆ ಕು.ಲಲಿತಾ ಅನಪುರ, ವಿಭಾಗ ಪ್ರಭಾರಿ ರಾಜಕೂಮಾರ ಪಾಟೀಲ್, ಮಾಜಿ ರಾಜ್ಯ ಉಪಾಧ್ಯಕ್ಷೆ ನಾಗರತ್ನ ಕುಪ್ಪಿ,ಹಿರಿಯ ಮುಖಂಡ ರಾಚಣ್ಣಗೌಡ ಮುದ್ನಾಳ,ಯುವ ಮುಖಂಡ ಮಹೇಶರಡ್ಡಿ ಮುದ್ನಾಳ, ರಾಜ್ಯ ಅಲೆಮಾರಿ ಅರೆ ಅಲೆಮಾರಿ ನಿಗಮದ ಮಾಜಿ ಅಧ್ಯಕ್ಷ ದೇವಿಂದ್ರನಾಥನಾದ,ಚಂದ್ರಶೇಖರ ಮಾಗನೂರು,ಚನ್ನುಗೌಡ ಬಿಳಾರ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಗುರು ಕಾಮ ಮತ್ತು ಮೇಲಪ್ಪ ಗುಳಗಿ, ಜಿಲ್ಲಾ ಉಪಾಧ್ಯಕ್ಷ ಬಸವರಾಜ ಸೋನ್ನದ, ಜಿಲ್ಲಾ ಮಾಧ್ಯಮ ಸಂಚಾಲಕ ವಿರುಪಾಕ್ಷಯ್ಯ ಸ್ವಾಮಿ ಹೆಡಗಿಮದ್ರಾ ಸೇರಿದಂತೆ ಅನೇಕರು ಉಪಸ್ಥಿತರಿದ್ದರು..

## ಏಳನೇ ಸುತ್ತಿನ ಜಾನುವಾರು ಕಾಲುಬಾಯಿ ರೋಗ ಲಸಿಕಾ ಅಭಿಯಾನ ಯಶಸ್ವಿಯಾಗಿ ಹಮ್ಮಿಕೊಳ್ಳಲು ಸೂಚನೆ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ: ಏ:17– ಜಿಲ್ಲಾ ಪಂಚಾಯತ್ ಹಾಗೂ ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆ,ಯಾದಗಿರಿ ಇವರ ಸಹಯೋಗದಲ್ಲಿ ರಾಷ್ಟ್ರೀಯ ಜಾನುವಾರು ರೋಗ ನಿಯಂತ್ರಣ ಕಾರ್ಯಕ್ರಮದಡಿಯಲ್ಲಿ 7ನೇ ಸುತ್ತಿನ ಕಾಲುಬಾಯಿ ರೋಗ ಲಸಿಕಾ ಅಭಿಯಾನ ಇದೇ ಏಪ್ರಿಲ್ 21ರಿಂದ ಜೂನ್ 4 ರವರೆಗೆ ಯಶಸ್ವಿಯಾಗಿ ಹಮ್ಮಿಕೊಳ್ಳುವಂತೆ ಅಪರ್ ಜಿಲ್ಲಾಧಿಕಾರಿ ಶರಣಬಸಪ್ಪ ಕೋಟೆಪ್ಪಗೋಳ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಇಂದು 7ನೇ ಸುತ್ತಿನ ಜಾನುವಾರು ಕಾಲುಬಾಯಿ ಲಸಿಕಾ ಅಭಿಯಾನ ಕುರಿತು ಪೂರ್ವಭಾವಿ ಸಿದ್ಧತಾ ಸಭೆಯ ಅಧ್ಯಕ್ಷತೆವಹಿಸಿ ಅವರು ಮಾತನಾಡಿದರು.

ರೈತರಿಗೆ ಆರ್ಥಿಕ ಸಂಕಷ್ಟ ಉಂಟುಮಾಡುವ ಜಾನುವಾರು ಕಾಲುಬಾಯಿ ರೋಗದಿಂದ ರಾಜ್ಯ ಹಾಗೂ ಜಿಲ್ಲೆಯನ್ನು ಮುಕ್ತ ಮಾಡುವಲ್ಲಿ ಸಹಕರಿಸಬೇಕು. ಕಾಲುಬಾಯಿ ರೋಗವು ವೈರಾಣುವಿನಿಂದ ಬರುವ ಅಂಟು ಜಾಡ್ಯವಾಗಿದ್ದು,ಲಸಿಕೆ ಹಾಕುವದೊಂದೇ ರೋಗ ನಿಯಂತ್ರಿಸಲು ಏಕೈಕ ಮಾರ್ಗವಾಗಿರುವದರಿಂದ ರೈತರು ಹಾಗೂ ಹೈನುಗಾರರು ಸಹಕರಿಸುವಂತೆ ಸಲಹೆ ನೀಡಿದರು.

ಕಾಲುಬಾಯಿ ರೋಗವು ಎತ್ತು ಹೋರಿ, ಹಸು,ಎಮ್ಮೆ ಮತ್ತು ಹಂದಿಗಳಿಗೆ ತಗಲುವ ಮಾರಕ ರೋಗವಾಗಿದೆ.ಈ ಹಿನ್ನೆಲೆಯಲ್ಲಿ ಲಸಿಕೆ ಹಾಕಲು ಪಶುವೈದ್ಯರು,ಪಶು ಸಖಿಯರು, ಡಿಪ್ಲೊಮಾ ವಿದ್ಯಾರ್ಥಿಗಳು ಆಗಮಿಸಿದ ಸಂದರ್ಭದಲ್ಲಿ ಸಹಕರಿಸುವಂತೆ ತಿಳಿಸಿರುವ ಅವರು ನಿಗದಿತ ಯಾವುದೇ ಜಾನುವಾರು ಈ ಲಸಿಕೆಯಿಂದ ವಂಚಿತರಾಗ ದಂತೆ ಎಚ್ಚರಿಕೆ ವಹಿಸಲು ಅವರು.ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು.

ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆ ಉಪನಿರ್ದೇಶಕ ರಾಜು ದೇಶಮುಖ್ ಅವರು ಮಾತನಾಡಿ, ವರ್ಷದಲ್ಲಿ ಕನಿಷ್ಠ ಎರಡು ಬಾರಿ ಲಸಿಕೆ ಹಾಕುವದರಿಂದ ರೋಗ ತಡೆಗಟ್ಟಲು ಸಾಧ್ಯ. ಮೂರು ತಿಂಗಳ ಮೇಲ್ಪಟ್ಟ ಎಲ್ಲ ಕರುಗಳಿಗೆ ತಪ್ಪದೇ ಲಸಿಕೆ ಹಾಕಿಸಿದ ನಂತರ ಮತ್ತೊಮ್ಮೆ 3 ರಿಂದ 5 ವಾರದೊಳಗೆ ಬೂಸ್ಟರ್ ಲಸಿಕೆ ಹಾಕಿಸಲಾಗುತ್ತದೆ. ಅದರಂತೆ ದನ ಮತ್ತು ಎಮ್ಮೆ ಗಳಿಗೂ ಲಸಿಕೆ ಹಾಕಲಾಗುತ್ತಿದೆ. ಗರ್ಭಧರಿಸಿದ ಹಸು ಎಮ್ಮೆ ಗಳಿಗೂ ಲಸಿಕೆ ಹಾಕಲಾಗುತ್ತಿದ್ದು,ಹಿಂದೆ ಎಷ್ಟೇ ಬಾರಿ ಲಸಿಕೆ ಹಾಕಿಸಿದ್ದರೂ ಸಹ ಪ್ರತಿ ಆರು ತಿಂಗಳಿಗೊಮ್ಮೆ ಕೈಗೊಳ್ಳುವ ಈ ಸಾಮೂಹಿಕ ಲಸಿಕಾ ಕಾರ್ಯಕ್ರಮದಲ್ಲಿ ತಪ್ಪದೇ, ಲಸಿಕೆ ಹಾಕಿಸುವಂತೆ ಅವರು ತಿಳಿಸಿದರು.

ಜಿಲ್ಲೆಯಲ್ಲಿ 20ನೇ ಜಾನುವಾರು ಗಣತಿ ಅನ್ವಯ ಒಟ್ಟು 2,90,774 ದನ, ಎಮ್ಮೆ,ಹಂದಿ ಗುರುತಿಸಿದೆ. ಈ ಲಸಿಕೆ ಕಾರ್ಯಕ್ರಮದ ಅಂಗವಾಗಿ 2,84,400 ಲಸಿಕೆ (ಡೋಜ್ಗಳಲ್ಲಿ) ಸರಬರಾಜು ಆಗಿವೆ. ಜಿಲ್ಲೆಯ 19 ಪಶು ಚಿಕಿತ್ಸಾಲಯ ಹಾಗೂ ಪಶು ಆಸ್ಪತ್ರೆಗಳಲ್ಲಿ 178 ವ್ಯಾಕ್ಸಿನ್ ಕ್ಯಾರಿಯರ್ಸ ಲಭ್ಯ ಇವೆ.193 ಲಸಿಕೆದಾರರ ವ್ಯವಸ್ಥೆ ಮಾಡಲಾಗಿದೆ. ತುರ್ತು ಔಷಧಿಗಳು ಲಭ್ಯ ಇವೆ ಎಂದು ಸಭೆಗೆ ತಿಳಿಸಿದರು.ಸಭೆಯಲ್ಲಿ ಅಪರ್ ಜಿಲ್ಲಾಧಿಕಾರಿಗಳು ಪ್ರಚಾರ ಸಾಮಗ್ರಿಗಳನ್ನು ಬಿಡುಗಡೆ ಮಾಡಿದರು.

ಪಶುವೈದ್ಯಾಧಿಕಾರಿಗಳು ಹಾಗೂ ಇತರ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

## ಏ.19 ರಂದು ಶ್ರೀ ಭಗೀರಥ ಮಹರ್ಷಿ ಜಯಂತಿ ಪೂರ್ವಸಿದ್ಧತಾ ಸಭೆ

ಯಾದಗಿರಿ : ಏಪ್ರಿಲ್ 17: 2025ರ ಮೇ 4 ರಂದು ಶ್ರೀ ಭಗೀರಥ ಮಹರ್ಷಿ ಜಯಂತ್ಯೋತ್ಸವ ಆಚರಣೆ–ಯ ಹಿನ್ನೆಲೆ ಪೂರ್ವಸಿದ್ಧತಾ ಸಭೆಯು ಅಪರ ಜಿಲ್ಲಾಧಿಕಾರಿ ಶ್ರೀ ಶರಣಬಸಪ್ಪ ಕೋಟೆಪ್ಪಗೋಳ ಅವರ ಅಧ್ಯಕ್ಷತೆಯಲ್ಲಿ 2025ರ ಏಪ್ರಿಲ್ 19ರ ಶನಿವಾರ ರಂದು ಮಧ್ಯಾಹ್ನ 2 ಗಂಟೆಗೆ ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಸಭೆ ಆಯೋಜಿಸಲಾಗಿದೆ ಎಂದು ಯಾದಗಿರಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕಿ ಉತ್ತರಾದೇವಿ ಮಠಪತಿ ಅವರು ತಿಳಿಸಿದ್ದಾರೆ.

ಶ್ರೀ ಭಗೀರಥ ಮಹರ್ಷಿ ಜಯಂತ್ಯೋತ್ಸವವನ್ನು ಜಿಲ್ಲಾಡಳಿತ ಹಾಗೂ ವಿವಿಧ ಇಲಾಖೆಗಳ ಸಹಯೋಗದೊಂದಿಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಯಾದಗಿರಿ ಜಿಲ್ಲಾವತಿಯಿಂದ ಏರ್ಪಡಿಲಾಗಿದ್ದು, ಈ ಜಯಂತಿಯನ್ನು ಆಚರಿಸುವ ಸಲುವಾಗಿ ಪೂರ್ವಸಿದ್ಧತಾ ಸಭೆಗೆ ಜಿಲ್ಲಾ ಮಟ್ಟದ ಎಲ್ಲಾ ಅಧಿಕಾರಿಗಳು, ಈ ಸಮಾಜದ ಬಾಂಧವರು, ಕನ್ನಡಪರ ಸಂಘಟನೆಗಳು ಹಾಗೂ ಸಾರ್ವಜನಿಕರು ತಪ್ಪದೇ ಉಪಸ್ಥಿತರಿರುವಂತೆ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಏ.19 ರಂದು ಶ್ರೀ ಶಂಕರಾಚಾರ್ಯ ಜಯಂತಿ ಪೂರ್ವಸಿದ್ಧತಾ ಸಭೆ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಏಪ್ರಿಲ್ 17– : 2025ರ ಮೇ 2 ರಂದು ಶ್ರೀ ಶಂಕರಾಚಾರ್ಯ ಜಯಂತ್ಯೋತ್ಸವ ಆಚರಣೆಯ ಹಿನ್ನೆಲೆ ಪೂರ್ವಸಿದ್ಧತಾ ಸಭೆಯು ಅಪರ ಜಿಲ್ಲಾಧಿಕಾರಿ ಶ್ರೀ ಶರಣಬಸಪ್ಪ ಕೋಟೆಪ್ಪಗೋಳ ಅವರ ಅಧ್ಯಕ್ಷತೆಯಲ್ಲಿ 2025ರ ಏಪ್ರಿಲ್ 19ರ ಶನಿವಾರ ರಂದು ಮಧ್ಯಾಹ್ನ 12.30 ಗಂಟೆಗೆ ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಸಭೆ ಹಮ್ಮಿಕೊಳ್ಳಲಾಗಿದೆ ಎಂದು ಯಾದಗಿರಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕಿ ಉತ್ತರಾದೇವಿ ಮಠಪತಿ ಅವರು ತಿಳಿಸಿದ್ದಾರೆ. ಶ್ರೀ ಶಂಕರಾಚಾರ್ಯ ಜಯಂತ್ಯೋತ್ಸವವನ್ನು ಜಿಲ್ಲಾಡಳಿತ ಹಾಗೂ ವಿವಿಧ ಇಲಾಖೆಗಳ ಸಹಯೋಗದೊಂದಿಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಯಾದಗಿರಿ ಜಿಲ್ಲಾವತಿಯಿಂದ ಏರ್ಪಡಿಲಾಗುತ್ತಿದ್ದು, ಈ ಜಯಂತಿಯನ್ನು ಆಚರಿಸುವ ಸಲುವಾಗಿ ಪೂರ್ವಸಿದ್ಧತಾ ಸಭೆಗೆ ಜಿಲ್ಲಾ ಮಟ್ಟದ ಎಲ್ಲಾ ಅಧಿಕಾರಿಗಳು, ಈ ಸಮಾಜದ ಬಾಂಧವರು, ಕನ್ನಡಪರ ಸಂಘಟನೆಗಳು ಹಾಗೂ ಸಾರ್ವಜನಿಕರು ತಪ್ಪದೇ ಉಪಸ್ಥಿತರಿರುವಂತೆ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನೇರ ಸಂದರ್ಶನಕ್ಕೆ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಏಪ್ರಿಲ್ 17, : ಯಾದಗಿರಿ ಜಿಲ್ಲಾ ಉದ್ಯೋಗ ವಿನಿಮಯ ಕಛೇರಿ ವತಿಯಿಂದ ಇದೇ 2025ರ ಏಪ್ರಿಲ್ 21ರ ಸೋಮವಾರ ರಂದು ಬೆಳಿಗ್ಗ 10 ರಿಂದ 1 ಗಂಟೆಯ ವರೆಗೆ ನೇರ ಸಂದರ್ಶನವನ್ನು ಆಯೋಜಿಸಲಾಗಿದೆ ಎಂದು ಉದ್ಯೋಗಾಧಿಕಾರಿ ಬಸವರಾಜ ಅವರು ತಿಳಿಸಿದ್ದಾರೆ. ಎಸ್.ಆರ್.ಜೆ ಗ್ರೂಪ್ ಆಫ್ ಇನ್ಸ್ಟಿಸ್ಟೂಷನ್ಸ್ ಕಲಬುರಗಿ, ಟೀರ್ಸ್ 20 ಹುದ್ದೆಗಳು ಖಾಲಿ ಇದ್ದು, ಅರ್ಹತೆ ಯಾವುದೇ ಪದವಿ ಅಥವಾ ಮೇಲ್ಪಟ್ಟು. ಯಾದಗಿರಿ/ಶಹಾಪೂರು/ಶೋರಾಪೂರು/ಸೈದಾಪೂರು/ಗುರುಮಠಕಲ್/ಜೇವರ್ಗಿ/ಶಹಾಬಾದ್/ಚಿತ್ತಾಪೂರು ಉದ್ಯೋಗ ಸ್ಥಳವಾಗಿದೆ. 21 ರಿಂದ 35 ವರ್ಷ ಒಳಗಿರಬೇಕು, ಪುರುಷ ಮತ್ತು ಮಹಿಳಾ ಅಭ್ಯರ್ಥಿಗಳು ಭಾಗವಹಿಸಬೇಕು, ಸ್ವತಂತ್ರ ಮೈಕ್ರೋಫೀನ್ ಪ್ರೈ.ಲಿ ಯಾದಗಿರಿ, ಫೀಲ್ಡ್ ಅಫೀಸರ್ 30 ಹುದ್ದೆಗಳು ಖಾಲಿ ಇದ್ದು, ಅರ್ಹತೆ 10ನೇ ಪಾಸಾಗಿರಬೇಕು. ಯಾದಗಿರಿ ಶಹಾಪೂರು, ಸೇಡಂ, ಕಲಬುರಗಿ ಉದ್ಯೋಗ ಸ್ಥಳವಾಗಿದೆ. 18 ರಿಂದ 28 ವರ್ಷ ಒಳಗಿರಬೇಕು, ಪುರುಷ ಮತ್ತು ಮಹಿಳಾ ಅಭ್ಯರ್ಥಿಗಳು ಭಾಗವಹಿಸಬೇಕು, ಈ ಹುದ್ದೆಗೆ ಬೈಕ್ ಮತ್ತು ಆ.ಐ. ಕಡ್ಡಾಯ ಅವಕಾಶ ವಂಚಿತ ನಿರುದ್ಯೋಗಿ ಅಭ್ಯರ್ಥಿಗಳು ನೇರ ಸಂದರ್ಶನಕ್ಕೆ ಹಾಜರಾಗಬೇಕು,ಈ ನೇರ ಸಂದರ್ಶನಕ್ಕೆ ಬರುವ ಅಭ್ಯರ್ಥಿಗಳು ತಮ್ಮ ದಾಖಲಾತಿಗಳೊಂದಿಗೆ ವ್ಯಕ್ತಿ ಪರಿಚಯ ರಿಸ್ಯೂಮ್/ಬಯೋಡಾಟಾದೊಂದಿಗೆ ನೇರ ಸಂದರ್ಶನಕ್ಕೆ ಹಾಜರಾಗಲು ತಿಳಿಸಲಾಗಿದೆ. ಹಾಗೂ ನೇರ ಸಂದರ್ಶನಕ್ಕೆ ಹಾಜರಾದ ಅಭ್ಯರ್ಥಿಗಳಿಗೆ ಯಾವುದೇ ತರಹದ ಭತ್ಯೆ ನೀಡಲಾಗುವುದಿಲ್ಲ.

ಹೆಚ್ಚಿನ ಮಾಹಿತಿಗಾಗಿ ನೇರ ಸಂದರ್ಶನ ನಡೆಯುವ ಸ್ಥಳ ಚಿತ್ತಾಪೂರು ರೋಡ್ (ಮಿನಿ ವಿಧಾನ ಸೌಧ) ಜಿಲ್ಲಾಡಳಿತ ಭವನ, ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ ಬಿ–ಬ್ಲಾಕ್ ರೂ.ನಂ.ಬಿ1, ಬಿ2 2ನೇ ಮಹಡಿ ಯಾದಗಿರಿ ದೂ.ಸಂ.08473253718 ಹಾಗೂ ಮೊ.ನಂ.9448566765ಗೆ ಕಛೇರಿಯ ಸಮಯದಲ್ಲಿ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.


## ಮನೆಗಳ್ಳನ ಬಂಧನ: 1.25 ಲಕ್ಷ ರೂ. ವಶ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಏ.17: ಯಡ್ರಾಮಿ ಪಟ್ಟಣದಲ್ಲಿ ಮನೆಕಳವು ಪ್ರಕರಣ ಭೇದಿಸಿದ ಪೊಲೀಸರು ಪ್ರಕರಣದಲ್ಲಿ ಭಾಗಿಯಾದ ಕಳ್ಳನನ್ನು ಬಂಧಿಸಿದ್ದಾರೆ.

ಯಡ್ರಾಮಿ ಪಟ್ಟಣದ ರಾಮಣ್ಣ ಯಲ್ಲಪ್ಪ ಕಟ್ಟಿಮನಿ ಎಂಬುವವರ ಮನೆಯಲ್ಲಿ 1.30 ಲಕ್ಷ ರೂ ನಗನಾಣ್ಯ ಕಳವಾಗಿತ್ತು.

ಈ ಕುರಿತು ಪ್ರಕರಣ ದಾಖಲಿಸಿಕೊಂಡಿದ್ದ ಪೊಲೀಸರು, ಯಡ್ರಾಮಿ ಪಟ್ಟಣದ ಕುಸ್ತಿ ಕಾಲೋನಿ ನಿವಾಸಿ ಗಂಗಾಧರ ರಮೇಶ ಕೋರವಾರ ಎಂಬಾತನನ್ನು ಬಂಧಿಸಿ ಆರೋಪಿಯಿಂದ 1.25 ಲಕ್ಷ.ರೂ ಜಪ್ತಿ ಮಾಡಿದ್ದಾರೆ.



ಎಸ್ಪಿ ಅಡೂರು ಶ್ರೀನಿವಾಸಲು, ಹೆಚ್ಚುವರಿ ಎಸ್ಪಿ ಮಹೇಶ ಮೇಘಣ್ಣನವರ್, ಗ್ರಾಮೀಣ ಡಿವೈಎಸ್ಪಿ ಲೋಕೇಶ್ವರಪ್ಪ ಅವರ ಮಾರ್ಗದರ್ಶನದಲ್ಲಿ ಜೇವರಗಿ ಸಿಪಿಐ ರಾಜುಸಾಬ ನದಾಫ್, ಯಡ್ರಾಮಿ ಪಿಎಸ್ಐ ವಿಶ್ವನಾಥ ಮುದರೆಡ್ಡಿ ಮತ್ತು ಸಿಬ್ಬಂದಿಗಳು ಮನೆಕಳವಿನ ಪ್ರಕರಣ ಪತ್ತೆ ಹಚ್ಚುವಲ್ಲಿ ಯಶಸ್ವಿಯಾಗಿದ್ದಾರೆ.

## ಏ.19 ರಂದು ಡಾ.ರಾಜ್‌ಕುಮಾರ ಜಯಂತಿ ಪೂರ್ವಸಿದ್ಧತಾ ಸಭೆ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಏಪ್ರಿಲ್ 17–: 2025ರ ಏಪ್ರಿಲ್ 24 ರಂದು ಡಾ.ರಾಜ್‌ಕುಮಾರ ಅವರ ಜಯಂತ್ಯೋತ್ಸವ ಆಚರಣೆ–ಯ ಹಿನ್ನೆಲೆ ಪೂರ್ವಸಿದ್ಧತಾ ಸಭೆಯು ಅಪರ ಜಿಲ್ಲಾಧಿಕಾರಿ ಶ್ರೀ ಶರಣಬಸಪ್ಪ ಕೋಟೆಪ್ಪಗೋಳ ಅವರ ಅಧ್ಯಕ್ಷತೆಯಲ್ಲಿ 2025ರ ಏಪ್ರಿಲ್ 19ರ ಶನಿವಾರ ರಂದು ಮಧ್ಯಾಹ್ನ 1.30 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸಭೆ ಆಯೋಜಿಸಲಾಗಿದೆ ಎಂದು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಿರಿಯ ಸಹಾಯಕ ನಿರ್ದೇಶಕರು (ಪ್ರ) ಸುಲೈಮಾನ್ ಡಿ.ನದಾಫ್ ಅವರು ತಿಳಿಸಿದ್ದಾರೆ. ಡಾ.ರಾಜ್‌ಕುಮಾರ ಜಯಂತ್ಯೋತ್ಸವವನ್ನು ಜಿಲ್ಲಾಡಳಿತ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಯಾದಗಿರಿ ಜಿಲ್ಲಾ ವತಿಯಿಂದ ಹಮ್ಮಿಕೊಳ್ಳಲಾಗುತ್ತಿದ್ದು, ಈ ಜಯಂತಿಯನ್ನು ಆಚರಿಸುವ ಸಲುವಾಗಿ ಪೂರ್ವಸಿದ್ಧತಾ ಸಭೆಗೆ ಜಿಲ್ಲಾ ಮಟ್ಟದ ಎಲ್ಲಾ ಅಧಿಕಾರಿಗಳು, ಈ ಸಮಾಜದ ಬಾಂಧವರು, ಕನ್ನಡಪರ ಸಂಘಟನೆಗಳು ಹಾಗೂ ಸಾರ್ವಜನಿಕರು ತಪ್ಪದೇ ಉಪಸ್ಥಿತರಿರುವಂತೆ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜನ ಸಾಮಾನ್ಯರಿಗೆ ಅಗತ್ಯ ವಸ್ತುಗಳ ಪೂರೈಕೆಯಲ್ಲಿ ಯಾವುದೇ ರೀತಿಯ ತೊಂದರೆ ಉಂಟಾದಲ್ಲಿ ಮೋಟಾರು ವಾಹನ ನಿರೀಕ್ಷಕರ ಕರೆ ಸೂಚನೆ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಏಪ್ರಿಲ್ 17–: 2025ರ ಏಪ್ರಿಲ್ 14ರ ಮಧ್ಯರಾತ್ರಿಯಿಂದ ನಡೆಸುವ ಅನಿರ್ಧಿಷ್ಟಾವಧಿ ಕಾಲದ ಮುಷ್ಕರದ ಹಿನ್ನೆಲೆಯಲ್ಲಿ ಕಛೇರಿಯಲ್ಲಿ ಕಂಟ್ರೋಲ್ ರೂಂ ಆರಂಭಿಸಲಾಗಿದೆ ಎಂದು ಯಾದಗಿರಿ ಪ್ರಾದೇಶಿಕ ಸಾರಿಗೆ ಅಧಿಕಾರಿಗಳು ಅವರು ತಿಳಿಸಿದ್ದಾರೆ.

ಫೆಡರೇಷನ್ ಆಫ್ ಕರ್ನಾಟಕ ಸ್ಟೇಟ್ ಲಾರಿ ಓನರ್ಸ ಮತ್ತು ಏಜೆಂಟ್ಸ್ ಅಸೋಸಿಯೇಷನ್ (ರಿ) ಹಾಗೂ ಅಲ್ ಇಂಡಿಯಾ ಮೋಟಾರ ಟ್ರಾನ್ಸ್ಪೋರ್ಟ ನವದೆಹಲಿ ಇವರು 2025ರ ಏಪ್ರಿಲ್ 14 ರಿಂದ ಅನಿರ್ಧಿಷ್ಟಾವಧಿ ಕಾಲದ ಮುಷ್ಕರಕ್ಕೆ ಕರೆ ನೀಡಿರುವುದರಿಂದ ಜನ ಸಮಾನ್ಯರಿಗೆ ಅಗತ್ಯ ವಸ್ತುಗಳ ಪೂರೈಕೆಯಲ್ಲಿ ಯಾವುದೇ ರೀತಿಯ ತೊಂದರೆಯಾಗದಂತೆ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಲು ತಿಳಿಸಿರುವ ಹಿನ್ನೆಲೆಯಲ್ಲಿ ಈ ಕಛೇರಿಯಲ್ಲಿ ನಿಯಂತ್ರಣ ಮತ್ತು ಮೇಲ್ವಿಚಾರಣೆ ಕೊಠಡಿಯನ್ನು ತೆರೆಯಲಾಗಿರುತ್ತದೆ. ಜನ ಸಾಮಾನ್ಯರಿಗೆ ಅಗತ್ಯ ವಸ್ತುಗಳ ಪೂರೈಕೆಯಲ್ಲಿ ಯಾವುದೇ ರೀತಿಯ ತೊಂದರೆ ಉಂಟಾದಲ್ಲಿ ಮೋಟಾರು ವಾಹನ ನಿರೀಕ್ಷಕರ ಶ್ರೀ ಅಯ್ಯಾಳಪ್ಪ ಮೊ.ನಂ.9972767587, ಮೋಟಾರು ವಾಹನ ನಿರೀಕ್ಷಕರ ಚಂದ್ರಕಾಂತ ಮೊ.ನಂ. 9343312999, ಮೋಟಾರು ವಾಹನ ನಿರೀಕ್ಷಕರ ಪ್ರಭಾಕರ ಮೊ.ನಂ.9380584160 ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಳ್ಳಾರಿ: ಪ್ಯಾನೆಲ್ ವಕೀಲರ ನೇಮಕಾತಿಗಾಗಿ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಏ.17-ಬಳ್ಳಾರಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಕಚೇರಿಯಿಂದ 3 ವರ್ಷಗಳ ಅವಧಿಗೆ ಪ್ಯಾನೆಲ್ ವಕೀಲರ ನೇಮಕಾತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್ ಎನ್.ಹೊಸಮನೆ ಅವರು ತಿಳಿಸಿದ್ದಾರೆ.

ಬಳ್ಳಾರಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಕಚೇರಿಯಲ್ಲಿ 01.07.2022 ರಿಂದ 30.06.2025 ರ ವರೆಗೆ ಪ್ಯಾನೆಲ್ ವಕೀಲರನ್ನು ನೇಮಕ ಮಾಡಿಕೊಳ್ಳಲಾಗಿದ್ದು, ಈ



ಹುದ್ದೆಗಳ ಅವಧಿಯು 30.06.2025 ರಂದು ಮುಕ್ತಾಯಗೊಳ್ಳಲಿದೆ. ಮುಂದಿನ ಮೂರು ವರ್ಷಗಳ ಅವಧಿಗೆ (01.07.2025 ರಿಂದ 30.06.2028 ರ ವರೆಗೆ) ಪ್ಯಾನೆಲ್ ವಕೀಲರ ನೇಮಕಾತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ.

ರಾಜ್ಯ ಬಾರ್ ಕೌನ್ಸಿಲ್‌ನಲ್ಲಿ ನೋಂದಾಯಿಸಿಕೊಂಡಿರಬೇಕು. ಕಾನೂನು ಅಭ್ಯಾಸದಲ್ಲಿ ಕನಿಷ್ಠ 3 ವರ್ಷಗಳ ಅನುಭವ ಹೊಂದಿರಬೇಕು. ಮಾನ್ಯತೆವುಳ್ಳ ಅಭ್ಯಾಸ ಪ್ರಮಾಣಪತ್ರ ಹೊಂದಿರಬೇಕು. ಕ್ರಿಮಿನಲ್ ಪ್ರಕರಣ ಹೊಂದಿರಬಾರದು. ಸ್ಥಳೀಯ ಭಾಷೆಯ ಜ್ಞಾನ ಹೊಂದಿರಬೇಕು.

ಅರ್ಜಿ ಸಲ್ಲಿಸಲು ಮೇ 03 ಕೊನೆಯ ದಿನವಾಗಿದೆ. ಸಂದರ್ಶನ ದಿನಾಂಕವನ್ನು ಮುಂದಿನ ದಿನಗಳಲ್ಲಿ ತಿಳಿಸಲಾಗುವುದು.

ಹೆಚ್ಚಿನ ಮಾಹಿತಿಗಾಗಿ ಬಳ್ಳಾರಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಕಚೇರಿ ಅಥವಾ ದೂ.08392-278077 ಹಾಗೂ ಇಮೇಲ್: ballari.dlsa@gmail.com ಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಳ್ಳಾರಿ: ಫ್ಯಾಶನ್ ಡಿಸೈನ್ ಪದವಿ ಕೋರ್ಸ್‌ಗಳ ಪ್ರವೇಶಾತಿಗೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಏ.17-ನಗರದ ಸಿದ್ಧ ಉಡುಪು ಸಂಶೋಧನೆ ತರಬೇತಿ ವಿನ್ಯಾಸ ಮತ್ತು ಅಭಿವೃದ್ಧಿ ಕೇಂದ್ರ (ಜಿ.ಆರ್.ಟಿ.ಡಿ.ಸಿ) ಸಂಸ್ಥೆಯಲ್ಲಿ 2025-26 ನೇ ಸಾಲಿಗೆ ಬಿ.ಎಸ್ಸಿ ಪ್ರಥಮ ವರ್ಷದ ಫ್ಯಾಶನ್ ಡಿಸೈನ್ ಪದವಿ ಕೋರ್ಸ್‌ಗಳ ಪ್ರವೇಶಾತಿಗೆ ಅರ್ಜಿ ಆಹ್ವಾನಿಸಲಾಗಿದೆ.

ಪ್ರವೇಶಾತಿಗೆ ಯಾವುದೇ ದ್ವಿತೀಯ ಪಿ.ಯು.ಸಿ (ಕಲೆ, ವಾಣಿಜ್ಯ, ವಿಜ್ಞಾನ, ಶಿಕ್ಷಣ ಮತ್ತು ಯಾವುದೇ ಡಿಪ್ಲೋಮಾ) ವಿಭಾಗದಲ್ಲಿ ತೇರ್ಗಡೆ ಹೊಂದಿರುವ ವಿದ್ಯಾರ್ಥಿಗಳು ಅರ್ಹರಿರುತ್ತಾರೆ.

ಹೆಚ್ಚಿನ ಮಾಹಿತಿಗಾಗಿ ನಗರದ ನಲ್ಲಚೇರುವು ಪ್ರದೇಶದ ಮೊದಲನೇ ರೈಲ್ವೇ ಗೇಟ್ ಹತ್ತಿರದ ಜಿಲ್ಲಾ ಕ್ರೀಡಾಂಗಣ ಮೈದಾನ ರಸ್ತೆಯ ಜಿ.ಆರ್.ಟಿ.ಡಿ.ಸಿ ಕಾಲೇಜಿನ ಪ್ರಾಚಾರ್ಯರ ಕಚೇರಿ ಅಥವಾ ಮೊ.9741264655, 9844862576, 9844474235, 8123126127 ಗೆ ಸಂಪರ್ಕಿಸಬಹುದು ಎಂದು ಕಾಲೇಜಿನ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಭ್ರೂಣಲಿಂಗ ಪತ್ತೆಮಾಡುವದು ಶಿಕ್ಷಾರ್ಹ ಅಪರಾಧ -ಡಿ.ಎಚ್.ಓ ಡಾ. ಲಿಂಗರಾಜು ಟಿ.




ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಭ್ರೂಣಲಿಂಗ ಪತ್ತೆಮಾಡುವುದು ಶಿಕ್ಷಾರ್ಹ ಅಪರಾಧವಾಗಿದ್ದು ಕೊಪ್ಪಳ ಜಿಲ್ಲೆಯ ಯಾವುದೇ ಸ್ಕ್ಯಾನಿಂಗ್ ಕೇಂದ್ರಗಳಲ್ಲಿ ಭ್ರೂಣಲಿಂಗ ಪತ್ತೆ ಮಾಡಭಾರದು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಲಿಂಗರಾಜು ಟಿ ಹೇಳಿದರು.

ಅವರು ಗುರುವಾರ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಛೇರಿಯಲ್ಲಿ ನಡೆದ ಪಿ.ಸಿ ಮತ್ತು ಪಿ.ಎನ್.ಡಿ.ಟಿ. ಜಿಲ್ಲಾ ಮಟ್ಟದ ಸಲಹಾ ಸಮಿತಿ ಸಭೆಯಲ್ಲಿ ಅಧ್ಯಕ್ಷತೆವಹಿಸಿ ಮಾತನಾಡಿದರು.

ಭ್ರೂಣಲಿಂಗ ಪತ್ತೆ ಮಾಡುವ ವೈದ್ಯರಿಗೆ 3 ರಿಂದ 5 ವರ್ಷಗಳವರೆಗೆ ಜೈಲು ಶಿಕ್ಷೆ ಹಾಗೂ 10 ರಿಂದ 50 ಸಾವಿರದವರೆ ಪಿ.ಸಿ ಮತ್ತು ಪಿ.ಎನ್.ಡಿ.ಟಿ ಕಾಯ್ದೆಯಡಿ ದಂಡ ವಿಧಿಸಲಾಗುತ್ತದೆ. ಮೊದಲ ಅಫರಾದಕ್ಕೆ 5 ವರ್ಷಗಳವರೆಗೆ ಲೈಸೆನ್ಸ್ ರದ್ದುಮಾಡಲಾಗುತ್ತದೆ. ಎರಡನೆ ಅಫರಾದಕ್ಕೆ ಜೀವಿತಾವಧಿ ಸ್ಕ್ಯಾನಿಂಗ್ ಕೇಂದ್ರಗಳ ಲೈಸೆನ್ಸಗಳನ್ನು ರದ್ದು ಮಾಡಲಾಗುತ್ತದೆ ಹಾಗಾಗಿ ಯಾರು ಇಂಥಹ ಕೃತ್ಯಗಳಲ್ಲಿ ಭಾಗವಹಿಸಭಾರದು ಎಂದರು.

ಸಾರ್ವಜನಿಕರಾಗಿದ್ದಲ್ಲಿ 50 ಸಾವಿರದಿಂದ 1 ಲಕ್ಷದವರೆಗೆ ದಂಡ ಮತ್ತು ಮೊದಲ ಅಫರಾದಕ್ಕೆ 3 ವರ್ಷಗಳ ಜೈಲು ಶಿಕ್ಷೆ ಎರಡನೇ ಅಫರಾದಕ್ಕೆ 5 ವರ್ಷಗಳವರೆಗೆ ಜೈಲು ಶಿಕ್ಷೆ ಇದೆ. ಕೊಪ್ಪಳ ಜಿಲ್ಲೆಯಲ್ಲಿ ಒಟ್ಟು 54 ಸ್ಕ್ಯಾನಿಂಗ್ ಕೇಂದ್ರಗಳಿದ್ದು ಅವುಗಳಿಗೆ ಪ್ರತಿ 3 ತಿಂಗಳಿಗೊಮ್ಮೆ ಭೇಟಿ ನೀಡಿ ತಮ್ಮ ತಂಡದಿಂದ ಪರಿಶೀಲನೆ ನಡೆಸಲಾಗುತ್ತದೆ. ಗುಪ್ತ ಕಾರ್ಯಾಚರಣೆ ಮೂಲಕವು ಪರಿಶೀಲನೆ ಮಾಡಲು ಇಂದಿನ ಸಭೆಯಲ್ಲಿ ತೀರ್ಮಾನಿಸಲಾಗಿದೆ ಎಂದು ಹೇಳಿದರು.

2024-25ನೇ ಸಾಲಿನ 4ನೇ ತ್ರೈಮಾಸಿಕದಲ್ಲಿ ಜಿಲ್ಲೆಯ ಎಲ್ಲಾ 54 ಸ್ಕ್ಯಾನಿಂಗ್ ಕೇಂದ್ರಗಳಿಗೆ ಭೇಟಿ ನೀಡಲಾಗಿದೆ. 2025-26 ನೇ ಮೊದಲ ತ್ರೈಮಾಸಿಕದಲ್ಲಿ ಇದುವರೆಗೆ 13 ಸ್ಕ್ಯಾನಿಂಗ್ ಕೇಂದ್ರಗಳಿಗೆ ಭೇಟಿ ನೀಡಲಾಗಿದೆ. ಭ್ರೂಣಲಿಂಗ ಪತ್ತೆ ಮಾಡುವ ಸ್ಕ್ಯಾನಿಂಗ್ ಕೇಂದ್ರಗಳನ್ನು ಪತ್ತೆ ಹಚ್ಚಲು ಗುಪ್ತ ಕಾರ್ಯಾಚರಣೆ ಮಾಡಲು ಇಂದಿನ ಜಿಲ್ಲಾ ಮಟ್ಟದ ಸಲಹಾ ಸಮಿತಿ ಸಭೆಯಲ್ಲಿ ನಿರ್ಧರಿಸಲಾಗಿದೆ ಎಂದು ಹೇಳಿದರು.

ಈ ಸಭೆಯಲ್ಲಿ ಪಿ.ಸಿ ಮತ್ತು ಪಿ.ಎನ್.ಡಿ.ಟಿ ಜಿಲ್ಲಾ ಮಟ್ಟದ ಸಲಹಾ ಸಮಿತಿಯ ಅಧ್ಯಕ್ಷರಾದ ಡಾ.ಕೆ.ಹೆಚ್. ತೊಗರಿ. ಸಮಿತಿ ಸದಸ್ಯರಾದ ಕಲ್ಯಾಣ ಅಧಿಕಾರಿ ಡಾ. ರವೀಂದ್ರನಾಥ ಎಮ್. ಎಚ್., ಜಿಲ್ಲಾ ಕುಟುಂಬ, ಮಕ್ಕಳ ತಜ್ಞರಾದ ಡಾ. ಗಿರೀಶ್, ಜಿಲ್ಲಾ ವಾರ್ತಾಧಿಕಾರಿ ಡಾ. ಸುರೇಶ ಜಿ. ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಏ.19ರಂದು ನೇರ ಸಂದರ್ಶನ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಏಪ್ರಿಲ್ 17 -ಇಲ್ಲಿನ ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ವಿನಿಮಯ ಇಲಾಖೆ ಕಚೇರಿಯಲ್ಲಿ ಏಪ್ರಿಲ್ 19ರ ಬೆಳಿಗ್ಗೆ 10ರಿಂದ ಮಧ್ಯಾಹ್ನ 2ಗಂಟೆವರೆಗೆ ನೇರ ಸಂದರ್ಶನ ಆಯೋಜನೆಮಾಡಿಲಾಗಿದ್ದು, ಆಸಕ್ತ ಯುವಕ ಅಥವಾ ಯುವತಿಯರು ಭಾಗಹಿಸಬಹುದಾಗಿದೆ ಎಂದು ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ಉದ್ಯೋಗಾಧಿಕಾರಿಗಳು ತಿಳಿಸಿದ್ದಾರೆ.

ನೇರ ಸಂದರ್ಶನವನ್ನು ಮೂರು ಖಾಸಗಿ ಸಂಸ್ಥೆಗಳ ಸಹಭಾಗಿತ್ವದಲ್ಲಿ ಆಯೋಜನೆ ಮಾಡಲಾಗಿದ್ದು, ತಮ್ಮ ಕಂಪನಿಯಲ್ಲಿ ಖಾಲಿವಿರುವ ಹುದ್ದೆಗಳನ್ನು ನೇರವಾಗಿ ಭರ್ತಿ ಮಾಡಿಕೊಳ್ಳಲಿದ್ದಾರೆ.

18 ರಿಂದ 30 ವರ್ಷಗಳವರೆಗಿನ ಎಸ್.ಎಸ್.ಎಲ್.ಸಿ, ಪಿ.ಯು.ಸಿ ಹಾಗೂ ಎಲ್ಲಾ ಪದವೀಧರ ಅಭ್ಯರ್ಥಿಗಳು ಭಾಗವಹಿಸಬಹುದಾಗಿದೆ. ವಿದ್ಯಾರ್ಹತೆಯ ಅಂಕ ಪಟ್ಟಿಗಳ ಜೆರಾಕ್ಸ್ ಪ್ರತಿಗಳು ಮತ್ತು ಬಯೋಡಾಟಾ, ಆಧಾರ್ ಕಾರ್ಡ್ ಪ್ರತಿ ಹಾಗೂ ಭಾವಚಿತ್ರಗಳೊಂದಿಗೆ ಆಗಮಿಸಬೇಕು.

ನೇರ ಸಂದರ್ಶನದಲ್ಲಿ ಭಾಗವಹಿಸಲು ಯಾವುದೇ ಶುಲ್ಕವಿರುವುದಿಲ್ಲ, ಬದಲಾಗಿ ತಮ್ಮ ಸ್ವಂತ ಖರ್ಚಿನಲ್ಲಿ ಈ ಸಂದರ್ಶನಕ್ಕೆ ಹಾಜರಾಗಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 08532-231684, 8095125775 ಅಥವಾ 9008211750 ಗೆ ಸಂಪರ್ಕಿಸುವಂತೆ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ಉದ್ಯೋಗಾಧಿಕಾರಿ ನವೀನ ಕುಮಾರ್ ಸಂಗೇಪಾಗ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಮಾಜ ಕಲ್ಯಾಣ ಇಲಾಖೆ: ಆಫ್‌ಲೈನ್

# ಮೂಲಕ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಏ.17-ಸಮಾಜ ಕಲ್ಯಾಣ ಇಲಾಖೆ ವತಿಯಿಂದ 2025-26ನೇ ಸಾಲಿಗೆ 5ನೇ ತರಗತಿಯಲ್ಲಿ ಶೇ.60 ಕ್ಕಿಂತ ಹೆಚ್ಚು ಅಂಕ ಪಡೆದಿರುವ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳಿಗೆ 6ನೇ ತರಗತಿಗೆ ಪ್ರತಿಷ್ಠಿತ ಶಾಲೆಗಳಲ್ಲಿ ಪ್ರವೇಶ ಅರ್ಹತಾ ಪರೀಕ್ಷೆಯ ಮೂಲಕ ಪ್ರವೇಶಾತಿ ಕಲ್ಪಿಸಲು ಆನ್ ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿತ್ತು.

ಆದರೆ ಆನ್ ಲೈನ್ ಲಿಂಕ್ https://swd.karnataka.gov.in ನಲ್ಲಿ ಅರ್ಜಿ ಸಲ್ಲಿಸಲು ಸರ್ವೀಸ್ ಲಭ್ಯವಿಲ್ಲ ಎಂದು ತೋರಿಸುತ್ತಿರುವ ಕಾರಣ ಅರ್ಜಿಗಳನ್ನು ಆಫ್ ಲೈನ್ ಮೂಲಕ ಸಲ್ಲಿಸಬಹುದು.

ಆಸಕ್ತ ವಿದ್ಯಾರ್ಥಿಗಳು ಅರ್ಜಿಗಳನ್ನು ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರ ಕಚೇರಿ ಅಥವಾ ಸಂಬಂಧಿಸಿದ ತಾಲ್ಲೂಕು ಸಹಾಯಕ ನಿರ್ದೇಶಕರ ಕಚೇರಿಗಳಿಂದ ಪಡೆದು ಭರ್ತಿ ಮಾಡಿ ಪೂರಕ ದಾಖಲೆಗಳೊಂದಿಗೆ ಮೇ 03 ರೊಳಗೆ ಸಲ್ಲಿಸಬೇಕು.

ಮೇ 09 ರಂದು ಪ್ರವೇಶ ಪರೀಕ್ಷೆ ನಡೆಯಲಿದೆ. ಹೆಚ್ಚಿನ ಮಾಹಿತಿಗಾಗಿ ಮೊ.9480843023 ಗೆ ಸಂಪರ್ಕಿಸಬಹುದು ಎಂದು ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಮಲ್ಲಿಕಾರ್ಜುನ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# 6ನೇ ತರಗತಿ ಪ್ರವೇಶಕ್ಕಾಗಿ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಏ.17-ಜಿಲ್ಲೆಯಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ಅಲ್ಪಸಂಖ್ಯಾತರ ಮೌಲಾನಾ ಆಜಾದ್ ಮಾದರಿ ಶಾಲೆ(ಆಂಗ್ಲ ಮಾಧ್ಯಮ)ಗಳಲ್ಲಿ 2025-26ನೇ ಶೈಕ್ಷಣಿಕ ವರ್ಷಕ್ಕೆ 6ನೇ ತರಗತಿಗೆ ಉಚಿತ ಪ್ರವೇಶಕ್ಕಾಗಿ ಆನ್‌ಲೈನ್ (ಸೇವಾಸಿಂಧು) ಪೋರ್ಟಲ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತಿಯುಳ್ಳ ವಿದ್ಯಾರ್ಥಿಗಳು ಸೇವಾಸಿಂಧು ಪೋರ್ಟಲ್ ಲಿಂಕ್ https://sevasindhuservices.karnataka.gov.in ಮೂಲಕ ಅರ್ಜಿ ಸಲ್ಲಿಸಬಹುದು. ಅರ್ಜಿಗಳನ್ನು ಉಚಿತವಾಗಿ ಸಲ್ಲಿಸಬಹುದಾಗಿದ್ದು, ಅರ್ಜಿ ಸಲ್ಲಿಸಲು ಮೇ 10 ಕೊನೆಯ ದಿನವಾಗಿದೆ.

**ಶಾಲೆಗಳ ವಿವರ:**

ಅಲ್ಪಸಂಖ್ಯಾತರ ಮೌಲಾನಾ ಆಜಾದ್ ಮಾದರಿ ಶಾಲೆ ಬಳ್ಳಾರಿ-ಮೊ.8861623814, ಅಲ್ಪಸಂಖ್ಯಾತರ ಮೌಲಾನಾ ಆಜಾದ್ ಮಾದರಿ ಶಾಲೆ ಸಂಡೂರು-ಮೊ.9480933730 ಮತ್ತು ಅಲ್ಪಸಂಖ್ಯಾತರ ಮೌಲಾನಾ ಆಜಾದ್ ಮಾದರಿ ಶಾಲೆ ಕಂಪ್ಲಿ-ಮೊ.7353346069.

ಹೆಚ್ಚಿನ ಮಾಹಿತಿಗಾಗಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳ ಕರ್ಚೇರಿ ಅಥವಾ ದೂ.08392-200125/224, ಮೊ.8861623814 ಹಾಗೂ ಜಿಲ್ಲೆಯ ಎಲ್ಲಾ ಅಲ್ಪಸಂಖ್ಯಾತರ ತಾಲ್ಲೂಕು ಮಾಹಿತಿ ಕೇಂದ್ರ, ಅಲ್ಪಸಂಖ್ಯಾತರ ಮೌಲಾನಾ ಆಜಾದ್ ಮಾದರಿ ಶಾಲೆ, ವಸತಿ ಶಾಲೆಗಳಿಗೆ ಭೇಟಿ ನೀಡಿ ಮಾಹಿತಿ ಪಡೆಯಬಹುದು ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ವಿಠೋಬಾ ಹೊನಕಾಂಡೆ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಿರುಗುಪ್ಪ: ಮುಸ್ಲಿಂ ಈದ್ಗಾ ಮತ್ತು ಖಬರಸ್ತಾನ್(ಸುನ್ನಿ)

# ವಕ್ಫ್ ಸಂಸ್ಥೆಯ ಕಾರ್ಯಾಕಾರಿ ಸಮಿತಿಗೆ ಚುನಾವಣೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಏ.17-ಸಿರುಗುಪ್ಪ ಪಟ್ಟಣದಲ್ಲಿರುವ ವಕ್ಫ್ ಸಂಸ್ಥೆಯಾದ ಮುಸ್ಲಿಂ ಈದ್ಗಾ ಮತ್ತು ಖಬರಸ್ತಾನ್(ಸುನ್ನಿ) ವಕ್ಫ್ ಸಂಸ್ಥೆಗೆ ಹೊಸ ಸಮಿತಿ ರಚಿಸುವ ನಿಮಿತ್ತ ಏ.21 ರಿಂದ ಮೇ 10 ರ ವರೆಗೆ ಚುನಾವಣಾ ಪ್ರಕ್ರಿಯೆ ನಡೆಯಲಿದೆ ಎಂದು ಸಿರುಗುಪ್ಪದ ಮುಸ್ಲಿಂ ಈದ್ಗಾ ಮತ್ತು ಖಬರಸ್ತಾನ್(ಸುನ್ನಿ) ಆಡಳಿತಾಧಿಕಾರಿ ನೂರ್ ಪಾಷಾ ಅವರು ತಿಳಿಸಿದ್ದಾರೆ.

ಅರ್ಹ ಅಭ್ಯರ್ಥಿಗಳು ಚುನಾವಣಾ ನಾಮಪತ್ರವನ್ನು ಏ.21ರ ಬೆಳಿಗ್ಗೆ 11ಗಂಟೆಯಿಂದ ಮಧ್ಯಾಹ್ನ 2.30 ಗಂಟೆವರೆಗೆ ಸಿರುಗುಪ್ಪದ ಮುಸ್ಲಿಂ ಈದ್ಗಾ ಮತ್ತು ಖಬರಸ್ತಾನ್(ಸುನ್ನಿ) ಕಚೇರಿಯಿಂದ ಪಡೆದು ಭರ್ತಿ ಮಾಡಿ, ಸೂಕ್ತ ದಾಖಲೆಗಳೊಂದಿಗೆ ಏ.27 ರ ಮಧ್ಯಾಹ್ನ 2.30 ಗಂಟೆಯೊಳಗೆ ಸಲ್ಲಿಸಬಹುದು.

ಏ.28 ರ ಬೆಳಿಗ್ಗೆ 11.30 ಗಂಟೆಯಿಂದ ನಾಮಪತ್ರ ಪರಿಶೀಲನೆ ನಡೆಯಲಿದೆ. ಏ.29 ರ ಬೆಳಿಗ್ಗೆ 10 ಗಂಟೆಯಿಂದ ಮಧ್ಯಾಹ್ನ 02 ಗಂಟೆಯವರೆಗೆ ನಾಮಪತ್ರ ಹಿಂದಕ್ಕೆ ಪಡೆಯಲು ಅವಕಾಶ ಇರುತ್ತದೆ. ಅದೇ ದಿನ ಮಧ್ಯಾಹ್ನ 03.30 ಗಂಟೆಯ ನಂತರ ಚುನಾವಣಾ ಚಿನ್ಹೆಗಳ ಹಂಚಿಕೆ ಮಾಡಿ ಅಭ್ಯರ್ಥಿಗಳ ಅಂತಿಮ ಪಟ್ಟಿ ಪ್ರಕಟಿಸಲಾಗುವುದು.

ಮೇ 10 ರ ಶನಿವಾರ ಬೆಳಿಗ್ಗೆ 08 ಗಂಟೆಯಿಂದ ಮಧ್ಯಾಹ್ನ 03 ಗಂಟೆಯವರೆಗೆ ಸಿರುಗುಪ್ಪ ಪಟ್ಟಣದ ತಾಲ್ಲೂಕು ಕ್ರೀಡಾಂಗಣದ ಸರ್ಕಾರಿ ಬಾಲಕಿಯರ ಪ್ರೌಢಶಾಲೆಯಲ್ಲಿ ಮುಸ್ಲಿಂ ಈದ್ಗಾ ಮತ್ತು ಖಬರಸ್ತಾನ್(ಸುನ್ನಿ) ವಕ್ಫ್ ಸಂಸ್ಥೆಗೆ ಚುನಾವಣೆ ನಡೆಸಿ, ಅದೇ ದಿನ ಸಂಜೆ 04 ಗಂಟೆಯಿಂದ ಮತ ಎಣಿಕೆ ನಡೆಸಲಾಗುವುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಏ.19 ರಂದು ಬಳ್ಳಾರಿ ನಗರ ವ್ಯಾಪ್ತಿಯಲ್ಲಿ ವಿದ್ಯುತ್ ವ್ಯತ್ಯಯ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಏ.17-ಬಳ್ಳಾರಿ ನಗರ ಜೆಸ್ಕಾಂ ಉಪವಿಭಾಗ-2ರ ವ್ಯಾಪ್ತಿಯ 110/11ಕೆ.ವಿ ಸೋಮಸಮುದ್ರ ವಿದ್ಯುತ್ ಉಪ-ಕೇಂದ್ರದ ಕಾಮಗಾರಿ ಕೈಗೊಳ್ಳುತ್ತಿರುವುದರಿಂದ ಏ.19 ರಂದು ಬೆಳಿಗ್ಗೆ 07 ಗಂಟೆಯಿಂದ ಸಂಜೆ 06 ಗಂಟೆಯವರೆಗೆ ನಗರದ ಎಫ್-6 ಮತ್ತು ಎಫ್-10 ಗಳ ವ್ಯಾಪ್ತಿಯ ಏರಿಯಾಗಳಲ್ಲಿ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ.

**ವಿದ್ಯುತ್ ವ್ಯತ್ಯಯವಾಗುವ ಪ್ರದೇಶಗಳು:** ಎಫ್-6 ವ್ಯಾಪ್ತಿಯ ತಾಳೂರು ರೋಡ್, ಸ್ನೇಹ ಕಾಲೋನಿ, ಶ್ರೀನಗರ, ರೇಣುಕಾ ನಗರ, ಭಗತ್‌ಸಿಂಗ್ ನಗರ, ಕನ್ನಡ ನಗರ, ಮಹಾನಂದಿ ಕೊಟ್ಟಂ, ಪಾರ್ವತಿ ನಗರ, ಎಸ್.ಪಿ.ಸರ್ಕಲ್, ಶಾಸ್ತ್ರೀ ನಗರ, ಬ್ಯಾಂಕ್ ಕಾಲೋನಿ, ಬಸವನಕುಂಟೆ, ಸಿರುಗುಪ್ಪ ರೋಡ್, ರಾಮ ನಗರ, ಹವಂಬಾವಿ, ಜಿಲ್ಲಾ ಕೋರ್ಟ್ ಸಂಕೀರ್ಣ.

ಎಫ್-10 ವ್ಯಾಪ್ತಿಯ ಅಶೋಕನಗರ, ಹವಂಬಾವಿ, ಟಿ.ಎಂ.ಜಿ ಲೇಔಟ್, ರಾಮ ನಗರ, ಜಯನಗರ, ಗಾಯತ್ರಿ ನಗರ, ಭುವನಗಿರಿ ಕಾಲೋನಿ, ವೀರನಗೌಡ ಕಾಲೋನಿ, ಗಣೇಶ ನಗರ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದ್ದು, ಸಾರ್ವಜನಿಕರು ಮತ್ತು ವಿದ್ಯುತ್ ಗ್ರಾಹಕರು ಸಹಕರಿಸಬೇಕು ಎಂದು ಬಳ್ಳಾರಿ ನಗರ ಜೆಸ್ಕಾಂ ಉಪವಿಭಾಗ-2 ರ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮೀನುಗಾರಿಕೆ ಇಲಾಖೆ: ಕೆರೆಗಳ ನವೀಕರಣ ಮೊತ್ತ ಪಾವತಿಸಲು ಸೂಚನೆ

ಬಳ್ಳಾರಿ,ಏ.17-ಮೀನುಗಾರಿಕೆ ಇಲಾಖೆ ವ್ಯಾಪ್ತಿಯ ಕೆರೆಗಳ ಮೀನು ಪಾಶುವಾರು ಹಕ್ಕಿನ ಗುತ್ತಿಗೆದಾರರು/ಬಿಡ್ ದಾರರು 2025-26ನೇ ಸಾಲಿಗೆ ಗುತ್ತಿಗೆ/ಬಿಡ್ ಮೊತ್ತ ಪಾವತಿಸಬೇಕು ಎಂದು ಮೀನುಗಾರಿಕೆ ಇಲಾಖೆಯ ಉಪನಿರ್ದೇಶಕ ಶಿವಣ್ಣ ತಿಳಿಸಿದ್ದಾರೆ.

ಗುತ್ತಿಗೆ/ಬಿಡ್ ಮೊತ್ತ ಪಾವತಿಸಲು ಏ.30 ಕೊನೆಯ ದಿನ ಆಗಿದೆ.

ಗುತ್ತಿಗೆ/ಬಿಡ್ ಮೊತ್ತವನ್ನು ಸಂಬಂಧಿಸಿದ ಮೀನುಗಾರಿಕೆ ಸಹಾಯಕ ನಿರ್ದೇಶಕರ ಕಚೇರಿಯಲ್ಲಿ ಪಾವತಿಸಬೇಕು. ತಪ್ಪಿದಲ್ಲಿ ಕೆರೆಯ ಮೀನು ಪಾಶುವಾರು ಹಕ್ಕನ್ನು ರದ್ಧತಿಗೆ ಕ್ರಮವಹಿಸಲಾಗುವುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಗೃಹರಕ್ಷಕ ಸ್ವಯಂ ಸೇವಕ ಸ್ಥಾನಗಳ ಭರ್ತಿಗೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಏ.17-ಜಿಲ್ಲೆಯ ಸಂಡೂರು, ಸಿರುಗುಪ್ಪ, ಕುರುಗೋಡು, ಕುಡುತಿನಿ, ತೆಕ್ಕಲಕೋಟೆ, ಮತ್ತು ತೋರಣಗಲ್ಲು ಘಟಕಗಳಲ್ಲಿ ಖಾಲಿ ಇರುವ ಗೃಹರಕ್ಷಕರ ಸ್ವಯಂಸೇವಕ ಸ್ಥಾನಗಳನ್ನು ಭರ್ತಿ ಮಾಡಲು ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿಗಳನ್ನು ಏ.17 ರಿಂದ 29 ರ ವರೆಗೆ ಬೆಳಿಗ್ಗೆ 09 ಗಂಟೆಯಿಂದ 12 ಗಂಟೆಯವರೆಗೆ ಮಾತ್ರ ನೀಡಲಾಗುವುದು (ರಜಾ ದಿನಗಳನ್ನು ಹೊರತು ಪಡಿಸಿ). ಅರ್ಜಿಗಳನ್ನು ಉಚಿತವಾಗಿ ನೀಡಲಾಗುವುದು. ಭರ್ತಿ ಮಾಡಿದ ಅರ್ಜಿಗಳನ್ನು ಏ.29 ರ ಮಧ್ಯಾಹ್ನ 01 ಗಂಟೆ ಒಳಗೆ ಖುದ್ದಾಗಿ ಕಚೇರಿಗೆ ಸಲ್ಲಿಸಬಹುದು.

ವಿದ್ಯಾರ್ಹತೆಯು ಎಸ್.ಎಸ್.ಎಲ್.ಸಿ ಉತ್ತೀರ್ಣರಾಗಿರಬೇಕು. ಅಭ್ಯರ್ಥಿಯ ವಯಸ್ಸು 19 ವರ್ಷಗಳು ತುಂಬಿರಬೇಕು ಹಾಗೂ 40 ವರ್ಷಗಳು ಮೀರಿರಬಾರದು. ಸಂಡೂರು, ಕುಡುತಿನಿ, ತೆಕ್ಕಲಕೋಟೆ, ತೋರಣಗಲ್ಲು, ಕುರುಗೋಡು ಮತ್ತು ಸಿರುಗುಪ್ಪ ಘಟಕಗಳಿಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಆಯಾ ಘಟಕದ 10 ಕಿ.ಮೀ. ವ್ಯಾಪ್ತಿಯೊಳಗೆ ವಾಸವಾಗಿರಬೇಕು. ಈ ಬಗ್ಗೆ ಆಧಾರ್ ಕಾರ್ಡ್, ಚುನಾವಣಾ ಗುರುತಿನ ಚೀಟಿ ಮತ್ತು ಪಡಿತರ ಚೀಟಿಯಲ್ಲಿ ಸ್ಥಳೀಯ ವಿಳಾಸದ ಮಾಹಿತಿ ಹೊಂದಿರಬೇಕು.

ಜನ್ಮದಿನಾಂಕಕ್ಕೆ ಸಂಬಂಧಿಸಿದಂತೆ ಎಸ್.ಎಸ್.ಎಲ್.ಸಿ ಅಂಕಪಟ್ಟಿ ಮತ್ತು ವರ್ಗಾವಣೆ ಪ್ರಮಾಣ ಪತ್ರ ಜೆರಾಕ್ಸ್ ಪ್ರತಿಯನ್ನು ಲಗತ್ತಿಸುವುದು. ಆಯ್ಕೆ ವಿಧಾನ ದೈಹಿಕ ಸಾಮರ್ಥ್ಯ, ಮೌಖಿಕ ಸಂದರ್ಶನ ಕೈಗೊಳ್ಳಲಾಗುತ್ತದೆ. ಪುರುಷ ಅಭ್ಯರ್ಥಿಯ ಎತ್ತರ 168 ಸೆ.ಮೀ ಮತ್ತು ತೂಕ ಕನಿಷ್ಠ 50 ಕೆ.ಜಿ ಹೊಂದಿರಬೇಕು. ಅಭ್ಯರ್ಥಿಯು ಯಾವುದೇ ಅಪರಾಧ ಪ್ರಕರಣಗಳಲ್ಲಿ ಭಾಗಿಯಾಗಿರಬಾರದು. ಅಭ್ಯರ್ಥಿಯು ಯಾವುದೇ ರಾಜಕೀಯ ಪಕ್ಷಗಳಲ್ಲಿ ತೊಡಗಿರಬಾರದು.

ಗೃಹರಕ್ಷಕರ ಹುದ್ದೆಯು ಸ್ವಯಂ ಸೇವಕ ಹುದ್ದೆಯಾಗಿದ್ದು, ಯಾವುದೇ ಸಂಬಳವಿರುವುದಿಲ್ಲ. ಭರ್ತಿಯಾದ ಗೃಹರಕ್ಷಕನು ಸ್ವಯಂ ಸೇವಕ ಗೃಹರಕ್ಷಕನಾಗಿರುತ್ತಾನೆಯೇ ಹೊರತು ಸರ್ಕಾರಿ ನೌಕರ ಅಥವಾ ಸಿಬ್ಬಂದಿಯಾಗಿರುವುದಿಲ್ಲ. ವಿಶೇಷ ಕೌಶ್ಯಲತೆ ಹೊಂದಿರುವವರಿಗೆ ಹೆಚ್ಚಿನ ಆದ್ಯತೆ ನೀಡಲಾಗುವುದು (ಡ್ರೈವಿಂಗ್, ಎಲೆಕ್ಟ್ರಿಷಿಯನ್, ಕಂಪ್ಯೂಟರ್ ಆಪರೇಟರ್, ಪೇಂಟರ್ ಮತ್ತು ಜಿಲ್ಲಾ ಮಟ್ಟ, ರಾಜ್ಯ ಮಟ್ಟ, ಮತ್ತು ರಾಷ್ಟ್ರ ಮಟ್ಟದ ಕ್ರೀಡಾಪಟುಗಳಿಗೆ ಪ್ರಾಥಮಿಕ ಆದ್ಯತೆ ನೀಡಲಾಗುವುದು).

ಸಂಡೂರು, ಕುಡುತಿನಿ, ತೆಕ್ಕಲಕೋಟೆ, ತೋರಣಗಲ್ಲು, ಕುರುಗೋಡು ಮತ್ತು ಸಿರುಗುಪ್ಪ ಘಟಕಗಳಲ್ಲಿ ಸೇರಬಯಸುವ ಅಭ್ಯರ್ಥಿಗಳಿಗೆ ಅರ್ಜಿಗಳನ್ನು ನಗರದ ಡಾ.ಜೋಳದರಾಶಿ ದೊಡ್ಡನಗೌಡ ರಂಗಮಂದಿರದ ಗೃಹರಕ್ಷಕ ದಳದ ಕಚೇರಿಯಲ್ಲಿ ನೀಡಲಾಗುವುದು.

ಸೂಚನೆ: ಯಾವುದೇ ಅಭ್ಯರ್ಥಿಯು ಇಲಾಖೆಯ ಹೊರಗಾಗಲಿ ಅಥವಾ ಒಳಗಾಗಲಿ ಉದ್ಯೋಗ ಪಡೆಯುವ ಸಲುವಾಗಿ ಯಾವುದೇ ವ್ಯಕ್ತಿಗೆ ಹಣ ನೀಡುವುದು ಅಥವಾ ಯಾವುದೇ ವಿಧವಾದ ಪಾರತೋಷಕ ನೀಡುವುದು ಮಾಡಬಾರದು. ಯಾವುದೇ ವಿಧವಾದ ಹಣ ವಸೂಲಾತಿಗೆ ಯಾರಿಗೂ ಅಧಿಕಾರ ನೀಡಿರುವುದಿಲ್ಲ, ಈ ದಿಶೆಯಲ್ಲಿ ಮಧ್ಯವರ್ತಿಗಳ ಭರವಸೆಗಳಿಗೆ ಮಾರು ಹೋಗಬಾರದೆಂದು ಈ ಮೂಲಕ ಅಭ್ಯರ್ಥಿಗಳಿಗೆ ಎಚ್ಚರಿಕೆ ನೀಡಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ಮೊ.7975872247 ಮತ್ತು ದೂ.08392-276421 ಗೆ ಸಂಪರ್ಕಿಸಬಹುದು ಎಂದು ಗೃಹರಕ್ಷಕರ ಆಯ್ಕೆ ಸಮಿತಿಯ ಸಮಾದೇಷ್ಟರು ಹಾಗೂ ಸದಸ್ಯ-ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕಸಾಪ ನೂತನ ತಾಲೂಕ ಉಪಾಧ್ಯಕ್ಷ ಅಸ್ಲಾಂಮಿಯಾ ಅವರಿಗೆ ಸನ್ಮಾನ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:- ಕನ್ನಡ ಸಾಹಿತ್ಯ ಪರಿಷತ್ತಿನ ಚಿಟಗುಪ್ಪ ತಾಲೂಕ ಉಪಾಧ್ಯಕ್ಷರಾಗಿ ನೇಮಕಗೊಂಡ ಸಮಾಜ ಕಾರ್ಯಕರ್ತ ಮಹಮ್ಮದ್ ಅಸ್ಲಾಂಮಿಯಾ ಅವರಿಗೆ ಗುರುವಾರ ಗೆಳೆಯರ ಬಳಗದಿಂದ ಸನ್ಮಾನಿಸಿ ಶುಭ ಕೋರಿದರು.

ಈ ಸಂದರ್ಭದಲ್ಲಿ ಸಂಜೀವನ ಭೋಸ್ಲೆ, ಹಸನ್, ರಾಜಕುಮಾರ ಆರ್. ಹಡಪದ, ಸೈಯದ್ ಅಜೀಮ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಮೀನುಗಾರಿಕೆ ಇಲಾಖೆಯಿಂದ ಸಹಾಯಧನಕ್ಕೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಏಪ್ರಿಲ್ 17 -ಇಲ್ಲಿನ ಮೀನುಗಾರಿಕೆ ಇಲಾಖೆಯಿಂದ 2025-26ನೇ ಸಾಲಿಗೆ ಜಿಲ್ಲೆಯ ಮೀನುಗಾರಿಕೆ ಇಲಾಖೆಯಿಂದ ಪ್ರಧಾನಮಂತ್ರಿ ಮತ್ಸ ಸಂಪದ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದ್ದು, ಸಹಾಯಧನಕ್ಕೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಯೋಜನೆಯಡಿ ಹೊಸದಾಗಿ ಮೀನು ಕೃಷಿ ಕೊಳಗಳ ನಿರ್ಮಾಣ (75 ಹೆಕ್ಟೇರ್), ಮೀನು ಕೃಷಿ ಕೊಳದ ಹೂಡಿಕೆ ವೆಚ್ಚಕ್ಕೆ ಸಹಾಯ (75 ಹೆಕ್ಟೇರ್), ಐಸ್ ಪ್ಲಾಂಟ್ ನಿರ್ಮಾಣ (ಒಂದು 20ಮೆ. ಟನ್ ಸಾಮರ್ಥ್ಯ) ಲೈವ್ ಫಿಶ್ ವೆಂಡಿಂಗ್ ಸೆಂಟರ್ (01 ಗುರಿ) ಸಹಾಯಧನ ಘಟಕಗಳ ಉಪಯೋಜನೆಗಳನ್ನು ಪ್ರಾರಂಭಿಸಲು ಸಾಮಾನ್ಯ ವರ್ಗದ ಫಲಾನುಭವಿಗಳಿಗೆ ಘಟಕ ವೆಚ್ಚದ ಶೇ.40ರಷ್ಟು ಹಾಗೂ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಮಹಿಳಾ ಫಲಾನುಭವಿಗಳಿಗೆ ಶೇ.60ರಷ್ಟು ಸಹಾಯಧನ ನೀಡಲಾಗುತ್ತದೆ. ಅಲ್ಲದೆ 2020-21, 2021-22, 2022-23 ಹಾಗೂ 2024-25ನೇ ಸಾಲಿನ ಪ್ರಧಾನಮಂತ್ರಿ ಮತ್ಸ ಸಂಪದ ಯೋಜನೆಯಡಿ ಮೀನು ಕೃಷಿ ಕೊಳ ನಿರ್ಮಾಣ ಮಾಡಲು ಮಾತ್ರ ಅರ್ಜಿ ಸಲ್ಲಿಸಿ ಡಿ.ಎಲ್.ಸಿ ಸಭೆಯಲ್ಲಿ ಅನುಮೋದನೆಗೊಂಡು ಮೀನು ಕೃಷಿ ಕೊಳ ನಿರ್ಮಾಣ ಮಾಡಿಕೊಳ್ಳದೇ ಇರುವ ಫಲಾನುಭವಿಗಳು 2025-26ನೇ ಸಾಲಿಗೆ ಕೇವಲ ಮೀನು ಕೃಷಿ ಕೊಳ ನಿರ್ಮಿಸಲು ಇಚ್ಚಿಸಿದ್ದಲ್ಲಿ ಅಂತಹ ಅರ್ಹ ಫಲಾನುಭವಿಗಳು ಕೂಡಾ ಸಂಬಂಧಪಟ್ಟ ದಾಖಲೆಗಳೊಂದಿಗೆ ಮೇ 15ರೊಳಗಾಗಿ ಇಲಾಖೆಗೆ ಅರ್ಜಿಯನ್ನು ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಮೀನುಗಾರಿಕೆ ಸಹಾಯಕ ನಿರ್ದೇಶಕರು ರಾಯಚೂರು, ಲಿಂಗಸೂಗೂರು, ಸಿಂಧನೂರು ಮತ್ತು ಮೀನುಗಾರಿಕೆ ಉಪ ನಿರ್ದೇಶಕರು ರಾಯಚೂರು ಇವರನ್ನು ಕಚೇರಿ ವೇಳೆಯಲ್ಲಿ ದೂರವಾಣಿ ಸಂಖ್ಯೆ: 9901244116ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಮೀನುಗಾರಿಕೆ ಇಲಾಖೆಯ ಉಪ ನಿರ್ದೇಶಕರು ಪ್ರಕಣೆಯಲ್ಲಿ ತಿಳಿಸಿದ್ದಾರೆ.

ಜಿಲ್ಲಾ ಮಟ್ಟದ ಪೂರ್ವಭಾವಿ ಸಭೆ

# ಏ.26 ರಿಂದ ಜಾನುವಾರು ರೋಗಕ್ಕೆ ಲಸಿಕಾ ಅಭಿಯಾನ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಏ.17-ಜಿಲ್ಲೆಯಲ್ಲಿ ಜಾನುವಾರುಗಳಿಗೆ ಕಾಲು, ಬಾಯಿ ರೋಗಕ್ಕೆ ಎಪ್ರೀಲ್ 26 ರಿಂದ ಜೂನ್ 4 ವರೆಗೆ 7ನೇ ಸುತ್ತಿನ ಲಸಿಕಾ ಅಭಿಯಾನ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ಜಾನಕಿ ಕೆ.ಎಂ ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗುರುವಾರ ಜರುಗಿದ ಜಾನುವಾರುಗಳ ಕಾಲು ಬಾಯಿ ರೋಗದ ಲಸಿಕಾ ಕಾರ್ಯಕ್ರಮದ ಜಿಲ್ಲಾಮಟ್ಟದ ನಿರ್ವಹಣಾ ಸಮಿತಿಯ ಪೂರ್ವಭಾವಿ ಸಿದ್ಧತೆಗಳ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಲಸಿಕಾ ಕಾರ್ಯಕ್ರಮದ ಜೊತೆಗೆ ಜಾನುವಾರುಗಳಿಗೆ ಚರ್ಮಗಂಟು ರೋಗದ ಲಸಿಕೆ ಮತ್ತು ನಾಯಿಗಳಿಗೆ ರೇಬಿಸ್ ಲಸಿಕೆಯನ್ನು ಉಚಿತವಾಗಿ ನೀಡಲಾಗುತ್ತಿದೆ. ಇದರ ಸದುಪಯೋಗವನ್ನು ಪಡೆದುಕೊಳ್ಳಬೇಕೆಂದು ಸಾರ್ವಜನಿಕರಿಗೆ ತಿಳಿಸಿದರು.

ಪಶುಪಾಲನೆ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆಯ ಉಪನಿರ್ದೇಶಕ ಡಾ.ಎಸ್.ಎಚ್. ಕರಡಿಗುಡ್ಡ, ಲಸಿಕಾ ಕಾರ್ಯಕ್ರಮದ ಸಿದ್ದತೆ ಕುರಿತು ವಿವರಣೆ ನೀಡಿದರು. ರಾಷ್ಟ್ರೀಯ ಜಾನುವಾರು ರೋಗ ನಿಯಂತ್ರಣ ಕಾರ್ಯಕ್ರಮದಡಿ ಪ್ರತಿ 6 ತಿಂಗಳಿಗೊಮ್ಮೆ ಕಾಲು ಬಾಯಿ ರೋಗದ ಲಸಿಕೆ ಹಾಕಿಸಿಕೊಳ್ಳುವುದು ಒಂದು ಉತ್ತಮ ಯೋಜನೆಯಾಗಿದೆ. ಜಾನುವಾರುಗಳಿಗೆ ಈ ರೋಗ ಬಂದ ನಂತರ ರೈತರಿಗೆ ಆರ್ಥಿಕ ಸಂಕಷ್ಟಗಳನ್ನು ತಂದೊಡ್ಡುತ್ತದೆ. ಸದರಿ ಲಸಿಕೆ ಹಾಕಿಸಿ ರೋಗ ನಿಯಂತ್ರಿಸಲು ಮತ್ತು ಕಾಲು ಬಾಯಿ ರೋಗ ಮುಕ್ತ ಜಿಲ್ಲೆ ಹಾಗೂ ರಾಜ್ಯವನ್ನಾಗಿ ಮಾಡಲು ಇದೊಂದು ಉತ್ತಮ ಮಾರ್ಗ ಎಂದು ತಿಳಿಸಿದರು.

20ನೇ ಜಾನುವಾರು ಗಣತಿ ಪ್ರಕಾರ ಜಿಲ್ಲೆಯಲ್ಲಿ ಒಟ್ಟು 4,57,163 ಜಾನುವಾರುಗಳಿದ್ದು, ಸದ್ಯ 4,74,050 ಡೋಜ್ ಲಸಿಕೆ ಲಭ್ಯವಿರುತ್ತದೆ. ಜಿಲ್ಲೆಯಲ್ಲಿ ಒಟ್ಟು 3,881 ಬ್ಲಾಕ್‌ಗಳನ್ನು ಮಾಡಲಾಗಿದೆ. ಇಲಾಖೆಯ ಹಾಗೂ ಇಲಾಖೇತರ ಸೇರಿ ಒಟ್ಟು 481 ಸಿಬ್ಬಂದಿಗಳು ಕಾರ್ಯನಿರ್ವಹಿಸಲಿದ್ದಾರೆ. ಲಸಿಕೆದಾರರು ಮನೆ ಬಾಗಿಲಿಗೆ ಭೇಟಿ ನೀಡಿ, ಜಾನುವಾರುಗಳಿಗೆ ಲಸಿಕೆ ಹಾಕಲಿದ್ದಾರೆ. ರೈತ-ಬಾಂಧವರು ಲಸಿಕಾ ಸಿಬ್ಬಂದಿಗಳಿಗೆ ಸಹಕರಿಸಿ, ತಪ್ಪದೇ ಜಾನುವಾರುಗಳಿಗೆ ಲಸಿಕೆ ಹಾಕಿಸಬೇಕೆಂದು ತಿಳಿಸಿದರು.

ಈ ಸಂದರ್ಭದಲ್ಲಿ ಕಾಲುಬಾಯಿ ರೋಗದ ಲಸಿಕಾ ಕಾರ್ಯಕ್ರಮದ ಪ್ರಚಾರ ಸಾಮಗ್ರಿಗಳನ್ನು ಬಿಡುಗಡೆ ಮಾಡಲಾಯಿತು. ಸಭೆಯಲ್ಲಿ ಜಂಟಿ ಕೃಷಿ ನಿರ್ದೇಶಕ ಲಕ್ಷ್ಮಣ ಕಳ್ಳೇನ್ನವರ, ಕೆ.ಎಂ.ಎಫ್‌ನ ಉಪ ವ್ಯವಸ್ಥಾಪಕ ಸಿದ್ದು ಜಾಡರ ಸೇರಿದಂತೆ ಜಿಲ್ಲಾ ನಿರ್ವಹಣಾ ಸಮಿತಿ ಸದಸ್ಯ ಅಧಿಕಾರಿಗಳು ಹಾಗೂ ಆಯಾ ತಾಲೂಕಿನ ಮುಖ್ಯ ಪಶುವೈದ್ಯಾಧಿಕಾರಿಗಳು ಉಪಸ್ಥಿತರಿದ್ದರು.

# ಸರಕಾರಿ ಹೊರಗುತ್ತಿಗೆ ನೌಕರರ ಸಂಘದ ಜಿಲ್ಲಾಧ್ಯಕ್ಷರ ಆಯ್ಕೆ



ಮಲ್ಲಮ್ಮ ನುಡಿ ವಾರ್ತೆ

ಬೀದರ:ಸರ್ಕಾರಿ ಹೊರಗುತ್ತಿಗೆ ಹೊರಗುತ್ತಿಗೆ ನೌಕರರ ಸಮಸ್ಯೆಗಳಿಗೆ ಸ್ಪಂದಿಸುವ ನಿಟ್ಟಿನಲ್ಲಿ ಸಮಸ್ಯೆ ಬಗೆಹರಿಸಲು ಪ್ರಮಾಣಿಕ ಪ್ರಯತ್ನ ಮಾಡಬೇಕು ಎಂದು ಸರ್ಕಾರಿ ಹೊರಗುತ್ತಿಗೆ ನೌಕರರ ಸಂಘದ ರಾಜ್ಯಾಧ್ಯಕ್ಷ ಸುಧಾಕರ ಅವರು ಆದೇಶಿಸಿದರು.

ನಗರದ ಗುರುನಾನಕ್ ಕಾಲೋನಿಯಲ್ಲಿ ವೈಷ್ಣವಿ ಕನ್ವೇಷನ್ ಸಭಾಂಗಣದಲ್ಲಿ ನಡೆದ ಹೊರಗುತ್ತಿಗೆ ನೌಕರರ ಸಂಘದ ಪದಾಧಿಕಾರಿಗಳ ಆಯ್ಕೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ರಾಜ್ಯದ ವಿವಿಧ ಇಲಾಖೆಯಲ್ಲಿ ಹಲವಾರು ವರ್ಷಗಳಿಂದ ಸಾವಿರಾರು ನೌಕರರು ಸೇವೆ ಸಲ್ಲಿಸುತ್ತಿದ್ದಾರೆ. ಅವರಿಗೆ ಯಾವುದೇ ರೀತಿಯ ಸಕಾಲಕ್ಕೆ ಸಹಾಯಧನ ಹಾಗೂ ಸೇವಾ ಭದ್ರತೆಯಿಲ್ಲ. ಮುಂಬರುವ ದಿನಗಳಲ್ಲಿ ನಾವೆಲ್ಲರೂ ಒಗ್ಗಟ್ಟಾಗುವ ಮೂಲಕ ಸಂಘಟನೆ ಬಲಿಷ್ಟ ಮಾಡುವುದರ ಜತೆಗೆ ಸರಕಾರದ ಮಟ್ಟದಲ್ಲಿ ನ್ಯಾಯ ಕೇಳೋಣ ಎಂದು ತಿಳಿಸಿದರು.

ಹೊರಗುತ್ತಿಗೆ ನೌಕರರ ಸಂಘದ ಜಿಲ್ಲಾಧ್ಯಕ್ಷ ಲಕ್ಷ್ಮಣ ರಾಠೋಡ ಮಾತನಾಡಿ, ಬೀದರ ಜಿಲ್ಲೆಯಲ್ಲಿ ನೌಕರರ ಸಂಘವು ಬಲಿಷ್ಠವಾಗಿ ಮಾಡಲು ಎಲ್ಲರೂ ಸಹಕರಿಸಬೇಕು ರಾಜ್ಯಾಧ್ಯಕ್ಷರು ನನಗೆ ಜಿಲ್ಲಾಧ್ಯಕ್ಷರಾಗಿ ನೇಮಕ ಮಾಡಿದಾರೆ ಅದನು ನಾನು ಅಧ್ಯಕ್ಷ ಸ್ಥಾನದ ಜವಾಬ್ದಾರಿ ವಹಿಸುತ್ತೇನೆ.

ಜಿಲ್ಲಾ ಘಟಕದ ಪದಾಧಿಕಾರಿಗಳನ್ನು ನೇಮಕ ಮಾಡಲಾಯಿತು. ಜಿಲ್ಲಾಧ್ಯಕ್ಷರಾಗಿ ಲಕ್ಷ್ಮಣ ರಾಠೋಡ, ಉಪಾಧ್ಯಕ್ಷರಾಗಿ ಶ್ರೀದೇವಿ, ಮಾಣಿಕ, ಸತೀಶ್ ಪಾಟೀಲ್, ಅನಿಲಕುಮಾರ, ಸಾಜಿದ, ಪ್ರಧಾನ ಕಾರ್ಯದರ್ಶಿಯಾಗಿ ಅವಿನಾಶ್, ಖಜಾಂಚಿ ಮಹಾದೇವ ಮಂಠಾಳೆ, ಸಂಘಟನಾ ಕಾರ್ಯದರ್ಶಿ ಲೋಕೇಶ್, ರೇಖಾ, ಹರಿದೇವ ಹಾಗೂ ತಾಲೂಕಿನ ಅಧ್ಯಕ್ಷರಾದ ಔರಾದ್ ಶಿವಕುಮಾರ್ ಲಾಧ, ಬೀದರ್ ಶಿವಕುಮಾರ್ ಸೇನಾ, ಬಸವಕಲ್ಯಾಣ ಜಗದೀಶ್ ಪಾಟೀಲ್ , ಹುಮನಾಬಾದ್ ಸಂದೀಪ್ , ಭಾಲ್ಕಿ ಅಮರ್ ಮಜಗೆ, ಸೇವೆ ಸಲ್ಲಿಸುತ್ತಿರುವ ಈ ಸಂದರ್ಭದಲ್ಲಿ 36 ಇಲಾಖೆಯ ನೂರಾರು ಸದಸ್ಯರು ಉಪಸ್ಥಿತರಿದ್ದರು.

## ನಾಯನೇಗಲಿಯಲ್ಲಿ ನಾಳೆ ಮಾರುತೇಶ್ವರ ಜಾತ್ರಾ ಮಹೋತ್ಸವ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಏ.17-ತಾಲೂಕಿನ ನಾಯನೇಗಲಿ ಗ್ರಾಮದಲ್ಲಿ ಏ.19 ಹಾಗೂ 20 ರಂದು ಮಾರುತೇಶ್ವರ ಜಾತ್ರಾ ಮಹೋತ್ಸವ ಜರುಗಲಿದೆ.

ಏ.19 ಶನಿವಾರ ಬೆಳಿಗ್ಗೆ 6 ಗಂಟೆಗೆ ಸುಪ್ರಭಾತ ಮತ್ತು ಪಂಚಾಮೃತ ಅಭಿಷೇಕ, ಮಧ್ಯಾಹ್ನ 12 ಘಂಟೆಗೆ ಕಳಸ ಹಾಗೂ ಬಾಳೆಕಂಬಗಳ ಮೆರವಣಿಗೆ ನಡೆಯಲಿದೆ. 1 ಗಂಟೆಗೆ ನೈವೇದ್ಯ ಹಾಗೂ ಪ್ರಸಾದ ಸಮರ್ಪಣೆ ನಡೆಯಲಿದ್ದು, ನಂತರ ಅನಂತರಾವ ಕುಲಕರ್ಣಿ ಅವರಿಂದ ಅನ್ನ ಸಂತರ್ಪಣೆ ಜರುಗಲಿದೆ.

ಏ.20 ಭಾನುವಾರ ಬೆಳಿಗ್ಗೆ 6 ಗಂಟೆಗೆ ದೇವಸ್ಥಾನದಲ್ಲಿ ಪಂಚಾಮೃತ ಅಭಿಷೇಕ, 11 ಗಂಟೆಗೆ ಹೊಂಡದ ಪೂಜೆ, ನಂತರ ಮಲ್ಲನಗೌಡ ಪಾಟೀಲ ಅವರಿಂದ ದಾಸೋಹ ಸೇವೆ ನಡೆಯುವುದು. ಮಧ್ಯಾಹ್ನ 1 ಗಂಟೆಗೆ ನಾಗಸಂಪಿಗೆಯ ದೇಶಪಾಂಡೆ ಬಂಧುಗಳಿಂದ ಮಹಾಪ್ರಸಾದ ಜರುಗುವುದು.

ಸಂಜೆ 7 ಗಂಟೆಗೆ ಮಾಓಕುಳಿ ಕಾರ್ಯಕ್ರಮ. ರಾತ್ರಿ 10.30 ಗಂಟೆಗೆ ಸ್ಥಳೀಯ ಮಾರುತೇಶ್ವರ ನಾಟ್ಯ ಸಂಘದವರಿಂದ 'ಮಾಂಗಲ್ಯ ಧರಿಸಿದರೂ ನಾ ನಿನ್ನ ಮಡದಿಯಾಗಲಿಲ್ಲ' ಎಂಬ ನಾಟಕ ಪ್ರದರ್ಶನಗೊಳ್ಳಲಿದೆ. ಸಂಸದ ಪಿ.ಸಿ.ಗದ್ದಿಗೌಡರ ನಾಟಕ ಉದ್ಘಾಟಿಸಲಿದ್ದು, ಹಲವಾರು ಜನಪ್ರದಿನಿಧಿಗಳು, ಗಣ್ಯರು ಭಾಗವಹಿಸುವರು ಎಂದು ಜಾತ್ರಾ ಮಹೋತ್ಸವ ಸಮಿತಿ ತಿಳಿಸಿದೆ.

# ನಾಳೆ ಜಮಖಂಡಿಯಲ್ಲಿ ಉದ್ಯೋಗ ಮೇಳ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಏ.17-ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ಹಾಗೂ ಜಮಖಂಡಿ ಚಿಗುರು ಶಿಕ್ಷಣ ಸಂಸ್ಥೆ ಸಹಯೋಗದಲ್ಲಿ ಎಪ್ರೀಲ್ 19 ರಂದು ಜಮಖಂಡಿ ನಗರದ ಬಸವ ಭವನದಲ್ಲಿ ಉದ್ಯೋಗ ಮೇಳ ಹಮ್ಮಿಕೊಳ್ಳಲಾಗಿದೆ. ಈ ಉದ್ಯೋಗ ಮೇಳದಲ್ಲಿ ಹಲವು ಖಾಸಗಿ ಕಂಪನಿಗಳು ಭಾಗವಹಿಸಿ ವಿವಿಧ ಹುದ್ದೆಗಳಿಗೆ ನೇಮಕಾತಿ ಮಾಡಿಕೊಳ್ಳಲಿದ್ದಾರೆ.

ಉದ್ಯೋಗ ಮೇಳದಲ್ಲಿ 19 ರಿಂದ 35 ವಯೋಮಿತಿಯಲ್ಲಿರುವ ಎಸ್.ಎಸ್.ಎಲ್.ಸಿ, ಪಿಯುಸಿ ಹಾಗೂ ಯಾವುದೇ ಪದವೀಧರರು ಭಾಗವಹಿಸಬಹುದಾಗಿದೆ. ಭಾಗವಹಿಸಲು ಇಚ್ಚಿಸುವ ಅಭ್ಯರ್ಥಿಗಳು ತಮ್ಮ ಬಯೋಡಾಟಾ ಮತ್ತು ಮೂಲ ಅಂಕ ಪಟ್ಟಿಗಳ ಝರಾಕ್ಸ್ ಪ್ರತಿಗಳೊಂದಿಗೆ ಭಾಗವಹಿಸಿ ಕಾರ್ಯಕ್ರಮದ ಸದುಪಯೋಗಪಡೆದುಕೊಳ್ಳುವಂತೆ ಜಿಲ್ಲಾ ಉದ್ಯೋಗಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕೆಕೆಆರ್‌ಡಿಬಿ ಇಂದ ಜಾಹೀರಾತು ಹಾಗೂ ಪತ್ರಕರ್ತರಿಗೆ ನಿವೇಶನಕ್ಕೆ ಜಮೀನು ಮಂಜೂರು ಮಾಡುವಂತೆ ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರಿಗೆ ಮನವಿ.



ಮಲ್ಲಮ್ಮ ನುಡಿ ವಾರ್ತೆ

ಬೀದರ್. ಏಪ್ರಿಲ್ 17 - ಕಲ್ಯಾಣ ಕರ್ನಾಟಕ ಅಭಿವೃದ್ಧಿ ಮಂಡಳಿಯಿಂದ 371 ಜೆ ಅಡಿಯಲ್ಲಿ ಈ ಭಾಗದ ಎಲ್ಲಾ ಪತ್ರಿಕೆಗಳಿಗೆ ತಿಂಗಳಿಗೆ ಎರಡು ಪುಟ ಜಾಹೀರಾತು ನೀಡಲು ಅಧ್ಯಕ್ಷರಿಗೆ ನಿರ್ದೇಶನ ನೀಡಬೇಕೆಂದು ಉಪಮುಖ್ಯಮಂತ್ರಿ ಸನ್ಮಾನ್ಯ ಡಿಕೆ ಶಿವಕುಮಾರ್ ಅವರಿಗೆ ಮನವಿ ಪತ್ರ ನೀಡಲಾಗಿದೆ.

ನಿನ್ನೆ ಬೀದರ್ ಗೆ ಆಗಮಿಸಿದ ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರಿಗೆ ಬೀದರ್ ನ ಏರ್ಪೋರ್ಟ್ ನಲ್ಲಿ ಭೇಟಿ ಮಾಡಿದ ಕರ್ನಾಟಕ ಕಾರ್ಯನಿರತ ದಿನಪತ್ರಿಕೆಗಳ ಸಂಪಾದಕರ ಸಂಘದ ಜಿಲ್ಲಾ ಘಟಕದ ವತಿಯಿಂದ ಮನವಿ ಪತ್ರ ನೀಡಲಾಯಿತು.

ಇದರ ಜೊತೆಗೆ ಪತ್ರಕರ್ತರಿಗೆ ಬೀದರ್‌ನಲ್ಲಿ ಒಂದೆಡೆ ಕಾಲೋನಿ ನಿರ್ಮಿಸಲು ಎರಡು ಎಕರೆ ಜಮೀನು ಮಂಜೂರು ಮಾಡಲು ಕ್ರಮ ಕೈಗೊಳ್ಳಬೇಕೆಂದು ಪ್ರತ್ಯೇಕವಾಗಿ ಮತ್ತೊಂದು ಮನವಿ ಪತ್ರ ನೀಡಲಾಗಿದೆ. ಕೆಕೆಆರ್‌ಡಿದಿಂದ ಜಾಹೀರಾತು ಪಡೆಯಲು ಈಗಾಗಲೇ ಕಲ್ಬುರ್ಗಿ ಎಲ್ಲಿ ಅಧ್ಯಕ್ಷ ಡಾಕ್ಟರ್ ಅಜಯ್ ಸಿಂಗ್ ಮತ್ತು ಕಾರ್ಯದರ್ಶಿ ಅವರನ್ನು ಭೇಟಿಯಾಗಿ ಮನವಿ ಪತ್ರ ನೀಡುವ ಕೆಲಸ ಮುಗಿದಿದೆ.

ಮನವಿ ಪತ್ರ ನೀಡಿದ ನಂತರ ನಿನ್ನೆಯ ಕಲ್ಬುರ್ಗಿ ಮತ್ತು ಬೀದರ್ ಮುಖ್ಯಮಂತ್ರಿಗಳ ಉಪಮುಖ್ಯಮಂತ್ರಿಗಳ ಸರ್ಕಾರಿ ಕಾರ್ಯಕ್ರಮದ ಜಾಹೀರಾತು ನೀಡಿಕೆಯಲ್ಲಿ ಅನ್ಯಾಯ ಮಾಡಲಾಗಿದೆ ನಮ್ಮಲ್ಲಿ ವಿಭಜನೆ ಮಾಡಿದ್ದಾರೆ ಇದರ ವಿರುದ್ಧ ಮುಂದಿನ ದಿನಗಳಲ್ಲಿ ತೀವ್ರವಾದ ಹೆಜ್ಜೆ ಇಡಲು ಬೀದರ್ ಕಲ್ಬುರ್ಗಿ ಮತ್ತಿತರ ಜಿಲ್ಲೆಯವರು ಏಕತೆಯಿಂದ. ಹೋರಾಟ ಮಾಡಬೇಕಾಗಿದೆ. ಬೀದರ್ ಕರ್ನಾಟಕ ಕಾರ್ಯಕರ್ತ ದಿನಪತ್ರಿಕೆಯ ಸಂಪಾದಕರ ಸಂಘದ ಘಟಕದ ವತಿಯಿಂದ ಅಧ್ಯಕ್ಷ ವಿಜಯಕುಮಾರ್ ಪಾಟೀಲ್ ರವರು ಉಪಮುಖ್ಯಮಂತ್ರಿ ಸನ್ಮಾನ್ಯ ಡಿಕೆ ಶಿವಕುಮಾರ್ ಅವರಿಗೆ ಮನವಿ ಪತ್ರ ಸಲ್ಲಿಸಿ ತಮಗೆ ಆಗುತ್ತಿರುವ ಅನ್ಯಾಯ ಉಪಮುಖ್ಯಮಂತ್ರಿಗಳಿಗೆ ಮನವರಿಕೆ ಮಾಡಲಾಯಿತು.

ಈ ಸಂದರ್ಭದಲ್ಲಿ ಬೀದರ್ ಸಂಸದರಾದ ಜನಪ್ರಿಯ ನಾಯಕ ಸಾಗರ್ ಖಂಡ್ರೆ ಹಾಜರಿದ್ದು ನಮಗೆ ಉಪಮುಖ್ಯಮಂತ್ರಿಗೆ ಮನವಿ ಪತ್ರ ನೀಡಲು ಸಹಕರಿಸಿದರು.

ಈ ಸಮಯದಲ್ಲಿ ನಮ್ಮ ಸಂಘದ ರಾಜ್ಯಪರಿಷತ್ ಸದಸ್ಯರಾದ ಮಲ್ಲಿಕಾರ್ಜುನ್ ಬಿರಾದರ್.

ಹಿರಿಯ ಪತ್ರಕರ್ತರು ಸೈಯದ್ ಹಾಸನ್ ಖಾದ್ರಿ. ಅಬ್ದುಲ್ ಖಾದರ್ ಖದೀರ್. ಪ್ರದೀಪ್ ಬ್ರದರ್. ರಾಮಚಂದ್ರ ಭೋಸಲೆ. ಪ್ರಜಾವಾಣಿ ಪತ್ರಿಕೆ ವರದಿಗಾರ ಶಶಿಕಾಂತ್ . ವಿಜಯ ಕರ್ನಾಟಕ ಪತ್ರಿಕೆ ವರದಿಗಾರ ವಿಜಯಕುಮಾರ್. ಸುನಿಲ್ ಕುಲಕರ್ಣಿ. ಸ್ವಾಮಿ ದಾಸ್. ನಂದು ಕುಮಾರ್. ಜೈಕುಮಾರ್. ಸುಧಾರಾಣಿ ಜೈಕುಮಾರ್. ಶರತ್ ಘಂಟಿ. ಸೇರಿದಂತೆ ಅನೇಕರು ಹಾರಿದ್ದು ಮತ್ತು ಮನೆ ಪತ್ರ ಪತ್ರಕ್ಕೆ ಸಹಿ ಮಾಡಿದ್ದಾರೆ.

# ಸಂವಿಧಾನ ನಮ್ಮೆಲ್ಲರ ಆಸ್ತಿ : ವಾಲೀಕಾರ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಏ.17-ಮಾನವೀಯ ಧರ್ಮದ ಸಂವಿಧಾನ ನಮ್ಮೆಲ್ಲರ ಆಸ್ತಿಯಾಗಿದ್ದು, ಡಾ.ಬಿ.ಆರ್. ಅಂಬೇಡ್ಕರ ಅವರ ಸಂದೇಶಗಳನ್ನು ಜೀವನದಲ್ಲಿ ಅಳವಡಿಸಿಕೊಂಡು ನಡೆದರೆ ಅದುವೇ ನಮಗೆ ದೊಡ್ಡ ಆಸ್ತಿಯಾಗುತ್ತದೆ ಎಂದು ಹೆಸ್ಕಾಂ ನಿವೃತ್ತ ಅಧಿಕಾರಿ ನಿಜಪ್ಪ ವಾಲೀಕಾರ ಹೇಳಿದರು.

ಸಮೀಪದ ಬೇವೂರ ಗ್ರಾಮದಲ್ಲಿ ಅಂಬೇಡ್ಕರ ಯುವಕ ಸಂಘದ ಆಶ್ರಯದಲ್ಲಿ ಹಮ್ಮಿಕೊಂಡ ಡಾ॥ ಬಿ.ಆರ್.ಅಂಬೇಡ್ಕರ್ ಅವರ 138ನೇ ಜಯಂತ್ಯೋತ್ಸವಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಯುವ ಜನಾಂಗ ಜಾತಿ, ಧರ್ಮದ ಹೆಸರಿನಲ್ಲಿ ಕಿತ್ತಾಡದೇ ಶಿಕ್ಷಣವಂತರಾಗಿ, ಸಂಘಟಿತರಾಗಿ ಸಮಾಜದ ಏಳಿಗೆಗೆ ಶ್ರಮಿಸಬೇಕು ಎಂದರು.

ನಿವೃತ್ತ ಶಿಕ್ಷಕ ಗ್ಯಾನಪ್ಪ ವಾಲೀಕಾರ ಮುಖ್ಯ ಅತಿಥಿಗಳಾಗಿ ಮಾತನಾಡಿ, ಶಿಕ್ಷಣ, ಸಂಘಟನೆ, ಹೋರಾಟ ಎಂಬ ಮೂರು ತತ್ವಗಳು ನಮ್ಮೆಲ್ಲರ ಜೀವನದಲ್ಲಿ ಮುಖ್ಯವಾಗಿವೆ. ಕಾನೂನು ಪಾಲನೆ ಮಾಡುತ್ತಾ ಜೀವನ ಸಾಗಿಸಿದರೆ ಅದುವೇ ಧರ್ಮ ಪಾಲನೆ ಎಂದು ಹೇಳಿದರು.

ನಿಂಗಬಸಪ್ಪ ವಾಲೀಕಾರ, ಶಿವರುದ್ರಪ್ಪ ಚಲವಾದಿ, ಶೇಖಪ್ಪ ಚಲವಾದಿ, ಗುಂಡಪ್ಪ ಚಲವಾದಿ, ಸಿದ್ದು ಬೇವೂರ, ಮಲ್ಲಿಕಾರ್ಜುನ ಹೊಸಮನಿ, ಪರಸಪ್ಪ ಚಲವಾದಿ, ಗ್ಯಾನಪ್ಪ ಶಂಕ್ರಪ್ಪ ಚಲವಾದಿ, ಗ್ಯಾನಪ್ಪ ಅರ್ಜುನಪ್ಪ ಚಲವಾದಿ, ಸಂತೋಷ ವಾಡಕರ, ನಿವೃತ್ತ ಯೋಧರಾದ ಮರಿಯಪ್ಪ ಚಲವಾದಿ, ಕಂಬಪ್ಪ ಚಲವಾದಿ, ಅರ್ಜುನಪ್ಪ ಚಲವಾದಿ, ಸಂಗಪ್ಪ ಗುಂಡಪ್ಪ ಚಲವಾದಿ ಅತಿಥಿಗಳಾಗಿದ್ದರು.

ಕಾರ್ಯಕ್ರಮಕ್ಕೂ ಮುನ್ನ ಗ್ರಾಮದ ಪ್ರಮುಖ ಬೀದಿಗಳಲ್ಲಿ ಡಾ॥ ಬಾಬಾಸಾಹೇಬ ಅಂಬೇಡ್ಕರ್ ಅವರ ಭಾವಚಿತ್ರದ ಭವ್ಯ ಮೆರವಣಿಗೆ ನಡೆಯಿತು. ಗ್ರಾಮೀಣ ಪೊಲೀಸ್ ಠಾಣೆಯ ಸಿಬ್ಬಂದಿ ಸೂಕ್ತ ಪೊಲೀಸ್ ಬಂದೋಬಸ್ತ್ ವ್ಯವಸ್ಥೆ ಮಾಡಿದ್ದರು.

## ಪಿಕೆಪಿಎಸ್ ಅಧ್ಯಕ್ಷರಾಗಿ ಗುರುಸಂಗಪ್ಪ, ಉಪಾಧ್ಯಕ್ಷರಾಗಿ ಯಮನಪ್ಪ ಅವಿರೋಧ ಆಯ್ಕೆ



ಮಲ್ಲಮ್ಮ ನುಡಿ ವಾರ್ತೆ

ತಾಳಿಕೋಟಿ:ಪಟ್ಟಣದ ವಿವಿಧೋದ್ದೇಶ ಪ್ರಾಥಮಿಕ ಗ್ರಾಮೀಣ ಕೃಷಿ ಸಹಕಾರಿ ಸಂಘದ ಅಧ್ಯಕ್ಷರಾಗಿ ಗುರುಸಂಗಪ್ಪ ತ.ಕಶೆಟ್ಟಿ, ಉಪಾಧ್ಯಕ್ಷರಾಗಿ ಯಮನಪ್ಪ ದೇ.ಬರದೇನಾಳ ಅವಿರೋಧವಾಗಿ ಆಯ್ಕೆಯಾಗಿದ್ದಾರೆ. ಗುರುವಾರ ಸಂಘದ ಸಭಾ ಭವನದಲ್ಲಿ ಅಧ್ಯಕ್ಷ, ಉಪಾಧ್ಯಕ್ಷ ಸ್ಥಾನಕ್ಕೆ ನಡೆದ ಚುನಾವಣೆಯಲ್ಲಿ ಎರಡೂ ಸ್ಥಾನಕ್ಕೆ ಒಂದೊಂದು ನಾಮ ಪತ್ರ ಮಾತ್ರ ಸಲ್ಲಿಕೆಯಾಗಿದ್ದರಿಂದ ಅವಿರೋಧ ಆಯ್ಕೆಯನ್ನು ಚುನಾವಣಾಧಿಕಾರಿ ವಿಜಯಕುಮಾರ ಉತ್ನಾಳ ಘೋಷಿಸಿದರು. ಸಹಾಯಕರಾಗಿ ಸಂಘದ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಶಂಕರಗೌಡ ಪಾಟೀಲ, ಸಿಬ್ಬಂದಿ ಪ್ರವೀಣ ಪಾಟೀಲ ಹಾಗೂ ಪ್ರಕಾಶ ಸಾಸಬಾಳ ಕಾರ್ಯನಿರ್ವಹಿಸಿದರು. ನಿರ್ದೇಶಕರಾದ ಡಿ.ವಿ.ಪಾಟೀಲ, ದಸ್ತಗೀರಸಾಬ ಎಮ್. ಕೆಂಭಾವಿ, ಗೋವಿಂದಸಿಂಗ್ ವಿ. ಮೂಲಿಮನಿ, ಬಸನಗೌಡ ವಿ. ಮಾಲಿಪಾಟೀಲ, ಶರಣಪ್ಪಬಿ.ಇಲಕಲ್, ನಾಗಪ್ಪ ಗು.ಗೊಟಗುಣಕಿ, ಶ್ರೀಮತಿ ಸರೋಜಾ ಚ.ದೇಸಾಯಿ, ಜ್ಯೋತಿ ದಿ. ಹಜೇರಿ, ಮಡಿವಾಳಪ್ಪ ಭೀ. ಕಟ್ಟಿಮನಿ, ಬಸವರಾಜ ಮ.ಕುಂಬಾರ ಭಾಗವಹಿಸಿದ್ದರು. ವಿಜಯೋತ್ಸವ: ಸಂಘದ ನೂತನ ಅಧ್ಯಕ್ಷರಾಗಿ ಆಯ್ಕೆಗೊಂಡ ಗುರುಸಂಗಪ್ಪ ಕಶೆಟ್ಟಿ ಹಾಗೂ ಯಮನಪ್ಪ ಬರದೇನಾಳ ತಮ್ಮ ಬೆಂಬಲಿಗರೊಂದಿಗೆ ವಿಜಯೋತ್ಸವ ಆಚರಿಸಿದರು. ಈ ವೇಳೆ ಪುರಸಭೆ ಮಾಜಿ ಉಪಾಧ್ಯಕ್ಷ ಮಾಸೂಮಸಾಬ ಕೆಂಭಾವಿ, ಚನ್ನಬಸ್ಸು ದೇಸಾಯಿ, ಬಿ.ಎಂ.ಪಾಟೀಲ, ಅಣ್ಣಪ್ಪ ಜಗತಾಪ, ಶರಣಗೌಡ ಗೊಟಗುಣಕಿ, ಮಹಿಬೂಬ ಕೆಂಭಾವಿ, ರಾಮು ಜಗತಾಪ, ನಿಂಗಣ್ಣ ಕುಂಟೋಜಿ, ಅಶೋಕ ಚಿನಗುಡಿ ಸಂಜೀವಪ್ಪ ಬರದೇನಾಳ, ಈರಣ್ಣ ಕಲಬುರ್ಗಿ, ಕಾಶಿನಾಥ ಪಾಟೀಲ, ರಾಮಣ್ಣ ಕಟ್ಟಿಮನಿ, ತನ್ವೀರ್ ಮನಗೂಳಿ ಮತ್ತಿತರರು ಇದ್ದರು.

## ವಿವಿಧ ಜಯಂತಿ: ಏ.23 ಪೂರ್ವಭಾವಿ ಸಭೆ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಏ.17-ಜಿಲ್ಲೆಯಲ್ಲಿ ಮೇ 2 ರಂದು ಆಚರಿಸಲ್ಪಡುವ ಶಂಕರಾಚಾರ್ಯ ಜಯಂತಿ, 4 ರಂದು ಆಚರಿಸಲ್ಪಡುವ ಭಗೀರಥ ಜಯಂತಿಗಳನ್ನು ಆಚರಿಸಲು ಪೂರ್ವಭಾವಿಯಾಗಿ ಚರ್ಚಿಸಲು ಎಪ್ರೀಲ್ 23 ರಂದು ಬೆಳಿಗ್ಗೆ 11.30 ಗಂಟೆಗೆ ಹಾಗೂ ಮೇ 5 ರಂದು ಆಚರಿಸಲ್ಪಡುವ ಶಿವಶರಣೆ ಹೆಮರೆಡ್ಡಿ ಮಲ್ಲಮ್ಮ ಜಯಂತಿ ಆಚರಿಸಲು ಪೂರ್ವಭಾವಿಯಾಗಿ ಚರ್ಚಿಸಲು ಎಪ್ರೀಲ್ 23 ರಂದು ಮಧ್ಯಾಹ್ನ 12 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಪೂರ್ವಸಿದ್ದತಾ ಸಭೆ ಹಮ್ಮಿಕೊಳ್ಳಲಾಗಿದೆ ಎಂದು ಅಪರ ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜೆಸ್ಕಾಂ: ಏ.19ರಂದು ಗ್ರಾಹಕರ ಕುಂದು-ಕೊರತೆ ನಿವಾರಣಾ ಸಭೆ

ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ:ಜೇಸ್ಕಾಂ ಕಾರ್ಯ ಮತ್ತು ಪಾಲನೆ ವಿಭಾಗ ವ್ಯಾಪ್ತಿಯ ಹುಮನಾಬಾದ, ಮನ್ನಾಏಖೇಳ್ಳಿ ಹಾಗೂ ಬಸವಕಲ್ಯಾಣ, ಉಪ-ವಿಭಾಗಗಳಲ್ಲಿ ಈ ಕೆಳಕಂಡ ದಿನಾಂಕಗಳಂದು ಗ್ರಾಹಕರ ಕುಂದು-ಕೊರತೆ ನಿವಾರಣಾ ಸಭೆಯನ್ನು ಕಾರ್ಯನಿರ್ವಾಹಕ ಇಂಜಿನಿಯರರು (ವಿ), ಗು.ವಿ.ಸ.ಕಂ.ನಿ ಹುಮನಾಬಾದ ರವರ ಅಧ್ಯಕ್ಷತೆಯಲ್ಲಿ ಏರ್ಪಡಿಸಲಾಗಿದೆ. ಜನ ಸಂಪರ್ಕ ಸಭೆ ನಡೆಸುವ ಸ್ಥಳ: ಹುಮನಾಬಾದ ಉಪ-ವಿಭಾಗದ ಹಳ್ಳಿಖೇಡ(ಬಿ) ಶಾಖೆ ಕಛೇರಿಯಲ್ಲಿ ಏ.19 ರಂದು ಬೆಳಿಗ್ಗೆ 11 ಗಂಟೆಯಿಂಚಿದ 1 ಗಂಟೆಯವರೆಗೆ, ಮನ್ನಾಏಖ್ಖೇಳಿ ಉಪ-ವಿಭಾಗದ ನಿರ್ಭಾ ಶಾಖೆ ಕಛೇರಿಯಲ್ಲಿ ಏ.19 ರಂದು ಬೆಳಿಗ್ಗೆ 11 ಗಂಟೆಯಿಂಚಿದ 1 ಗಂಟೆಯವರೆಗೆ, ಬಸವಕಲ್ಯಾಣ ಉಪ-ವಿಭಾಗದ ಮುಡಬಿ ಶಾಖೆ ಕಛೇರಿಯಲ್ಲಿ ಏ. 19 ರಂದು ಬೆಳಿಗ್ಗೆ 11 ಗಂಟಯಿಂಚಿದ 1 ಗಂಟೆಯವರೆಗೆ ಸಭೆ ನಡೆಸಲಾಗುವುದು, ಈ ಸಭೆಯಲ್ಲಿ ಸಾರ್ವಜನಿಕರು ಹಾಗೂ ಗು.ವಿ.ಸ.ಕಂ.ನಿ., ಗ್ರಾಹಕರು ಉಪಸ್ಥಿತರಿರವರು, ಹಾಗೂ ಕುಂದು ಕೊರತೆಯ ಅರ್ಜಿಗಳನ್ನು ಸಲ್ಲಿಸಲು ಹುಮನಾಬಾದನ (ವಿ) ಕಾ ಮತ್ತು ಪಾ ವಿಭಾಗ ಗು.ವಿ.ಸ.ಕಂ.ನಿ., ಕಾರ್ಯನಿರ್ವಾಹಕ ಅಭಿಯಂತರರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜೆಸ್ಕಾಂ: ಏಪ್ರಿಲ್ 19ರಂದು ಗ್ರಾಹಕರ ಕುಂದುಕೊರತೆ ಸಂವಾದ ಸಭೆ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಏಪ್ರಿಲ್ 17-: ಇಲ್ಲಿನ ಜೆಸ್ಕಾಂ ಕಾರ್ಯ ಮತ್ತು ಪಾಲನೆ ನಗರ ಉಪ ವಿಭಾಗ-2ರ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರ ಕಚೇರಿಯಲ್ಲಿ ಏಪ್ರಿಲ್ 19ರ ಬೆಳಿಗ್ಗೆ 11ಗಂಟೆಯಿಂದ ಮಧ್ಯಾಹ್ನ 1ಗಂಟೆಯವರೆಗೆ ಗ್ರಾಹಕರ ಕುಂದುಕೊರತೆಯ ಸಂವಾದ ಸಭೆಯನ್ನು ಹಮ್ಮಿಕೊಳ್ಳಲಾಗಿದ್ದು, ಗ್ರಾಹಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಯಶಸ್ವಿಗೊಳಿಸಬೇಕೆಂದು ಜೆಸ್ಕಾಂ ಕಾರ್ಯ ಮತ್ತು ಪಾಲನೆ ನಗರ ಉಪ ವಿಭಾಗ-2ರ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಕೋರಿದ್ದಾರೆ.

ಸಭೆಯಲ್ಲಿ ಗ್ರಾಹಕರ ವಿದ್ಯುತ್ ಸಮಸ್ಯೆಗಳನ್ನು ಬಗೆಹರಿಸಿಕೊಳ್ಳಬಹುದಾಗಿದೆ ಎಂದು ಜೆಸ್ಕಾಂ ಕಾರ್ಯ ಮತ್ತು ಪಾಲನೆ ನಗರ ಉಪ ವಿಭಾಗ-2ರ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪತ್ರಕರ್ತರ ಮೇಲೆ ಹಲ್ಲೆ ಖಂಡನಿಯ: ಡಾ. ಎಸ್.ಎಸ್. ಮೈನಾಳೆ



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ: ಏಪ್ರಿಲ್ 15 ರಂದು ರಾತ್ರಿ 9 ಗಂಟೆ ಸುಮಾರಿಗೆ ಪತ್ರಕರ್ತ ರವಿ ತಂದೆ ಬಸವರಾಜ ಭೂಸಂಡೆ ಅವರು ಮನ್ನಾಯಿಖೇಳ್ಳಿಯಿಂದ ಅವರ ವಾಸಸ್ಥಳವಾದ ಚಿದ್ರಿಗೆ ಆಗಮಿಸುವ ಸಂದರ್ಭದಲ್ಲಿ ಅಲ್ಲಿಯ ಜನರ ಹಾಗೂ ಅರಣ್ಯ ಅಧಿಕಾರಿಗಳ ಮದ್ಯ ತಕರಾರು ನಡಿದ್ದೆ, ನಾನು ಪತ್ರಕರ್ತ ಎಂದರು ಕೂಡ ಅವರ ಮಾತಿಗೆ ಒಪ್ಪದೆ ಅವರ ಮೇಲೆ ಹಲ್ಲೆ ಮಾಡಿರುವ ಅಧಿಕಾರಿಗಳು ಕ್ರಮ ಖಂಡನಿಯ ಎಂದು ಹಿರಿಯ ಪತ್ರಕರ್ತ ಡಾ.ಎಸ್.ಎಸ್. ಮೈನಾಳೆ ಖಂಡಿಸಿದರು.

ಈ ಸಂಬಂಧ ಕಾರ್ಯನಿರತ ಪತ್ರಕರ್ತರ ಸಂಘ(ರಿ) ಕಮಲನಗರ ತಾಲ್ಲೂಕು ಘಟಕ

ಪದಾಧಿಕಾರಿಗಳು ಗುರುವಾರ ಪ್ರತಿಭಟನೆ ನಡೆಸಿ, ಮುಖ್ಯ ಮಂತ್ರಿ ಅವರಿಗೆ ಬರೆದ ಮನವಿ ಪತ್ರವನ್ನು ಕಮಲನಗರ ಉಪತಹಶೀಲ್ದಾರ ಗೋಪಾಲಕೃಷ್ಣ ಅವರ ಮೂಲಕ ಸಲ್ಲಿಸಿದರು.

ಈ ವೇಳೆ ಮಾತಾಡಿ, ಪತ್ರಕರ್ತರು ಇಂದು ನಿಷ್ಪಕ್ಷಪಾತ ವರದಿ ಮಾಡಿವುದು ಕಷ್ಟ ವಾಗುತ್ತಿದೆ. ಪತ್ರಕರ್ತ ರವಿ ಭೂಸಂಡೆ ಅವರ ಮೇಲೆ ಅಮಾನವಿಯವಾಗಿ ಹಲ್ಲೆ ಮಾಡಿರುವ ನಾಲ್ಕು ಜನ ಅರಣ್ಯ ಇಲಾಖೆಯ ಪೊಲೀಸ್ ಅಧಿಕಾರಿ ಮತ್ತು ಸಿಬ್ಬಂದಿಗಳನ್ನು ನ್ಯಾಯಾಂಗ ಬಂಧನಕ್ಕೆ ಒಪ್ಪಿಸುವುದರ ಜೊತೆಗೆ ಅವರನ್ನು ಸೇವೆಯಿಂದ ವಜಾ ಮಾಡುವಂತೆ ಒತ್ತಾಯಿಸಿ ಪತ್ರಕರ್ತರಿಗೆ ರಕ್ಷಣೆ ಬಗ್ಗೆ ಕ್ರಮಗೊಳ್ಳಬೇಕು ಎಂದು ತಿಳಿಸಿದ್ದರು. ಈ ಸಂದರ್ಭದಲ್ಲಿ ಬಿ.ಬಿ.ಹೆಡೆ, ರಾಜಶೇಖರ ಅಜ್ಜ, ಬಾಲಾಜಿ ಫಿರಂಗೆ, ಮಹಾದು ಬರ್ಗೆ, ರವಿ ವಲ್ಲೇಪುರೆ, ಮೊಯಿನ್ ಅತನೂರೆ, ಪರಮೇಶ ರಾಂಪುರೆ, ಲಕ್ಷ್ಮಣ ರಾಠೋಡ್, ನಿತೀನ ಶಿವಣಕರ್, ಲಕ್ಷ್ಮಣ ರಾಠೋಡ್ ಮುರ್ಕಿ, ಸಂಗಮೇಶ್ವರ ಮುರ್ಕೆ, ಸಂತೋಷ ದಿಂಡೆ ಹಾಗೂ ಸದಸ್ಯರು ಇದ್ದರು.

"ಮಾಧ್ಯಮ ಕ್ಷೇತ್ರ ಪ್ರಜಾಪ್ರಭುತ್ವದ ನಾಲ್ಕನೇ ಅಂಗ ಎಂದು ಹೇಳುವಾಗ ಪತ್ರಕರ್ತರಿಗೆ ಈ ರೀತಿ ಹಲ್ಲೆಯಾದರೆ ಸಾಮಾನ್ಯರ ಗತಿ ಏನು?. ಎಂಬ ಪ್ರಶ್ನೆ ಕಾಡತೊಡಗಿದೆ. ಸಮಾಜದ ಅಂಕು ಡೊಂಕುಗಳು ತಿದ್ದುವ ನಮಗೆ ರಕ್ಷಣೆ ಇಲ್ಲವಾದರೆ, ನಾವು ನಿರ್ಭಿತಕರಾಗಿ ಹಾಗೂ ನಿಸ್ಪಕ್ಷಪಾತವಾಗಿ ಕೆಲಸ ಮಾಡಲು ಹೇಗೆ..! ಸಾಧ್ಯ? ಅಸಾಧ್ಯವಾಗಿದೆ. ಹೀಗಾಗಿ, ಕೂಡಲೇ ಸಂಬಂಧಪಟ್ಟ ಅಧಿಕಾರಿಗಳು ಘಟನೆಗೆ ಸಂಬಂಧಪಟ್ಟವರ ವಿರುದ್ಧ ಕ್ರಮ ತೆಗೆದು ಕೊಳ್ಳಬೇಕು."

-ಮನೋಜಕುಮಾರ ಹಿರೇಮಠ,
ಹಿರಿಯ ಪತ್ರಕರ್ತರು ಕಮಲನಗರ.///

